ಸಂಪುಟ: 14 Volume | ಸಂಚಿಕೆ: 06 Issue | ಪುಟಗಳು 08 Pages | ಮಂಗಳವಾರ 07 ಏಪ್ರಿಲ್ 2026 | ₹4 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

**ಬೆಳಗು**

ಕಲಿಕೆ ವಿಷಯ ಬರೀ ತಿಳುವಳಿಕೆಯ ಮಟ್ಟದಲ್ಲಿ ಉಳಿಯದೆ ಹೆಚ್ಚು ಅರ್ಥಪೂರ್ಣ ಮಾಡಬಲ್ಲ ಮನುಷ್ಯನೊಬ್ಬ ಬೇಕು. ಆತನೇ ಕೋಚ್ ಅಥವಾ ಗುರು.

–ಪಿ. ಲಂಕೇಶ್

ಅಂತ್ಯ ಕಂಡ ಪಾಲಿಕೆ ನೌಕರರ ಮುಷ್ಕರ 6

ಆಲಿಕಲ್ಲು ಮಳೆಯಿಂದ ರೈತರ ಬೆಳೆಗಳು ಹಾನಿ 7

ಎರಡೂ ಕ್ಷೇತ್ರದಲ್ಲೂ ಗೆದ್ದು ತೋರಿಸ್ತೀವಿ 8



ಗುರುಮಠಕಲ್ ಪದವಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಡಾ. ಪುರುಷೋತ್ತಮ ಜೋಷಿ ಹಾಗೂ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಮಲ್ಲಮ್ಮ ನುಡಿ ಪತ್ರಿಕೆಯ ಯುಗಾದಿ ಸಂಚಿಕೆ ಪತ್ರಿಕೆಗೆ ಶುಭ ಕೋರಿದರು.

## ಗೇಮ್ ಬದಲಿಸಿದ ಆ ಬಾಲ್..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬೆಂಗಳೂರಿನಲ್ಲಿ ಸಿಎಸ್‌ಕೆ ವಿರುದ್ಧ ನಡೆದ ಪಂದ್ಯದಲ್ಲಿ ಐಪಿಎಲ್ ಹಾಲಿ ಚಾಂಪಿಯನ್‌ಗಳ ಅದ್ಭುತ ಪ್ರದರ್ಶನ ಜೊತೆಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ 43 ರನ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಆರ್‌ಸಿಬಿ ಸಿಕ್ಸರ್ ಮಷಿನ್ ಖ್ಯಾತಿಯ ಆಸ್ಟ್ರೇಲಿಯನ್ ಆಟಗಾರ ಟಿಮ್ ಡೇವಿಡ್ ಅವರು 25 ಎಸೆತಗಳಲ್ಲಿ 70 ರನ್‌ಗಳಿಸಿ ಎಂಟು ಸಿಕ್ಸರ್‌ಗಳನ್ನು ಬಾರಿಸಿದ್ದಾರೆ. ಬೃಹತ್ ಹಿಟ್‌ಗಳ ಇನ್ನಿಂಗ್ಸ್‌ನಲ್ಲಿ, ಟಿಮ್‌ಡೇವಿಡ್ ಹೊಡೆದ ಒಂದು ಶಾಟ್ ಚೆಂಡನ್ನು ನೇರವಾಗಿ ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಚಾವಣಿಯ ಮೇಲೆ ಬಿದ್ದಿತು. ಇದು 106 ಮೀಟರ್ ಸ್ಟ್ರೈಕ್ ಜೊತೆಗೆ ಸಿಎಸ್ ಕೆಯನ್ನು ಉಸಿರುಗಟ್ಟಿಸಿತ್ತು.



ಈ ಒಂದು ಬಾಲ್ ಪಂದ್ಯದ ದಿಕ್ಕನ್ನೇ ಬದಲಾಯಿಸಿತು. ಅನ್ಶುಲ್ ಕಾಂಬೋಜ್ ಮಾಡಿದ ಒಂದು ಸಣ್ಣ ತಪ್ಪು ಚೆನ್ನೈ ಸೂಪರ್ ಕಿಂಗ್ಸ್‌ಗೆ ಭಾರೀ ಹೊಡೆತ ನೀಡಿತು. ಇದಾದ ಬಳಿಕ ಚೆನ್ನೈ ತಂಡಕ್ಕೆ ಟಿಮ್ ಡೇವಿಡ್ ಡೆವಿಲ್ ರೂಪದಲ್ಲಿ ಕಾಡಿದ್ದು ವಿಶೇಷ.

## ಪಿಎಂ ವಿರುದ್ಧ ಸಿದ್ದರಾಮಯ್ಯ ಗರಂ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಲೋಕಸಭಾ ಕ್ಷೇತ್ರ ಪುನರ್ವಿಂಗಡಣೆ (ಡಿಲಿಮಿಟೇಶನ್) ಪ್ರಸ್ತಾವನೆ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ವಿರುದ್ಧ ತೀವ್ರವಾಗಿ ವಾಗ್ದಾಳಿ ನಡೆಸಿದ್ದು, ಇದು ಒಕ್ಕೂಟ ವ್ಯವಸ್ಥೆಯ ಮೇಲಿನ ಸ್ಪಷ್ಟ ದಾಳಿ ಎಂದು ಕಿಡಿ–ಕಾರಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಸಿಎಂ, ಡಿಲಿಮಿಟೇಶನ್ ವಿಚಾರವು ಕೇವಲ ಸೀಟುಗಳ ಸಂಖ್ಯೆಯ ಹೆಚ್ಚಳದ ಬಗ್ಗೆ ಅಲ್ಲ, ಅವು ಹೇಗೆ ಹಂಚಿಕೆ ಆಗುತ್ತವೆ ಮತ್ತು ಯಾವ ರಾಜ್ಯಗಳಿಗೆ ಹೆಚ್ಚು ಲಾಭವಾಗುತ್ತದೆ ಎಂಬುದರ ಬಗ್ಗೆಯಾಗಿದೆ. ಪ್ರಸ್ತಾವಿತ ಪುನರ್ವಿಂಗಡಣೆಯ ಪ್ರಕಾರ ಎಲ್ಲಾ ರಾಜ್ಯಗಳಿಗೂ ಸೀಟುಗಳು ಹೆಚ್ಚಾದರೂ, ಅದರ ಪ್ರಮಾಣ ಬಿಜೆಪಿಗೆ



ಬಲವಾದ ಉತ್ತರ ಭಾರತದ ರಾಜ್ಯಗಳಿಗೆ ಹೆಚ್ಚು ಅನುಕೂಲವಾಗುತ್ತದೆ ಎಂದು ಆರೋಪಿಸಿದ್ದಾರೆ. ಡಿಲಿಮಿಟೇಶನ್ ನಲ್ಲಿ ಉತ್ತರ ಪ್ರದೇಶದ ಲೋಕಸಭಾ ಸೀಟುಗಳು 80ರಿಂದ 120ಕ್ಕೆ ಏರಿಕೆಯಾಗುವ ಸಾಧ್ಯತೆ ಇದ್ದು, ಮಹಾರಾಷ್ಟ್ರದಲ್ಲಿ 48ರಿಂದ 72, ಬಿಹಾರದಲ್ಲಿ 40ರಿಂದ 60, ಮಧ್ಯ ಪ್ರದೇಶದಲ್ಲಿ 29ರಿಂದ 43–44, ರಾಜಸ್ಥಾನದಲ್ಲಿ 25ರಿಂದ 37–38 ಮತ್ತು ಗುಜರಾತಿನಲ್ಲಿ 26ರಿಂದ 39ಕ್ಕೆ ಏರಿಕೆ ಕಾಣಬಹುದು ಎಂದಿದ್ದಾರೆ.

### 6 ಎಕರೆ ಕಬ್ಬು ಭಸ್ಮ, ಕೇಸ್ ದಾಖಲು

**ಜೇವರ್ಗಿ:** ತಾಲೂಕಿನ ಶಖಾಪೂರ ಎಸ್.ಎ. ಗ್ರಾಮದ ಚಂದ್ರಶೇಖರ ತೊನಸಳ್ಳಿ ಹಾಗೂ ಸಿದ್ರಾಮಪ್ಪ ತೊನಸಳ್ಳಿ ಅವರ ಹೊಲಕ್ಕೆ ವಿದ್ಯುತ್ ಶಾರ್ಟ್ ಸರ್ಕಿಟ್ ನಿಂದ 6 ಎಕರೆ ಕಬ್ಬು ಹಾಗೂ 6 ಜಮೀನಿನಲ್ಲಿ ಬೆಳೆದ ಸೀತಾಫಲ ಬೆಳೆ ಸುಟ್ಟು ಭಸ್ಮವಾಗಿದೆ. ಅಂದಾಜು 2 16 ಲಕ್ಷದಷ್ಟು ನಷ್ಟವಾಗಿದೆ ಎಂದು ರೈತರು ತಿಳಿಸಿದ್ದಾರೆ. ಚಂದ್ರಶೇಖರ ಹಾಗೂ ಸಿದ್ರಾಮಪ್ಪ ಅವರ 6 ಎಕರೆಯಲ್ಲಿ ಬೆಳೆದ ಕಬ್ಬು ಹಾಗೂ 6 ಎಕರೆ ಸೀತಾಫಲ ಬೆಳೆ ಬೆಂಕಿಯ ಕೆನ್ನಾಲಿಗೆಗೆ ಸಂಪೂರ್ಣ ಸುಟ್ಟು ಹೋಗಿದೆ. ಈ ಕುರಿತು ಜೇವರ್ಗಿ ಠಾಣೆಯಲ್ಲಿ ದೂರು ದಾಖಲಾಗಿದೆ.

### ಸಿದ್ದರಾಮಯ್ಯ ಪೂರ್ಣಾವಧಿ ಸಿಎಂ

**ಮೈಸೂರು:** ಇನ್ನೂ ಎರಡು ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಆಗಿ ಇರುತ್ತಾರೆ ಎಂದು ಗೃಹಸಚಿವ ಜಿ.ಪರಮೇಶ್ವರ್ ಹೇಳಿದ್ದಾರೆ. ಮೈಸೂರಿನಲ್ಲಿ ಮಾಧ್ಯಮಗಳ ಜೊತೆ ಅವರು ಮಾತನಾಡಿ, 2023ರಲ್ಲಿ ಸಿದ್ದರಾಮಯ್ಯ ಸಿಎಂ ಎಂದು ಪಕ್ಷದ ಹೈಕಮಾಂಡ್ ಘೋಷಣೆ ಮಾಡಿತ್ತು. ಅದರ ಅವಧಿ 2028ರ ವರೆಗೆ ಇದೆ. ಹೈಕಮಾಂಡ್ ನೀವೇ 5 ವರ್ಷ ಸಿಎಂ ಎಂದು ಪ್ರತ್ಯೇಕವಾಗಿ ಸ್ಪಷ್ಟೀಕರಣ ಕೊಡುವ ಅವಶ್ಯಕತೆ ಇಲ್ಲ. ಈ ಬಾರಿಯೂ ಪೂರ್ಣಾವಧಿ ಮುಗಿಸಬೇಕು ತಾನೇ ಎಂದಿದ್ದಾರೆ.

### ಅಡುಗೆ ಅನಿಲ ದರ ಹೆಚ್ಚಳ; ಆರೋಪ

**ಕಲಬುರಗಿ:** ವಾಣಿಜ್ಯ ಬಳಕೆಯ ಅಡುಗೆ ಅನಿಲ ಮತ್ತು ಜೀವ ರಕ್ಷಕ ಔಷಧಿಗಳ ಬೆಲೆಯನ್ನು ಹೆಚ್ಚಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಸೋಷಿಯಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಎಸ್ಯುಸಿಐ) (ಕಮ್ಯುನಿಸ್ಟ್) ಪಕ್ಷದ ವಾಡಿ ಸ್ಥಳೀಯ ಕಾರ್ಯದರ್ಶಿ ಶರಣು ಹೇರೂರ್ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಕೇಂದ್ರಸರ್ಕಾರವು ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರನ್ನು ರಕ್ಷಿಸುವ ಬದಲು, 19 ಕೆಜಿ ತೂಕದ ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಬೆಲೆಯನ್ನು25 ದಿನ ಅಂತರದಲ್ಲಿ ಮತ್ತೆ 218 ರೂ.ಹೆಚ್ಚಿಸಿದೆ ಎಂದು ಆಗ್ರಹಿಸಿದ್ದಾರೆ.

# ಭರ್ಜರಿ ಮಾತಿಗಿಲ್ಲ ಸರ್ಜರಿ

## ದಾವಣಗೆರೆ ದಕ್ಷಿಣ, ಬಾಗಲಕೋಟೆ ಕ್ಷೇತ್ರದ ಉಪಚುನಾವಣೆ ಕಾವು | ರಾಷ್ಟ್ರೀಯ ಪಕ್ಷಗಳ ಭರಾಟೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ/ದಾವಣಗೆರೆ

ದಾವಣಗೆರೆ ದಕ್ಷಿಣ, ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ದಿನೇ ದಿನೆ ಕಾವೇರತೊಡಗಿದೆ. ಚುನಾವಣಾ ಪ್ರಚಾರ ಕಣದಲ್ಲಿರುವ ಬಿಜೆಪಿ ಹಾಗೂ ಕಾಂಗ್ರೆಸ್ ಪಕ್ಷದ ನಾಯಕರು ಪರಸ್ಪರ ಟೀಕಾಪ್ರಹಾರ ನಡೆಸಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದು, ಅವರ ಪುತ್ರ ವಿಜಯೇಂದ್ರ ಅವರು ಅದಕ್ಕೆ ದನಿಗೂಡಿಸಿದ್ದಾರೆ. ಏತನಮಧ್ಯೆ ಸಚಿವ ಜಮೀರ್ ಅಹ್ಮದ್ ಸ್ಟಾರ್ ಪ್ರಚಾರಕರಾಗಿ ಹೊಮ್ಮಿರುವುದು ಗಮನ ಸೆಳೆದಿದೆ.

**ಊಟ ನಿದ್ದೆ ಬಿಟ್ಟಿದ್ದಾರೆ:** ಅಹಿಂದ ಹೆಸರು ಹೇಳಿಕೊಂಡು ಅಧಿಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಹಿಂದುಳಿದ ಸಮುದಾಯಗಳನ್ನು ಯಾವೊತ್ತೋ ಮರೆತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಊಟ ಮತ್ತು ನಿದ್ರೆ ಬಿಟ್ಟು ಪ್ರಚಾರದಲ್ಲಿ ತೊಡಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಲೇವಡಿ ಮಾಡಿದ್ದಾರೆ.

**ಗೆಲುವಿಗೆ ಕೈ ತಂತ್ರ:** ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಹೇಗಾದರೂ ಮಾಡಿ ಗೆಲ್ಲಲೇಬೇಕೆಂದು ಹಟಕ್ಕೆ ಬಿದ್ದಿರುವ ಕಾಂಗ್ರೆಸ್ ನಾಯಕರು ಪ್ರತಿಪಕ್ಷಗಳ ಹೇಳಿಕೆಗೆ ತಿರುಗೇಟು ನೀಡುತ್ತಲೇ ಎರಡೂ ಕೇಂದ್ರಗಳಲ್ಲಿ ಠಿಕಾಣಿ ಹೂಡಿದ್ದಾರೆ. ಸಿಎಂ ಬಾಗಲಕೋಟೆಯಲ್ಲಿರುವುದು ಟೀಕೆಗೆ ಕಾರಣವಾಗಿದೆ.





**ರೋಚಕ ಘಟ್ಟಕ್ಕೆ ಕಣ**

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಅಖಾಡ ರೋಚಕ ಘಟ್ಟಕ್ಕೆ ತಲುಪಿದೆ. ಕ್ಷೇತ್ರದಲ್ಲಿ ಮುಸ್ಲಿಮರಿಗೆ ಟಿಕೆಟ್ ಕೊಡಬೇಕು ಎಂಬ ಬೇಡಿಕೆಯಿಂದಾಗಿ ರಣಕಣ ರಾಜ್ಯದ ಗಮನ ಸೆಳೆದಿತ್ತು. 70 ರಿಂದ 80 ಸಾವಿರದಷ್ಟಿರುವ ಮುಸ್ಲಿಂ ಮತದಾರರ ಒಂದು ಗುಂಪು ಬಂಡಾಯ ಸಾರಿತ್ತು. ಸಾದಿಕ್ ಸೇರಿ ಮುಸ್ಲಿಂ ಬಂಡಾಯವೆದ್ದಿದ್ದರು. ನಾವು ರಾಜಕೀಯ ಕುಸ್ತಿಗೆ ಸಿದ್ಧ ಎಂದು ತೊಡೆತಟ್ಟಿದ್ದರು. ಇದೀಗ ಶಾಂತರಾಗಿರುವುದು ಗಮನ ಸೆಳೆದಿದೆ.

ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ಗೆಲುವನ್ನು ಖಚಿತಪಡಿಸುವ ಜವಾಬ್ದಾರಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನನಗೆ ನೀಡಿದ್ದಾರೆ. ನಾನು ಅದನ್ನು ಯಶಸ್ವಿಯಾಗಿ ನಿರ್ವಹಿಸಿ, ಸಮರ್ಥ ಶಾಮನೂರು ಮಲ್ಲಿಕಾರ್ಜುನ ಅವರು ತಮ್ಮ ಮೊದಲ ಚುನಾವಣೆಯಲ್ಲಿ ಸುಲಭವಾಗಿ ಗೆಲ್ಲುವಂತೆ ಮಾಡುತ್ತೇನೆ.

–ಜಮೀರ್ ಅಹ್ಮದ್ ಖಾನ್, ವಸತಿ ಇಲಾಖೆ ಸಚಿವ

### ಬಿಜೆಪಿ ನೂತನ ತಂತ್ರ ಪ್ರಯೋಗ

ಕ್ಷೇತ್ರ ಅಸ್ತಿತ್ವಕ್ಕೆ ಬಂದಾಗಿನಿಂದ ಒಮ್ಮೆಯೂ ಗೆಲ್ಲದ ಬಿಜೆಪಿ ಹೊಸ ಪ್ರಯೋಗಕ್ಕೆ ಕೈಹಾಕಿದೆ. ಸಾಮಾನ್ಯ ಕಾರ್ಯಕರ್ತನಿಗೆ ಟಿಕೆಟ್ ನೀಡಿರುವುದನ್ನು ವಿಶೇಷ. ಆದರೆ, ಬಿಜೆಪಿ ಮಾತ್ರ ವಾಲ್ಮೀಕಿ ಸಮುದಾಯದ ಸಾಮಾನ್ಯ ಕಾರ್ಯಕರ್ತನಿಗೆ ಟಿಕೆಟ್ ನೀಡುವ ಮೂಲಕ ಅಹಿಂದ ಮತಗಳನ್ನು ಸೆಳೆಯುವ ಲೆಕ್ಕಾಚಾರದಲ್ಲಿದೆ. ಕುಟುಂಬ ರಾಜಕಾರಣ, ಮುಸ್ಲಿಂ ಬಂಡಾಯ ಕೆಲಸ ಮಾಡಿದರೆ ಬಿಜೆಪಿ ಬಲ ಹೆಚ್ಚಬಹುದು.

**ಸಿಂಹನ ವಿರುದ್ಧ ಎಫ್‌ಐಆರ್**

ಬಾಗಲಕೋಟೆ ಚುನಾವಣಾ ಕಣಕ್ಕೆ ಬಿಜೆಪಿ ಅಭ್ಯರ್ಥಿ ಚರಂತಿ ಮಠ ಅವರ ಪರ ಪ್ರಚಾರ ಭಾಷಣಕ್ಕೆ ಹೋಗಿದ್ದ ಮಾಜಿ ಸಂಸದ ಪ್ರತಾಪ ಸಿಂಹ, ಮಾತಿನ ಭರಾಟೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಆಕ್ಷೇಪಾರ್ಹ ಪದಗಳನ್ನು ಬಳಸಿದ್ದಾರೆ. ಇದರಿಂದ ಅವರ ವಿರುದ್ಧ ಚುನಾವಣಾ ಕಾನೂನು ಉಲ್ಲಂಘಟನೆ ಆಗಿದೆ ಎಂದು ಅಧಿಕಾರಿಗಳಿ ಎಫ್‌ಐಆರ್ ದಾಖಲಿಸಿದ್ದಾರೆ.

## ಪಿಎಂ ಮೋದಿಯಿಂದಲೇ ಪಟ್ರೋಲ್ ಲಭ್ಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಪದೇ ಪದೇ ಮೋದಿ ಅವರನ್ನು ಟೀಕಿಸುವ ಸಿಎಂ, ಡಿಕೆಶಿ ಕೊಂಚ ಯೋಚಿಸಬೇಕು. ಇಡೀ ವಿಶ್ವಹೊತ್ತಿ ಉರಿಯುತ್ತಿದ್ದರೂ ಮೋದಿ ಅವರಿಂದಲೇ ನಮಗೆ ಗ್ಯಾಸ್, ಪಟ್ರೋಲ್ ಸಿಗುತ್ತಿದೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಅವರು ಹೇಳಿದ್ದಾರೆ.

ಡಿಕೆ.ಶಿವಕುಮಾರ್ ಅವರು ಪರೋಕ್ಷವಾಗಿ ಬಿಜೆಪಿ ಪಕ್ಷಕ್ಕೆ ಸಹಾಯ ಮಾಡುತ್ತಿದ್ದಾರೆಂದು ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಒಳಗಿನ ಅಸಮಾಧಾನ, ನಾಯಕತ್ವದ ಭಿನ್ನಾಭಿಪ್ರಾಯಗಳು ಮತ್ತು ಅಭ್ಯರ್ಥಿ ಆಯ್ಕೆ ಪ್ರಕ್ರಿಯೆಯಲ್ಲಿ ಉಂಟಾಗಿರುವ ಗೊಂದಲಗಳು ಉಪಚುನಾವಣೆಗಳಲ್ಲಿ ಪಕ್ಷ–ಕ್ಕೆ ಹಿನ್ನಡೆಯುಂಟು ಮಾಡುತ್ತದೆ. ವಿಶೇಷವಾಗಿ ಡಿ.ಕೆ. ಶಿವಕುಮಾರ್ ತೆಗೆದುಕೊಳ್ಳುತ್ತಿರುವ ಕೆಲವು ನಿರ್ಧಾರಗಳು ಪಕ್ಷದ ಕಾರ್ಯಕರ್ತರಲ್ಲೇ ಅಸಮಾಧಾನ ಹುಟ್ಟಿಸುತ್ತಿದ್ದು, ಇದರಿಂದ ಮತಗಳ ವಿಭಜನೆ ಸಂಭವಿಸುವ ಸಾಧ್ಯತೆ ಇದೆ.

## ಕೈಗಾರಿಕೆ ಪ್ರಗತಿಗೆ ಸಿದ್ದು ಸರ್ಕಾರವೇ ಅಡ್ಡಿ

• ಮಲ್ಲಮ್ಮ ನುಡಿ ವಾರ್ತೆ ದಾವಣಗೆರೆ



ಉಕ್ಕು ಮತ್ತು ಭಾರೀ ಕೈಗಾರಿಕೆಗಳ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕರ್ನಾಟಕದಲ್ಲಿ ಕೈಗಾರಿಕೆಗಳ ಅಭಿವೃದ್ಧಿ ಮತ್ತು ಕಾರ್ಖಾನೆಗಳ ಪುನರುಜ್ಜೀವನಕ್ಕೆ ರಾಜ್ಯ ಸರ್ಕಾರ ಅಡ್ಡಿಯಾಗುತ್ತಿದೆ ಎಂದು ಆರೋಪಿಸಿದ್ದಾರೆ.

ದಾವಣಗೆರೆ ದಕ್ಷಿಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪರ ಚುನಾವಣಾ ಪ್ರಚಾರದಲ್ಲಿ ಭಾಗಿಯಾಗಿದ್ದ ವೇಳೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಸಿದ್ಧವಾಗಿದ್ದರೂ ಸಿದ್ದರಾಮಯ್ಯ ಸರ್ಕಾರ ಯಾವುದೇ ರೀತಿಯ ಸಹಕಾರ ನೀಡುತ್ತಿಲ್ಲ ಎಂದು ಹೇಳಿದರು. ಕೇಂದ್ರ ಸರ್ಕಾರವು ಕುದುರೆಮುಖ ಕಬ್ಬಿಣದ ಅದಿರು ಕಂಪನಿ ಲಿಮಿಟೆಡ್‌ಗೆ 1,700 ಕೋಟಿ ರೂಪಾಯಿ ಮೂಲಧನ ನೀಡಿದರೂ, ರಾಜ್ಯ ಸರ್ಕಾರ ಯಾವುದೇ ಕಾರಣವಿಲ್ಲದೆ ಕಂಪನಿಯನ್ನು ಮುಳುಗಿಸಲು ಯೋಜಿಸಿದೆ ಎಂದು ಆರೋಪಿಸಿದ್ದಾರೆ.

## ಬೆಳ್ಳಂ ಬೆಳಗ್ಗೆ ಪಾಲಿಕೆ ಜೆಸಿಬಿ ಘರ್ಜನೆ..!

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಇಲ್ಲಿ ಬೆಳ್ಳಂಬೆಳಗ್ಗೆ ಮಹಾನಗರ ಪಾಲಿಕೆ ಜೆಸಿಬಿ ಗರ್ಜಿಸಿ ಅತಿಕ್ರಮಣ ತೆರವು ಕಾರ್ಯಾಚರಣೆ ನಡೆಸಿದೆ. ಅತೌಲಾ ಸರ್ಕಲ್‌ನಿಂದ ಜುಮ್ಮಾ ಮಸೀದಿ ರಸ್ತೆಯವರೆಗೆ ಇರುವ ಪ್ರಮುಖ ರಸ್ತೆಯಲ್ಲಿ ಕಾರ್ಯಾಚರಣೆ ನಡೆಸಿ, ವಾಹನಸಂಚಾರ ಅಡಚಣೆ ಉಂಟುಮಾಡುತ್ತಿದ್ದ ಅನಧಿಕೃತ ಕಟ್ಟಡದ ಅತಿಕ್ರಮಣಗಳನ್ನು ತೆರವುಗೊಳಿಸುವ ಉದ್ದೇಶದಿಂದ ಈ ಕಾರ್ಯಾಚರಣೆಯನ್ನು ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಲಕಿ ಅವರ ಮಾರ್ಗದರ್ಶನದಲ್ಲಿ ನಡೆಸಲಾಯಿತು.

**ನೋಟಿಸ್‌ಗೂ ಕೇರ್ ಮಾಡಿರಲಿಲ್ಲ..!**

ನಗರವನ್ನು ಸ್ವಚ್ಛ ಮತ್ತು ಸುವ್ಯವಸ್ಥಿತವಾಗಿಡುವ ಉದ್ದೇಶದಿಂದ ಮುಂದಿನ ದಿನಗಳಲ್ಲಿ ನಗರದ ಇತರ ಭಾಗಗಳಲ್ಲಿಯೂ ಇಂತಹ ಕಾರ್ಯಾಚರಣೆಗಳನ್ನು ಕೈಗೊಳ್ಳಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಂಗಡಿ ಮಾಲೀಕರಿಗೆ ಮುಂಚಿತವಾಗಿ ನೋಟಿಸ್ ನೀಡಿ, ಅತಿಕ್ರಮಣ ತೆರವುಗೊಳಿಸಲು ಸೂಚಿಸಲಾಗಿತ್ತು. ನಿಗದಿತ ಅವಧಿಯಲ್ಲಿ ಅನೇಕರು ಕ್ರಮ ಕೈಗೊಳ್ಳದ ಹಿನ್ನೆಲೆ, ಸ್ವತಃ ಕಾರ್ಯಾಚರಣೆಗೆ ಅಧಿಕಾರಿಗಳು ಮುಂದಾಗಿದ್ದಾರೆ.





ನಗರದ ಸಮಗ್ರ ಅಭಿವೃದ್ಧಿಗಾಗಿ ಮತ್ತು ಸಂಚಾರ ಸುಗಮಗೊಳಿಸಲು ಇಂತಹ ಕ್ರಮಗಳು ಅನಿವಾರ್ಯವೆಂದು ತಿಳಿಸಿದ್ದಾರೆ. ನಗರದಲ್ಲಿ ಶಿಸ್ತಿನ ಜೊತೆಗೆ ಮೂಲಸೌಕರ್ಯ ಅಭಿವೃದ್ಧಿಗೆ ಇದು ಸಹಾಯಕವಾಗಲಿದೆ. ಕಾರ್ಯಾಚರಣೆ ವೇಳೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಸಿಬ್ಬಂದಿ ಮತ್ತು ಪಾಲಿಕೆ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

–ವಿಜಯಕುಮಾರ್ ಮೆಕ್ಕಳಕಿ, ಪಾಲಿಕೆ ಆಯುಕ್ತ

## ಹಿಂದಿ ಅಂಕ: ಪುನರ್‌ಪರಿಶೀಲನೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಇಂದು (6.4.26) ರಂದು ನನ್ನ ಗೃಹ ಕಛೇರಿಗೆ ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಂಘದ ಜಿಲ್ಲಾಧ್ಯಾಕ್ಷರು ಹುಮನಾಬಾದ ತಾಲೂಕಿನ ತಾಲೂಕಾ ಅಧ್ಯಕ್ಷರು ಹಾಗೂ ಎಲ್ಲಾ ನಿರ್ದೇಶಕರು ಆಗಮಿಸಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅಂಕಗಳನ್ನು ಕ್ರೂಡಿಕರಿಸುವಾಗ ತೃತೀಯ ಭಾಷೆ ಹಿಂದಿಯನ್ನು ಪರಿಗಣಿಸದೆ ಇರುವ ನಿರ್ಧಾರವನ್ನು ಪುನರ್ ಪರಿಶಿಲಿಸಿ ಹಿಂದಿನ ಪದ್ಧತಿಯೆ ಮುಂದುವರೆಸುವಂತೆ ಮನವಿ ಮಾಡಿಕೊಂಡಿದ್ದಾರೆ.

ಎಸ್.ಎಸ್.ಎಲ್.ಸಿ ಪರೀಕ್ಷೆಯ ಅಂಕಗಳನ್ನು 625ಕ್ಕೆ ಬದಲಾಗಿ 525 ಅಂಕಗಳಿಗೆ ಇಳಿಕೆ ಮಾಡಲಾಗಿದೆ. ತೃತೀಯ ಭಾಷೆಯಾದ ಹಿಂದಿಯ ಅಂಕಗಳಿಗೆ ಕೋಕ್ ನೀಡಲಾಗಿದ್ದು, ಅಂಕ ಪಟ್ಟಿಯಲ್ಲಿ ಗ್ರೇಡ್ ಎಂದು ನಮೂದಿಸಲಾಗುತ್ತದೆ. ಆದ್ದರಿಂದ ರಾಜ್ಯದಲ್ಲಿ ಇದುವರೆಗೂ ಹಿಂದಿ ಅಭ್ಯಾಸ ಮಾಡಿಕೊಂಡು ಬಂದಿರುವ ವಿದ್ಯಾರ್ಥಿಗಳು ಗೊಂದಲದಲ್ಲಿದ್ದು, ಅವರ ಭವಿಶ್ಯದ ಅತಂಕ್ಕೆ ಒಳಗಾಗಿದ್ದಾರೆ. ಜೊತೆಗೆ ಪ್ರೌಢ ಶಾಲಾ ಹಿಂದಿ ಶಿಕ್ಷಕರು ಕೂಡ ತುಂಬಾ ಆತಂಕಕ್ಕೆ ಒಳಗಾಗಿದ್ದು ಅವರ ವೃತ್ತಿಗೆ ಧಕ್ಕೆ ಬಾರದಂತೆ ಇವಾಗ ತೆಗೆದುಕೊಂಡ ಗ್ರೇಡ್ ನಿರ್ಧಾರವನ್ನು ಕೈಬಿಟ್ಟು ಅಂಕಗಳನ್ನು ಪರಿಗಣಿಸುವಂತೆ ಪುನರ್ ಪರಿಶಿಲಿಸಲು ಸರ್ಕಾರದ ಮೇಲೆ ಒತ್ತಡ ಹೇರುವಂತೆ ವಿಧಾನ ಪರಿಷತ್ ಸದಸ್ಯರಾದ ಸನ್ಮಾನ್ಯ ಡಾ. ಚಂದ್ರಶೇಖರ ಬಿ. ಪಾಟೀಲ್ ರವರಿಗೆ ಮನವಿ ಮಾಡಿಕೊಂಡಿದ್ದಾರೆ.



**ನಿರ್ದೇಶಕರು, ಗಣ್ಯರ ಹಾಜರು**

ಕರ್ನಾಟಕ ರಾಜ್ಯ ಪ್ರೌಢ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಾಕ್ಷರಾದ ಶೇಖ ಮೆಹಬೂಬ್ ಪಟೇಲ್, ತಾಲೂಕಾ ಅಧ್ಯಕ್ಷರಾದ ಆನಂದ ಶಿವನಾಯಕ, ಕಾರ್ಯದರ್ಶಿಯಾದ ಶ್ರೀಮತಿ ಸಾರಿಕಾ ಗಂಗಾ, ಶ್ರೀ ಮನೋಜ ಪಾಟೀಲ್, ಅಬ್ದುಲ್ ಸಾಬ್ ತಾಂಬೆ, ಸೈಯದ್ ಕಲೀಮ್, ನಂದಕುಮಾರ್ ಮರೂರ, ಸೋಮನಾಥ ಹಾಗೂ ಎಲ್ಲಾ ನಿರ್ದೇಶಕರು ಹಾಜರಿದ್ದರು.

**ಪಿಯುಸಿವರೆಗಿನ ಗಂಡು ಮಕ್ಕಳಿಗೂ ಉಚಿತ ಪ್ರಯಾಣ ನೀಡಲಾಗುವುದು ಎಂಬ ಶೀರ್ಷಿಕೆ ಅಡಿಯಲ್ಲಿ ವರದಿಯಾಗಿರುವ ಸುದ್ದಿ ಸತ್ಯಕ್ಕೆ ದೂರವಾಗಿದೆ: ಬೆಂಗಳೂರು ಸಾರಿಗೆ**

40ನೇ ಪತ್ರಕರ್ತರ ಸಮ್ಮೇಳನ: ಲೋಗೋ ಬಿಡುಗಡೆ

# ಬರುವ ಪತ್ರಕರ್ತರಿಗೆ ಸಾರಿಗೆ ವ್ಯವಸ್ಥೆ ಅಚ್ಚುಕಟ್ಟಾಗಿರಲಿ: ಶಿವಾನಂದ ತಗಡೂರು




- ಮಲ್ಲಮ್ಮ ನುಡಿ ವಾರ್ತೆ, ಬೀದರ

40ನೇ ರಾಜ್ಯಮಟ್ಟದ ಕಾರ್ಯನಿರತ ಪತ್ರಕರ್ತರ ಸಮ್ಮೇಳನದಲ್ಲಿ ಭಾಗವಹಿಸಲು ಬೀದರ ನಗರಕ್ಕೆ ಆಗಮಿಸುವ ಪತ್ರಕರ್ತರಿಗೆ ಅನುಕೂಲವಾಗಲು ಸಾರಿಗೆ ಸಮಿತಿ ವತಿಯಿಂದ ಲೋಗೋ ಬಿಡುಗಡೆ ಮಾಡಿದ್ದು ಸಂತಸ ತಂದಿದೆ. ಇದೊಂದು ವಿನೂತನ ಪ್ರಯೋಗವಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಜರುಗಿದ ಸಾರಿಗೆ ಸಮಿತಿಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸುಮಾರು 20 ವರ್ಷಗಳ ನಂತರ ಬೀದರನಲ್ಲಿ ಪತ್ರಕರ್ತರ ಸಮ್ಮೇಳನ ಜರುಗುತ್ತಿದೆ. ವಿವಿಧ ಜಿಲ್ಲೆಗಳಿಂದ ಆಗಮಿಸುವ ಪತ್ರಕರ್ತರಿಗೆ ಜಿಲ್ಲಾಧ್ಯಕ್ಷರ ಮಾರ್ಗದರ್ಶನದಲ್ಲಿ ಸಾರಿಗೆ ವ್ಯವಸ್ಥೆ ಅಚ್ಚುಕಟ್ಟಾಗಿ ಮಾಡಬೇಕೆಂದು ಸಲಹೆ ನೀಡಿದರು. ಯಾವ ವಸತಿ ಸ್ಥಳಕ್ಕೆ ಯಾವ ಬಸ್ ತೆಗೆದುಕೊಂಡು ಹೋಗಬೇಕೆಂದು ಮೊದಲೇ ನಿಗದಿಗೊಳಿಸಬೇಕು. ನಂತರ ವಸತಿ ಸ್ಥಳದಿಂದ ಸಮ್ಮೇಳನ ನಡೆಯುವ ಸ್ಥಳಕ್ಕೆ ಕರೆದುಕೊಂಡು ಹೋಗುವ ವ್ಯವಸ್ಥೆ ಸಮಿತಿ ವತಿಯಿಂದ ಚಾಚೂತಪ್ಪದೇ ಮಾಡಬೇಕೆಂದು ಪ್ರತಿಪಾದಿಸಿದರು. ಪತ್ರಕರ್ತರ ಸಾಂಘಿಕ ಶಕ್ತಿ ಸಮ್ಮೇಳನದ ಯಶಸ್ವಿ ಮೂಲಕ ತೋರಿಸಬೇಕಾಗಿದೆ. ಸಮ್ಮೇಳನಕ್ಕೆ ಸಿಎಂ, ಡಿಸಿಎಂ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹಿಂಖಾನ್ ಸೇರಿದಂತೆ ಹಲವು ಮಂತ್ರಿಗಳು ಆಗಮಿಸುತಿದ್ದು, ಸಮ್ಮೇಳನವನ್ನು ರಾಜ್ಯಕ್ಕೆ ಮಾದರಿಯಾಗುವ ರೀತಿಯಲ್ಲಿ ಯಶಸ್ವಿ ಮಾಡಿ ತೋರಿಸುವ ಜವಾಬ್ದಾರಿ ಎಲ್ಲಾ ಸಮಿತಿಗಳ ಮೇಲಿದೆ ಎಂದರು.

ಸಭೀಕರಿಗೂ ಸ್ವಾಗತ ಕೋರಿ ಪ್ರಾಸ್ತಾವಿಕವಾಗಿ ಮಾತನಾಡಿದ ಸಾರಿಗೆ ಸಮಿತಿಯ ಪ್ರಧಾನ ಸಂಚಾಲಕ ಪೃಥ್ವಿರಾಜ್ ಎಸ್. ಮಾತನಾಡಿ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ವಿಮಾನ ನಿಲ್ದಾಣಗಳ ಮೂಲಕ ಆಗಮಿಸುವ ಪತ್ರಕರ್ತರಿಗೆ ಸೂಕ್ತ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ಕಲ್ಯಾಣ ನಾಡಿಗೆ ಆಗಮಿಸುವ ಪತ್ರಕರ್ತ ಆಗಮನವೇ ನಮಗೆ ಪ್ರಾಣ ಜೀವಾಳವಾದ್ದರಿಂದ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

ಸಾರಿಗೆ ಸಮಿತಿ ವತಿಯಿಂದ ಲೋಗೋ ಬಿಡುಗಡೆ ಮಾಡುವ ಸಂದರ್ಭದಲ್ಲಿ ಸಂಘದ ಜಿಲ್ಲಾಧ್ಯಕ್ಷರಾದ ಆನಂದ ದೇವಪ್ಪ, ಮಾಜಿ ಅಧ್ಯಕ್ಷ ಬಸವರಾಜ ಕಾಮಶೆಟ್ಟಿ, ಅಶೋಕಕುಮಾರ ಕರಂಜಿ, ಮಾಜಿ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ಸಾರಿಗೆ ಸಮಿತಿಯ ಸಂಚಾಲಕ ಸುನೀಲಕುಮಾರ ಕುಲಕರ್ಣಿ, ಸಹ ಸಂಚಾಲಕ ಸುನೀಲ ಚಿಲ್ಲರ್ಗಿ, ಪ್ರಮುಖರಾದ ಮಾಣಿಕೇಶ ಪಾಟೀಲ, ಅನೀಲ ಪಾಟೀಲ, ರಿಯಾಜಪಾಶಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅಖಂಡ ಹರಿನಾಮ ಸಪ್ತಾಹ

# ಮನಸ್ಸಿನ ನೆಮ್ಮದಿಗೆ ಹರಿನಾಮವೇ ಮದ್ದು: ರಾಜೇಂದ್ರ ಮಹಾರಾಜರು



- ವರದಿ:ಪರಮೇಶ ರಾಂಪುರೆ,
- ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ಇಂದಿನ ಜಂಜಾಟದ ಬದುಕಿನಲ್ಲಿ ಮನುಷ್ಯನಿಗೆ ನಿಜವಾದ ಶಾಂತಿ, ನೆಮ್ಮದಿ ಮತ್ತು ಆನಂದ ಸಿಗುವ ಏಕೈಕ ಸ್ಥಳವೆಂದರೆ ಅದು ಹರಿನಾಮ ಸಪ್ತಾಹದಂತಹ ಪುಣ್ಯ ಕಾರ್ಯಕ್ರಮಗಳಲ್ಲಿ ಮಾತ್ರ. ಮನಸ್ಸಿನ ನೆಮ್ಮದಿಗೆ ಹರಿನಾಮವೇ ಮದ್ದು ಎಂದು ಖ್ಯಾತ ಕೀರ್ತನಕಾರರಾದ ಶ್ರೀ ಹ.ಭ.ಪ. ರಾಜೇಂದ್ರ ಮಹಾರಾಜರು ಅಭಿಪ್ರಾಯ ಪಟ್ಟರು.

ತಾಲೂಕಿನ ಹುಲಸೂರ(ಖೇಡ) ಗ್ರಾಮದಲ್ಲಿ ಹನುಮಾನ ಜಯಂತಿ ನಿಮಿತ್ತ ಹಮ್ಮಿಕೊಳ್ಳಲಾದ 20ನೇ ವರ್ಷದ ಅಖಂಡ ಹರಿನಾಮ ಸಪ್ತಾಹ ಹಾಗೂ ಜ್ಞಾನೇಶ್ವರಿ ಪಾರಾಯಣ ಸೋಹಳವು ಕಾರ್ಯಕ್ರಮದಲ್ಲಿ ರವಿವಾರ ಕೀರ್ತನೆ ನೀಡಿದರು.

ಭಗವಂತನ ನಾಮಸ್ಮರಣೆಯಿಂದ ಮನಸ್ಸು ಪವಿತ್ರಗೊಂಡು ಜೀವನದಲ್ಲಿ ಸನ್ಮಾರ್ಗ ಕಾಣಲು ಸಾಧ್ಯವಾಗುತ್ತದೆ,

ಎಲ್ಲರೂ ಇಂತಹ ಧಾರ್ಮಿಕ ಕಾರ್ಯಕ್ರಮ ದಲ್ಲಿ ಸೇರಿ ನಿಮ್ಮ ಜೀವನವನ್ನು ನೆಮ್ಮದಿ ಮಾರ್ಗಕ್ಕೆ ಕೊಂಡೊಯೋಬಹುದು ಎಂದು ತಿಳಿಸಿದರು.

**ಕಾರ್ಯಕ್ರಮದ ಮುಖ್ಯಾಂಶಗಳು**

"ಏ, 2 ರಿಂದ ಏಪ್ರಿಲ್ 10, 2026 ರವರೆಗೆ. ಸ್ಥಳ: ಹನುಮಾನ್ ಮಂದಿರ, ಹುಲಸೂರ (ಖೇಡ), ದಿನಚರಿ: ಪ್ರತಿದಿನ ಮುಂಜಾನೆ 4 ರಿಂದ 6 ಗಂಟೆಯವರೆಗೆ ಕಾ-ಕಡ ಆರತಿ, ನಂತರ ಜ್ಞಾನೇಶ್ವರಿ ಪಾರಾಯಣ, ಭಜನೆ, ಪ್ರವಚನ ಹಾಗೂ ರಾತ್ರಿ ಕೀರ್ತನ ಮತ್ತು ಹರಿಜಾಗರ ಕಾರ್ಯಕ್ರಮಗಳು ನಡೆಯಲಿವೆ.

ಸಪ್ತಾಹದ ಅಂಗವಾಗಿ ಏಪ್ರಿಲ್ 9 ರಂದು ವಿಶೇಷವಾಗಿ 'ಲಕ್ಷ್ಮಣ ಶಕ್ತಿ' ಎಂಬ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಪ್ತಾಹದ ಕೊನೆಯ ದಿನವಾದ ಏಪ್ರಿಲ್ 10 ರಂದು ತುಕಾರಾಂ ಮಹಾರಾಜ ಬಾಬರೆ ಅವರಿಂದ ಕಾಲೆ ಕೀರ್ತನೆ ಹಾಗೂ ನಂತರ ಮಹಾಪ್ರಸಾದ ವಿತರಣೆ ನಡೆಯಲಿದೆ.

ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಹುಲಸೂರ ಸುತ್ತಮುತ್ತಲಿನ ಸಾವಿರಾರು ಭಕ್ತಾದಿಗಳು ಪಾಲ್ಗೊಂಡು ತನು-ಮನ-ಧನದಿಂದ ಸೇವೆಯನ್ನು ಸಲ್ಲಿಸುತ್ತಿದ್ದಾರೆ. ಗ್ರಾಮದ ಸಮಸ್ತ ಭಜನಿ ಮಂಡಳಿ ಹಾಗೂ ಗ್ರಾಮಸ್ಥರು ಕಾರ್ಯಕ್ರಮದ ಯಶಸ್ಸಿಗಾಗಿ ದೌಲತರಾವ ಪಾಟೀಲ, ಅನಿಲ ಮೂಧಾಳೆ, ರಾಜಕುಮಾರ ಶಿವಾಜಿ, ಅರ್ಜುನ ಸೋಮಂಷಿ, ಶ್ರೀಧರ ಕದಂ, ತಾನಾಜಿ ಪಾಟೀಲ ಸೇರಿದಂತೆ ಅನೇಕರು ಶ್ರಮಿಸುತ್ತಿದ್ದಾರೆ.

## ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349

# ಅನ್ನವನ್ನು ಹಾಳು ಮಾಡಬೇಡಿ ಆಹಾರಕ್ಕೆ ಗೌರವ ನೀಡಿ

ಮದುವೆ ಸೇರಿದಂತೆ ವಿವಿಧ ಶುಭಕಾರ್ಯಗಳಲ್ಲಿ ಆಹಾರ ವ್ಯರ್ಥವಾಗುತ್ತಿರುವ ದೃಶ್ಯಗಳು ಇತ್ತೀಚೆಗೆ ಹೆಚ್ಚಾಗಿ ಕಂಡು ಬರುತ್ತಿವೆ. ತಟ್ಟೆಗೆ ಅಗತ್ಯಕ್ಕಿಂತ ಹೆಚ್ಚು ಊಟವನ್ನು ಹಾಕಿಸಿಕೊಂಡು ಅದನ್ನು ಅರ್ಧದಲ್ಲೇ ಬಿಟ್ಟು ಹಾಳು ಮಾಡುವ ಪ್ರವೃತ್ತಿ ಸಮಾಜದಲ್ಲಿ ಹೆಚ್ಚುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ.

ಅನ್ನವು ಕೇವಲ ಆಹಾರವಲ್ಲ, ಅದು ರೈತರ ಕಷ್ಟಪಟ್ಟು ಬೆಳೆದ ಪರಿಶ್ರಮದ ಫಲ. ಬಿಸಿಲು, ಮಳೆ, ಅನೇಕ ಸಂಕಷ್ಟಗಳನ್ನು ಎದುರಿಸಿ ರೈತರು ಬೆಳೆದ ಧಾನ್ಯ ನಮ್ಮ ತಟ್ಟೆಗೆ ತಲುಪುತ್ತದೆ. ಆದ್ದರಿಂದ ಅನ್ನವನ್ನು ಗೌರವಿಸುವುದು ನಮ್ಮ ಸಂಸ್ಕೃತಿ ಹಾಗೂ ಕರ್ತವ್ಯವೂ ಹೌದು. "ಅನ್ನ ದೇವೋ ಭವ" ಎಂದು ನಮ್ಮ ಹಿರಿಯರು ಹೇಳಿರುವುದೂ ಇದೇ ಕಾರಣಕ್ಕಾಗಿ.

ಮದುವೆ, ಸಮಾರಂಭಗಳು ಹಾಗೂ ಇತರ ಕಾರ್ಯಕ್ರಮಗಳಲ್ಲಿ ಕೆಲವರು ತಟ್ಟೆಗೆ ಹೆಚ್ಚು ಆಹಾರ ತೆಗೆದುಕೊಂಡು ನಂತರ ಅದನ್ನು ವ್ಯರ್ಥ ಮಾಡುವುದು ಸಾಮಾನ್ಯವಾಗುತ್ತಿದೆ. ಇದು ಕೇವಲ ಆಹಾರದ ನಷ್ಟವಲ್ಲ, ರೈತರ ಪರಿಶ್ರಮಕ್ಕೂ ಅವಮಾನವಾಗಿದೆ. ಇನ್ನೊಂದೆಡೆ ಸಮಾಜದಲ್ಲಿ ಇನ್ನೂ ಹಲವರು ಹೊಟ್ಟೆಪಾಡಿಗಾಗಿ ಹೋರಾಡುತ್ತಿರುವುದು ಕೂಡ ಸತ್ಯ.

ಆದ್ದರಿಂದ ಕಾರ್ಯಕ್ರಮಗಳಿಗೆ ಹೋಗುವ ಪ್ರತಿಯೊಬ್ಬರೂ ಅಗತ್ಯವಿರುವಷ್ಟು ಮಾತ್ರ ಆಹಾರವನ್ನು ತೆಗೆದುಕೊಳ್ಳಬೇಕು. ಆಹಾರವನ್ನು ವ್ಯರ್ಥ ಮಾಡದೆ ಗೌರವಿಸುವ ಸಂಸ್ಕೃತಿ ಬೆಳೆಸಿಕೊಳ್ಳುವುದು ಸಮಾಜದ ಹೊಣೆಗಾರಿಕೆಯಾಗಿದೆ.

ಅನ್ನದ ಮೌಲ್ಯವನ್ನು ಅರಿತು ಆಹಾರವನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಬೇಕು. ಆಗ ಮಾತ್ರ ನಮ್ಮ ಸಂಸ್ಕೃತಿಯ ಮೌಲ್ಯಗಳು ಉಳಿಯುತ್ತವೆ.

# ಸಹಸ್ರಾರು ಭಕ್ತರ ನಡುವೆ ಅದ್ದೂರಿ ರಥೋತ್ಸವ ಬಾವಗಿ ಭದ್ರೇಶ್ವರ ಜಾತ್ರಾ ಮಹೋತ್ಸವ



- ಮಲ್ಲಮ್ಮ ನುಡಿ ವಾರ್ತೆ, ಬೀದರ

ಬೀದರ್ ತಾಲುಕಿನ ಬಾವಗಿ ಭದ್ರೇಶ್ವರ ರಥೋತ್ಸವವು ರವಿವಾರ ರಾತ್ರಿ ಸಹಸ್ರಾರು ಭಕ್ತರ ನಡುವೆ ಅದ್ದೂ-ರಿಯಾಗಿ ನೆರವೇರಿತು

ಭಕ್ತರ ಇಷ್ಟಾರ್ಥವನ್ನು ಪೂರೈಸುವ ಈ ಭಾಗದ ಆರಾಧ್ಯದೈವ ಭದ್ರೇಶ್ವರ ಭವ್ಯ ರಥೋತ್ಸವವು ರವಿವಾರ ರಾತ್ರಿ 10 ಗಂಟೆಗೆ ಸಹಸ್ರಾರು ಭಕ್ತರ ಜೈ ಘೋಷಗಳ ನಡುವೆ ಅದ್ದೂರಿಯಾಗಿ ನೆರವೇರಿತು.

ಪಂಚಾಭಿಷೇಕ ಹಾಗೂ ವಿಶೇಷ ಪೂಜೆ ಸಲ್ಲಿಸಿದ ಭದ್ರೇಶ್ವರ ದೇವಸ್ಥಾನದಿಂದ ಭಕ್ತರು ನಂದಿಕೋಲು ಪಲ್ಲಕ್ಕಿ ಮೆರವಣಿಗೆ ಮುಖಾಂತರ ಭಕ್ತರು ಡಿಜೆ ಹೆಜ್ಜೆ ಹಾಕುತ್ತಾ ರಥದತ್ತ ಸಾಗಿದರು ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಹೊತ್ತು ದೇವಸ್ಥಾನ ಹಾಗೂ ಭವ್ಯ ರಥದ ಸುತ್ತಲೂ ಪ್ರದಕ್ಷಿಣೆ ಹಾಕಲಾಯಿತು. ನಂತರ ವೈಭವದ ರಥೋತ್ಸವಕ್ಕೆ ಅದ್ದೂರಿಯಾಗಿ ಪಂಡಿತರಾಜ್ಯ ಶಿವಾಚಾರ್ಯರ ಹಾಗೂ ಬದ್ರೇಶ್ವರ ಮಠದ ಶ್ರೀ ಶಿವಕುಮಾರ ಸ್ವಾಮಿ ಚಾಲನೆ ನೀಡಲಾಯಿತು.

ಯುವ ಸಮೂಹವು ರಥೋತ್ಸವದ ಉದ್ದಕ್ಕೂ ಪಟಾಕಿ ಸಿಡಿಸಿ ಸಂಭ್ರಮಿಸಿದರು. ರಾತ್ರಿ 10 ಗಂ-ಟೆಗೆ ಸುಮಾರಿಗೆ ಜರುಗಿದ ರಥೋತ್ಸವಕ್ಕೆ ಬಣ್ಣ ಬಣ್ಣದ ಹೂ, ತೆಂಗಿನ ಗರಿ, ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ರಥೋತ್ಸವದ ರಾತ್ರಿ 12ಗಂಟೆ ಸುಮಾರಿಗೆ ರತೋತ್ಸವ ಸಂಪನ್ನಗೊಂಡಿತ್ತು ,

ಜಾತ್ರೆಯ ಅಂಗವಾಗಿ ನೆರವೇರಿಸಿದ ವೈಭವದ ರಥೋತ್ಸವಕ್ಕೆ ನೆರೆಯ ನೆಲವಾಡ ಸಂಗೋಳಗಿ, ಮಂದಕನಳ್ಳಿ ಸಿರ್ಸಿ ಗ್ರಾಮಗಳು ಸೇರಿದಂತೆ ರಾಯಚೂರು, ಕಲಬುರಗಿ, ಇತರ ಜಿಲ್ಲೆಗಳ ಭಕ್ತರು ಮಾತ್ರವಲ್ಲದೆ ಪಕ್ಕದ ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟಚ ರಾಜ್ಯಗಳಿಂದಲೂ ಸಹಸ್ರಾರು ಭಕ್ತರು ಆಗಮಿಸಿ ಭದ್ರೇಶ್ವರ ದರ್ಶನ ಪಡೆದು ಪುನಿತರಾದರು.

ರಾಜಕುಮಾರ್ ಭದ್ರಾಣ ನಾಗೇಶ್ ಕೊಳರ್ ಗುಂಡಯ್ಯ ಸ್ವಾಮಿ ಕಂಠಯ್ಯ ಸ್ವಾಮಿ ಚೆನ್ನಮಲ್ಲಪ್ಪ ಹಜರಗಿ ನಾಗ್ ಶೆಟ್ಟಿ ಅಳ್ಳಿ ಕಾಶಿನಾಥ್ ಪಕ್ಕ ಜಾತ್ರಾ ಉತ್ಸವ ಸಮಿತಿ ಗ್ರಾಮಸ್ಥರು ಇದ್ದರು

# ಕಲಾವಿದರನ್ನು ಸಲಹುವ ಹಾರಕೂಡ ಶ್ರೀ ಮಠ: ಸಿದ್ಧಬಸವ ಕಬೀರ ಸ್ವಾಮಿಗಳು

- ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ



ಸೂಕ್ತಹಾಗೂ ಶ್ರೇಷ್ಠ ಅವಕಾಶಗಳನ್ನು ಕಲ್ಪಿಸಿಕೊಡುವ ಮೂಲಕ ಕವಿ, ಕಲಾವಿದ, ಸಾಹಿತಿಗಳಿಗೆ ಸಲಹುವಂತಹ ಶ್ರೇಷ್ಠ ಕಾರ್ಯ ಹಾರಕೂಡ ಶ್ರೀಮಠದಿಂದ ಸಾಗಿ ಬರುತ್ತಿದೆ ಎಂದು ಪೂಜ್ಯ ಶ್ರೀ ಸಿದ್ದಬಸವ ಕಬೀರ ಸ್ವಾಮಿಗಳು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಆಯೋಜಿಸಿದ ಧಾರ್ಮಿಕ ಸಭೆಯ ನೇತೃತ್ವವಹಿಸಿ ಮಾತನಾಡಿದ ಸ್ವಾಮಿಗಳು, ಹಾರಕೂಡ ಮಠವೆಂದರೆ ಇದೊಂದು ಅಭಿನವ ಅನುಭವ ಮಂಟಪವಾಗಿದ್ದು, ಇಲ್ಲಿ ಸರ್ವಜಾತಿ ಜನಾಂಗದ, ಸರ್ವಧರ್ಮಗಳ ಬೆಸುಗೆಯ ಸುಂದರ ಸೌಹಾರ್ದ ಆಚಾರ ವಿಚಾರ ತಾಣ ಸಿಗುತ್ತದೆ.

ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು, ಬಸವಣ್ಣನವರನ್ನು, ಬಸವಾದಿ ಶರಣರನ್ನು ತಮ್ಮ ಅಂತರಂಗದಲ್ಲಿ ಇರಿಸಿಕೊಂಡು ಬಸವ ಚಿಂತನೆಯನ್ನು ಸಮಾಜಕ್ಕೆ ಪ್ರಖರವಾಗಿ ಮುಟ್ಟಿಸುವ ಆದರ್ಶ ಶಿವಾಚಾರ್ಯರಾಗಿದ್ದಾರೆ.

ಇಂತಹಮಹಾನ್ ಯತಿವರ್ಯರನ್ನು ಪಡೆದ ಈ ನೆಲವೇ ಧನ್ಯ. ಹಾರಕೂಡ ಮಠದ ಭೇಟಿ ಹಾಗೂ ಚನ್ನವೀರ ಶಿವಾಚಾರ್ಯರ ದರ್ಶನಾಶೀರ್ವಾದದಿಂದ ನನ್ನಲ್ಲಿ ಹೊಸ ಆಧ್ಯಾತ್ಮಿಕ ಚೈತನ್ಯ ಮೂಡಿದೆ ಎಂದು ಹರ್ಷದಿಂದ ನುಡಿದರು.

ಹಾರಕೂಡ ಶ್ರೀ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸಾನಿಧ್ಯ ವಹಿಸಿದ್ದರು.

ಬಸವಕಲ್ಯಾಣ ದೇವಸ್ಥಾನ ಪಂಚಕಮಿಟಿ (ಬಿಡಿಪಿಸಿ) ಆಡಳಿತ ಮಂಡಳಿಯ ಅಧ್ಯಕ್ಷರಾದ ಅನೀಲಕುಮಾರ ರಗಟೆ,

ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಕುರಕೋಟೆ, ಕೋಶಾಧ್ಯಕ್ಷರಾದ ಜಗನ್ನಾಥ ಖೂಬಾ, ಕಾರ್ಯದರ್ಶಿಗಳಾದ ಅಶೋಕ ನಾಗರಾಳೆ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ಬಿಡಿಪಿಸಿ ಸಹಕಾರದರ್ಶಿಗಳಾದ ಬಸವರಾಜ ಬಾಲಕೀಲೆ, ಸುನೀಲ ರಾಯವಾಡೆ ನಿರ್ದೇಶಕರುಗಳಾದ ಬಸವರಾಜ ಕೋರಕೆ, ಇರಣ್ಣಾ ಹಲಶೆಟ್ಟೆ, ಭದ್ರಿನಾಥ ಪಾಟೀಲ, ವಿವೇಕಾನಂದ ಹೊದಲೂರೆ, ಬಸವರಾಜ ತೊಂಡಾ-ರೆ, ಮಲ್ಲಿಕಾರ್ಜುನ ಚಿರಡೆ, ಸುನೀಲಕುಮಾರ ಹೊಳಕುಂದೆ, ರಾಜಕುಮಾರ ಹೊಳಕುಂದೆ ಹಾಗೂ ಪುಷ್ಪಾವತಿ ರಾಜಕುಮಾರ ಮಾಮಾ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಚಿಗರಹಳ್ಳಿ ಸಿದ್ದಬಸವ ಕಬೀರ ಸ್ವಾಮಿಗಳಿಗೆ ಹಾಗೂ ಬಿಡಿಪಿಸಿ ನೂತನ ಪದಾಧಿಕಾರಿಗಳಿಗೆ ಹಾರಕೂಡ ಶ್ರೀ ಮಠದ ವತಿಯಿಂದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಗೌರವಿಸಿದರು.

ಮಲ್ಲಿನಾಥ ಹಿರೇಮಠ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲದಗುಂಡಿ, ಶರಣಪ್ಪ ಜಮಾದಾರ ಸಂಗೀತ ಸೇವೆ ಸಲ್ಲಿಸಿದರು.

ಭಕ್ತ ಕುಂಬಾರ ಕಾರ್ಯಕ್ರಮ ನಿರೂಪಿಸಿದರು.

# ನೂತನ ಕೌಶಲ ತಿಳಿದುಕೊಳ್ಳಲು ಶಿಬಿರ ಪೂರಕ: ಹುಲಸೂರೆ

- ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಬಿರು ಬಿಸಿಲಿನಲ್ಲಿ ಚಿಕ್ಕ ಮಕ್ಕಳು ಸಮಯ ವ್ಯರ್ಥ ಮಾಡಿಕೊಳ್ಳದೆ ಬೇಸಿಗೆ ಶಿಬಿರದಲ್ಲಿ ಅಧ್ಯಯನ ಮಾಡಿದಾಗ ನೂತನ ಕೌಶಲ್ಯ ತಿಳಿದುಕೊಳ್ಳಲು ಅನುಕೂಲವಾಗುತ್ತದೆ ಎಂದು ರೇವಪಯ್ಯ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಸುಭಾಷ ಹುಲಸೂರೆ ಹೇಳಿದರು.

ತಾಲೂಕಿನ ಬಾಜೋಳಗಾ ಕ್ರಾಸ್‌ನಲ್ಲಿರುವ ರೇವಪಯ್ಯ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ

ವಿದ್ಯಾಚೇತನ ಪಬ್ಲಿಕ್ ಶಾಲೆಯಲ್ಲಿ ಆರಂಭಿಸಿದ ಬೇಸಿಗೆ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಬೇಸಿಗೆ ಶಿಬಿರದಲ್ಲಿ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಿಗೆ ಪ್ರಾಧಾನ್ಯತೆ ನೀಡಲಾಗುತ್ತದೆ. ಮುಂದಿನ ತರಗತಿಯ ಪಠ್ಯಕ್ರಮ ತಿಳಿದುಕೊಳ್ಳಲು ವಿದ್ಯಾರ್ಥಿಗಳು ಆತೂರ, ಕಾತೂರರಾಗಿರುತ್ತಾರೆ. ಹಾಗಾಗಿ ಮಕ್ಕಳಿಗೆ ಇಂಗ್ಲೀಷ್, ಗಣಿತ, ವಿಜ್ಞಾನ ವಿಷಯಗಳನ್ನು ಹೇಗೆ ಕಲಿಯಬೇಕು, ಅದನ್ನ ಹೇಗೆ ಮನದಟ್ಟು ಮಾಡಿಕೊಳ್ಳಬೇಕು ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿ ನೀಡಲಾಗುತ್ತದೆ. ಪಾಲಕರು ಬೇಸಿಗೆ ಶಿಬಿರದ ಲಾಭ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಸಿಬ್ಬಂದಿ, ಪಾಲಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



# ಟೋಕರಿ ಕೋಳಿ ಸಮಾಜದ ಅಭಿವೃದ್ಧಿಗೆ ಶ್ರಮಿಸೋಣ: ನರಸಪ್ಪ



- ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ

ಸಮಾಜದ ಅಭಿವೃದ್ಧಿಗಾಗಿ ಸಂಘಟನೆ ಅವಶ್ಯಕವಾಗಿದೆ ಎಂದು ಟೋಕರಿ ಕೋಳಿ ಸಮಾಜದ ನೂತನ ತಾಲೂಕಾಧ್ಯಕ್ಷ ನರಸಪ್ಪ ನರನಾಳ ಹೇಳಿದರು. ತಾಲೂಕಿನ ವಿಠಲಪುರ್ ಗ್ರಾಮದ ಹೊರವಲಯದಲ್ಲಿರುವ ಮಾತೇ ಮಾಣಿಕೇಶ್ವರಿ ಅಮ್ಮನವರ ಆಶ್ರಮದಲ್ಲಿ ರವಿವಾರ ಟೋಕರಿ ಕೋಳಿ ಸಮಾಜದ ಜಿಲ್ಲಾ ನೌಕರರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ನೂತನ ಪದಾಧಿಕಾರಿಗಳ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಹಿರಿಯರ ಹಾಗೂ ಯುವಕರ ಸಹಕಾರದೊಂದಿಗೆ ಸಮಾಜದ ಅಭಿವೃದ್ಧಿಗೆ ಹಾಗೂ ಸಂಘಟನೆ ಹಗಲಿರಳು ಶ್ರಮಿಸುವುದಾಗಿ ತಿಳಿಸಿದರು. ಶಾಂತಿ ಬಾಬಾ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ನೌಕರರ ಸಂಘದ ಗೌರವಾಧ್ಯಕ್ಷ ತಿಪಣ್ಣ ನಿರ್ಣಾ, ಪುಂಡಲೀಕ ನಿಂಗನಬಾಡ, ರವೀಂದ್ರ ಚಾಂಗಲೇರಾ, ಜಗನ್ನಾಥ ಮಂಗಲಗಿ, ಬಾಬುರಾವ ರಾಸುರೇ, ವೀರಶೆಟ್ಟಿ ಮಾನಕರ್, ಅಶೋಕ ಕಾಗೆ, ಭೀಮಶಾ ಕೋಟಗಿ, ಮಾಣಿಕ ನೇಳಗಿ, ಸುರೇಶ್ ಉಡಮನಳ್ಳಿ, ಶಿವಶಂಕರ ಬಾಕಿ ಸೇರಿದಂತೆ ಸಮಾಜದ ಬಾಂಧವರು ಉಪಸ್ಥಿತರಿದ್ದರು.

# CITATION

**IN THE COURT OF THE PRL. CIVIL JUDGE AND JMFC., AT HUMNABAD.**

**CRL. MISC. No.4305/2025.**

**Petitioners:**

1. **Sonamma W/o Late Bhimanna,** Age: 82-yrs. Occu: Household. R/o H. No. 1-13 Janata Nagar Village Hudgi. Tq. Humnabad.

**Respondent:**

The Registrar of Birth and Death through The Tahasildar Humnabad. Tq.Humnabad.

**Sub:- Petition U/Sec. 13(3) of Birth and Death Registration Act-1969**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Husband of petitioner by namely LATE. BHIMANNA S/O HANMANTAPPA, who was died on 20.12.2011 at Village Janata Nagar Village Hudgi, Tq.Humnabad Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 10.04.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 26-03-2026

**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**

FOR SALE RUNNING DHABA
BISMILLAH HOTEL
G.P. No. 3/71, Belkhera Cross, Manna-Ekhelli Road,
Opp: Indian Oil Petrol Pump Tq: Chitguppa. Dist: Bidar.
N.A. Fully Registered Plots
Proprietor : Mohammed Abdul Mateen
Contact No. 7569112796

# ಬಿಜೆಪಿ ಸಂಸ್ಥಾಪನಾ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್ಲ

ಮಂಡಲ ಭಾಜಪ ಎಸ್.ಸಿ ಮೋರ್ಚಾ ಅಧ್ಯಕ್ಷ ಶರಣಪ್ಪ ಜಾಧವ್ ನಿವಾಸದಲ್ಲಿ ಭಾರತೀಯ ಜನತಾ ಪಾರ್ಟಿ ಸಂಸ್ಥಾಪನಾ ದಿನಾಚರಣೆ ಧ್ವಜಾರೋಹಣ ಸೋಮವಾರ ಆಚರಣೆ ಮಾಡಲಾಯಿತು.

ಶ್ಯಾಮಪ್ರಕಾಶ ಮುಖರ್ಜಿ, ದಿನ ದಯಾಳ ಉಪಾಧ್ಯಾಯ ಹಾಗೂ ಭಾರತಾಂಭೆಯವರ ಭಾವ ಚಿತ್ರಕ್ಕೆ ಭಾಜಪ ನಿಕಟ ಪೂರ್ವ ಅಧ್ಯಕ್ಷ ಸಣ್ಣ ಸಿದ್ದಯ್ಯ ಗ್ಯಾನಪ್ಪಯ್ಯನವರ್ ಪೂಜೆ ಸಲ್ಲಿಸಿ ಪುಷ್ಪರ್ಚನೆ ಮಾಡಿದರು.

ಮಂಡಲ ಅಧ್ಯಕ್ಷ ಹುಲ್ಲೇಶ್ ಸಾಹುಕಾರ ಕಾಚಾಪುರ್, ನಗರ ಘಟಕ ಅಧ್ಯಕ್ಷ ಕರಿಯಪ್ಪ ಯಾದವ್, ಮಂಡಲ ಪ್ರಧಾನ ಕಾರ್ಯದರ್ಶಿ ಮಂಜುನಾಥ ನಂದವಾಡಗಿ, ಪುರಸಭೆ ಅಧ್ಯಕ್ಷ ಚಂದಾವಲಿ ಸಾಬ್ ಜಂಗ್ಲಿ, ಪುರಸಭೆ ಸದಸ್ಯ ಬಾಬು ಉಪ್ಪಾರ್, ಮಾಜಿ ನಾಮನಿರ್ದೇಶನ ಸದಸ್ಯ ಉದಯ ಕಂಬಾರ, ಪಕೀರಪ್ಪ ಕುರಿ, ಹಾಗೂ ಪಕ್ಷದ ಮುಖಂಡರಾದ ಮಲ್ಲಿಕಾರ್ಜುನ ಮಾಟೂರ್, ಮಲ್ಲಪ್ಪ ಹೂಗಾರ್, ವೀರಭದ್ರಪ್ಪ ಗೂಡೂರ್, ಗದ್ಯಪ್ಪ ಜಕ್ಕೆರೆಮಡು, ರವಿ ಕಂಬಾರ್, ರಾಯಪ್ಪ, ಚನ್ನಬಸವ, ವಿರುಪಾಕ್ಷಿ ಹೂಗಾರ್, ಬಸವರಾಜ್ ಹಣಿಗಿ, ಶಿವು ಮೆಡಿಕಲ್, ದೇವಪ್ಪ ಯಾದವ್, ನರಸಿಂಗಪ್ಪ, ಹಾಗೂ ಮಹಿಳಾ ಮೋರ್ಚ ಮಂಡಲ ಅಧ್ಯಕ್ಷೆ ಚಿಂತಪಲ್ಲಿ ಸತ್ಯವತಿ, ಲಕ್ಷ್ಮಿ ಕೋರಿ ಶೆಟ್ಟಿ ಸೇರಿದಂತೆ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಒಗ್ಗಟ್ಟಿನಿಂದ ಕೆಲಸ ಮಾಡುವ ಸಂಕಲ್ಪ ಮಾಡೋಣ: ಬೆಲ್ದಾಳೆ

• ಮಲ್ಲಮ್ಮ ನುಡಿ ವಾರ್ತೆ, ಬೀದರ್

ನಾವು ಎಲ್ಲರೂ ಬಿಜೆಪಿ ಪಕ್ಷದ ತತ್ವ–ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಜನಸೇವೆ ಮಾಡುವುದರ ಮೂಲಕ ಪಕ್ಷವನ್ನು ಇನ್ನಷ್ಟು ಬಲಪಡಿಸಬೇಕು. ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಪಕ್ಷವನ್ನು ಮತ್ತಷ್ಟು ಅಭಿವೃದ್ಧಿಪಡಿಸಲು ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡುವ ಸಂಕಲ್ಪ ಮಾಡೋಣ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಮನ್ನಾಏಖೇಳ್ಳಿ ರಸ್ತೆ ಬಾಪುರ ಕ್ರಾಸ್ ಬಳಿ ಇರುವ ಬಿಜೆಪಿ ಪಕ್ಷದ ಕಚೇರಿಯಲ್ಲಿ ಭಾರತೀಯ ಜನತಾ ಪಾರ್ಟಿ ಸಂಸ್ಥಾಪನಾ ದಿನಾಚರಣೆಯನ್ನು ಅತ್ಯಂತ ಉತ್ಸಾಹದಿಂದ ಆಚರಿಸಿ ಅವರು ಮಾತನಾಡಿದರು.

ಪಕ್ಷದ ತತ್ವ–ಸಿದ್ಧಾಂತಗಳನ್ನು ಪುನರುಚ್ಚರಿಸಿ, ಜನಸೇವೆಯ ಮೂಲಕ ಪಕ್ಷವನ್ನು ಇನ್ನಷ್ಟು ಬಲಿಷ್ಠಗೊಳಿಸುವ ಸಂಕಲ್ಪ ಮಾಡೋಣ ಎಂದರು.



ಸಮಾಜದ ಅತೀ ಹಿಂದುಳಿದ ವರ್ಗಗಳ ಉನ್ನತಿಗಾಗಿ, ರಾಷ್ಟ್ರೀಯತೆಯ ಭಾವನೆ ಬಲಪಡಿಸುವುದು, ಸುಶಾಸನ ಮತ್ತು ಅಭಿವೃದ್ಧಿಗೆ ಒತ್ತು ನೀಡುವುದು ಪಕ್ಷದ ಮುಖ್ಯ ಧ್ಯೇಯಗಳಾಗಿವೆ.

ಈ ಸಿದ್ಧಾಂತಗಳು ನಮ್ಮ ಕಾರ್ಯಕರ್ತರಿಗೆ ದಾರಿದೀಪವಾಗಿದ್ದು, ದೇಶದ ಸಮಗ್ರ ಅಭಿವೃದ್ಧಿಗಾಗಿ ಪ್ರತಿಯೊಬ್ಬರೂ ಬದ್ಧತೆಯಿಂದ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದರು.

ಇಂದು ನಾವು ಭಾರತೀಯ ಜನತಾ ಪಕ್ಷದ ಸಿದ್ಧಾಂತಗಳನ್ನು ಸ್ಮರಿಸುವ ಈ ಮಹತ್ವದ ಕ್ಷಣದಲ್ಲಿ ಒಂದಾಗಿ ಸೇರಿದ್ದೇವೆ. ಬಿಜೆಪಿ ಎಂದರೆ ಕೇವಲ ಒಂದು ರಾಜಕೀಯ ಪಕ್ಷವಲ್ಲ, ಇದು ದೇಶಭಕ್ತಿ, ಸೇವಾಭಾವನೆ ಮತ್ತು ಸಮರ್ಪಣೆಯ ಪ್ರತೀಕವಾಗಿದೆ.

ನಮ್ಮ ಪಕ್ಷದ ಮೂಲ ತತ್ವವಾದ "ಅಂತ್ಯೋದಯ" ￼ ಸಮಾಜದ ಕೊನೆಯ ವ್ಯಕ್ತಿಯ ಅಭಿವೃದ್ಧಿ ￼ ನಮ್ಮ ಎಲ್ಲ ಕಾರ್ಯಗಳ ದಾರಿದೀಪವಾಗಿದೆ. ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಅವಕಾಶ ಸಿಗಬೇಕು ಎಂಬುದು ನಮ್ಮ ನಂಬಿಕೆ.

ಬಿಜೆಪಿ ಸದಾ ರಾಷ್ಟ್ರೀಯತೆ, ಸುಶಾಸನ ಮತ್ತು ಅಭಿವೃದ್ಧಿಯ ಮಾರ್ಗದಲ್ಲಿ ನಡೆದುಕೊಂಡು ಬಂದಿದೆ. "ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್" ಎಂಬ ಮಂತ್ರದೊಂದಿಗೆ ನಾವು ಎಲ್ಲ ವರ್ಗಗಳ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇವೆ.

ನಮ್ಮ ಹಿರಿಯ ನಾಯಕರು ಮತ್ತು ಕಾರ್ಯಕರ್ತರು ತಮ್ಮ ಜೀವನವನ್ನೇ ಸಮರ್ಪಿಸಿ ಪಕ್ಷವನ್ನು ಈ ಮಟ್ಟಕ್ಕೆ ತಂದಿದ್ದಾರೆ. ಅವರ ತ್ಯಾಗ ಮತ್ತು ಪರಿಶ್ರಮವನ್ನು ನಾವು ಸದಾ ಸ್ಮರಿಸಬೇಕು ಎಂದರು.

ಬಿಜೆಪಿ ಪಕ್ಷದ ಹಿರಿಯ ಮುಖಂಡರಾದ ಬಸವರಾಜ ಸಿಂಧೋಲ, ಜರೆಪ್ಪ ಹಂದಿಕೇರಿ, ರಾಜಕುಮಾರ ಮಾಳಗಿ, ದಯಾನಂದ ರೆಡ್ಡಿ ಬರೂರ, ನರಸಣ್ಣ ಔರಾದ್, ಅವರನ್ನು ಸನ್ಮಾನಿಸಿ, ಅವರ ಅಮೂಲ್ಯ ಸೇವೆಯನ್ನು ಸ್ಮರಿಸಲಾಯಿತು. ಅವರ ಮಾರ್ಗದರ್ಶನ ನಮ್ಮಂತಹ ಕಾರ್ಯಕರ್ತರಿಗೆ ಸದಾ ಪ್ರೇರಣೆ–ಯಾಗಿದೆ.

ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸಿದ ಎಲ್ಲಾ ಕಾರ್ಯಕರ್ತರಿಗೆ ಹೃತ್ಪೂರ್ವಕ ಅಭಿನಂದನೆ ಎಂದು ಶಾಸಕರು ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಗುರುನಾಥ ರಾಜಗೀರ ಬಗದಲ್, ಪ್ರಧಾನ ಕಾರ್ಯದರ್ಶಿ ಸಂಜುಕುಮಾರ ಕೋಳಿ, ಮುಖಂಡರಾದ ರಾಜರೆಡ್ಡಿ, ಸುರೇಶ ಮಾಶೆಟ್ಟಿ, ಪ್ರಭು ಮೆಂಗಾ, ಶ್ರೀನಿವಾಸ ಪೊದ್ದಾರ, ಮಾಣಿಕಪ್ಪ ಖಾಶೆಂಪುರ, ಶಿವಕುಮಾರ ಸ್ವಾಮಿ, ಬಾಬುರಾವ ಮಲ್ಕಾಪುರ, ಬಸವರಾಜ ಪವಾರ್, ಹೇಮಾ ತುಕ್ಕಾರೆಡ್ಡಿ, ಸಂತೋಷಿನಿಡವಂಚಾ ಪಕ್ಷದ ವಿವಿಧ ಮೋರ್ಚಾ ಪದಾಧಿಕಾರಿಗಳು, ಪಕ್ಷದ ಮುಖಂಡರು ಕಾರ್ಯಕರ್ತರು ಮತ್ತಿತರರು ಉಪಸ್ಥಿತರಿದ್ದರು.

# ತಂತ್ರಜ್ಞಾನದ ಸಮರ್ಪಕ ಬಳಕೆಯಿಂದ ನ್ಯಾಯಧಾನಕ್ಕೆ ವೇಗ: ನ್ಯಾ. ಪೂಣಚ್ಚ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ತಂತ್ರಜ್ಞಾನದ ಸಮರ್ಪಕ ಬಳಕೆಯಿಂದ ನ್ಯಾಯ ನೀಡುವ ಪ್ರಕ್ರಿಯೆಗೆ ಹೆಚ್ಚು ವೇಗ ಸಿಗಲಿದೆ ಎಂದು ಕರ್ನಾಟಕ ಹೈಕೋರ್ಟ್ ನ ನ್ಯಾಯಾಧೀಶರು ಮತ್ತು ಕೊಪ್ಪಳ ಜಿಲ್ಲೆಯ ಆಡಳಿತ ನ್ಯಾಯಾಧೀಶರಾದ ಗೌರವಾನ್ವಿತ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರು ಹೇಳಿದರು.

ಜಿಲ್ಲಾ ನ್ಯಾಯಾಂಗ ಇಲಾಖೆ, ಲೋಕೋಪಯೋಗಿ ಇಲಾಖೆ ಕೊಪ್ಪಳ ಹಾಗೂ ಬಾರ್ ಅಸೋಸಿಯೇಷನ್ ಯಲಬುರ್ಗಾ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್ 04ರಂದು ಯಲಬುರ್ಗಾ ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ಯಲಬುರ್ಗಾ ನೂತನ ನ್ಯಾಯಾಲಯ ಸಂಕೀರ್ಣ ಕಟ್ಟಡದ ಉದ್ಘಾಟನಾ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಡಿಜಿಟಲ್ ನ್ಯಾಯವ್ಯವಸ್ಥೆಯು ಸಾರ್ವಜನಿಕ ಸೇವೆ ಮತ್ತು ಸುಧಾರಿತ ಮೂಲಸೌಕರ್ಯಕ್ಕೆ ಹೊಸ ದಿಕ್ಕಾಗಿದೆ. ನ್ಯಾಯಾಂಗ ವ್ಯವಸ್ಥೆಯ ಆಧುನೀಕರಣವು ಈ ಕಾಲದ ಅವಶ್ಯಕತೆಯಾಗಿದೆ. ತಂತ್ರಜ್ಞಾನವನ್ನು ಸಮರ್ಪಕವಾಗಿ ಅಳವಡಿಸಿಕೊಳ್ಳುವುದರಿಂದ



ನ್ಯಾಯಧಾನದ ಪ್ರಕ್ರಿಯೆ ತ್ವರಿತವಾಗಿ ಪಾರದರ್ಶಕವಾಗಿ ಹಾಗೂ ಜನಸ್ನೇಹಿಯಾಗಿ ರೂಪುಗೊಳ್ಳುತ್ತದೆ. ಈ ಹಿನ್ನೆಲೆಯಲ್ಲಿ

ತಂತ್ರಜ್ಞಾನಕ್ಕೆ ವಿಶೇಷ ಒತ್ತು ನೀಡಲಾಗುತ್ತಿದ್ದು, ಇ–ಕೋರ್ಟ್ ವ್ಯವಸ್ಥೆ, ಇ–ಫೈಲಿಂಗ್, ವಿಡಿಯೋ ಕಾನ್ಫರೆನ್ಸ್ ವಿಚಾರಣೆ, ಡಿಜಿಟಲ್ ಸಾಕ್ಷ್ಯ ಸಂಗ್ರಹಣೆ ಹಾಗೂ ಆನ್‌ಲೈನ್ ಕೇಸ್ ಟ್ರ್ಯಾಕಿಂಗ್ ವ್ಯವಸ್ಥೆಗಳಂತಹ ತಾಂತ್ರಿಕ ವಿಧಾನಗಳು ನಡೆಯುತ್ತಿವೆ. ನ್ಯಾಯಾಲಯಗಳಿಗೆ ಆಗಮಿಸದೇ ವಕೀಲರು ಹಾಗೂ ವಾದಿಗಳು ಪ್ರಕರಣಗಳ ಸ್ಥಿತಿಯನ್ನು ತಿಳಿದುಕೊಳ್ಳುವಂತಾಗಬೇಕು. ಇದು ಸಮಯ ಮತ್ತು ವೆಚ್ಚದ ಉಳಿತಾಯಕ್ಕೆ ಸಹಾಯಕವಾಗಿದೆ ಎಂದು ತಿಳಿಸಿದರು.

ಗ್ರಾಮೀಣ ಭಾಗದಲ್ಲಿ ನ್ಯಾಯ ಸೌಲಭ್ಯ ವಿಸ್ತರಣೆ,

ಯಲಬುರ್ಗಾದಂತಹ ಪಟ್ಟಣಗಳಲ್ಲಿ ಆಧುನಿಕ ನ್ಯಾಯಾಲಯ ಸಂಕೀರ್ಣ ನಿರ್ಮಾಣವು ಗ್ರಾಮೀಣ ಜನತೆಗೆ ಬಹುಉಪಯುಕ್ತವಾಗಲಿದೆ. ಇದರಿಂದ ದೂರದ ನಗರಗಳಿಗೆ ತೆರಳುವ ಅವಶ್ಯಕತೆ ಕಡಿಮೆಯಾಗುವುದಲ್ಲದೇ ಸ್ಥಳೀಯ ಮಟ್ಟದಲ್ಲೇ ನ್ಯಾಯ ದೊರೆಯುವ ವ್ಯವಸ್ಥೆಯು ಸಹ ಬಲವಾಗುತ್ತದೆ. ಈ ನೂತನ ನ್ಯಾಯಾಲಯ ಕಟ್ಟಡದಲ್ಲಿ ಹಲವು ಅತ್ಯಾಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ವಿಶಾಲ ಹಾಗೂ ಸುಸಜ್ಜಿತ ನ್ಯಾಯಾಂಗ ಸಭಾಂಗಣಗಳು, ಡಿಜಿಟಲ್ ದಾಖಲೆ ಸಂಗ್ರಹಣಾ ವ್ಯವಸ್ಥೆ, ಸಾರ್ವಜನಿಕರಿಗಾಗಿ ಆರಾಮದಾಯಕ ನಿರೀಕ್ಷಣಾ ವ್ಯವಸ್ಥೆ ಮಾಡಿರುವುದು ವಿಶೇಷವಾಗಿದೆ ಎಂದರು.

ನ್ಯಾಯಾಂಗ ಸೇವೆಯ ವೇಗ ಮತ್ತು ಗುಣಮಟ್ಟ ತುಂಬಾ ಪ್ರಮುಖವಾಗಿದ್ದು, "ನ್ಯಾಯ ನೀಡುವಲ್ಲಿ ವಿಳಂಬವು ನ್ಯಾಯ ನಿರಾಕರಣೆಯಂತೆ" ಎಂಬ ಮಾತಿನಂತೆ ಪ್ರಕರಣಗಳ ಶೀಘ್ರ ನಿವಾರಣೆಗೆ ನ್ಯಾಯಾಂಗ ಅಧಿಕಾರಿಗಳು ಹಾಗೂ ವಕೀಲರು ಸಹಕಾರ ನೀಡಬೇಕು. ಮಧ್ಯಸ್ಥಿಕೆ ಮತ್ತು ಪರ್ಯಾಯ ವಿವಾದ ಪರಿಹಾರ (ಎಡಿಆರ್) ವಿಧಾನಗಳ ಬಳಕೆ ಹೆಚ್ಚಿಸುವುದರಿಂದ ನ್ಯಾಯಾಲಯಗಳ ಮೇಲಿನ ಒತ್ತಡ ಕಡಿಮೆಯಾಗಬಹುದು. ಯುವ ವಕೀಲರು ತಂತ್ರಜ್ಞಾನ, ಜ್ಞಾನವನ್ನು ಹೆಚ್ಚಿಸಿಕೊಂಡು, ನ್ಯಾಯಾಂಗ ಕ್ಷೇತ್ರದಲ್ಲಿ ನವೀನ ವಿಧಾನಗಳನ್ನು ಅಳವಡಿಸಿಕೊಳ್ಳಬೇಕು. ಡಿಜಿಟಲ್ ಸಾಧನಗಳ ಬಳಕೆ, ಕಾನೂನು ಸಂಶೋಧನೆ, ಮತ್ತು ಆನ್‌ಲೈನ್ ವೇದಿಕೆಗಳ ಮೂಲಕ ತಮ್ಮ ಸಾಮರ್ಥ್ಯವನ್ನು ವಿಸ್ತರಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

# ಪತ್ರಕರ್ತರ ಕಾರ್ಯ ಶ್ಲಾಘನೀಯ: ನಿರಂಜನ ಪ್ರಭು

• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ಸಾಮಾನ್ಯರ ಬದುಕಿಗೆ ಸ್ಪಂಧಿಸುವ ಹಾಗೂ ಸಮಾಜದ ಅಂಕುಡೊಂಕು ತಿದ್ದುವ ಪತ್ರಕರ್ತರು ಅನೇಕ ತೊಂದರೆ ಅನುಭವಿಸುತ್ತಿದ್ದಾರೆ. ಜಗತ್ತಿನ ಪ್ರಸ್ತುತ ವಿದ್ಯಾಮಾನಗಳ ವಿಚಾರ, ಚಿಂತನೆಗಳನ್ನು ತಿಳಿಸುವ ಪತ್ರಕರ್ತರ ಕಾರ್ಯ ಶ್ಲಾಘನೀಯ ಎಂದು ಕೊಟ್ಟೂರುಸ್ವಾಮಿ ಶಾಖಾ ಮಠದ ಪರಮಪೂಜ್ಯ ನಿರಂಜನ ಪ್ರಭು ಮಹಾಸ್ವಾಮಿಗಳು ತಿಳಿಸಿದರು.

ಅವರು ಪಟ್ಟಣದ ರೈತ ಸಮುದಾಯ ಭವನದಲ್ಲಿ ಕರ್ನಾಟಕ ಪತ್ರಕರ್ತರ ಸಂಘ, ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಘಟಕ ವತಿಯಿಂದ ಹಮ್ಮಿಕೊಂಡಿದ್ದ ಪತ್ರಕರ್ತರ ಕುರಿತು ಕವಿಗೋಷ್ಠಿ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಸೋಮವಾರ ಉದ್ಘಾಟಿಸಿ ಮಾತನಾಡಿದರು.

ಸಂವಿಧಾನದ ನಾಲ್ಕನೇ ಅಂಗವಾದ ಪತ್ರಿಕಾರಂಗ ಪ್ರಜಾಪ್ರಭುತ್ವದ ರಕ್ಷಣೆ ಮಾಡುತ್ತಿದೆ. ಆದರೆ ಸ್ಥಳೀಯ ಪತ್ರಕರ್ತರು ಉತ್ತಮ ವರಿದಿಗಾರಿಕೆ ಮೂಲಕ ಸಮಾಜದ ಸ್ವಾಥ ರಕ್ಷಿಸುತ್ತಿದ್ದಾರೆ. ಇಂತಹ ಪತ್ರಕರ್ತರ ರಕ್ಷಣೆಗೆ ಸರಕಾರ ಮುಂದಾಗುವ ಅವಶ್ಯಕತೆವಿದೆ. ಅಧುನಿಕ ಯುಗದಲ್ಲಿ ಮಾನವೀಯ ಮೌಲ್ಯಗಳು, ವಿಚಾರ, ಚಿಂತನೆಗಳು ಕಣ್ಮರೆಯಾಗುತ್ತಿವೆ. ಇಂತಹ ವಿಚಾರ, ಚಿಂತನ ಕವಿಗೋಷ್ಠಿ ಕಾರ್ಯಕ್ರಮ ಹೆಚ್ಚು ಹೆಚ್ಚು ಹಮ್ಮಿಕೊಳ್ಳುವ ಮೂಲಕ ಸ್ವಾಸ್ಥ ￼￼ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದರು.



ಕರ್ನಾಟಕ ಪ್ರಾಂತ ರೈತ ಸಂಘದ ಮುಖಂಡ ವಿಎಸ್.ಶಿವಶಂಕರ್ ಮಾತನಾಡಿ, ಸಮಾಜಕ್ಕೆ ನಿತ್ಯ ವಿಷಯ ತಿಳಿಸುವ ಪತ್ರಕರ್ತರ ಬುದಕು ಅತಂತ್ರ ಸ್ಥಿಯಲ್ಲಿದೆ. ಸಂವಿಧಾನದ ನಾಲ್ಕನೇ ಅಂಗ ಎನ್ನುವ ಪತ್ರಕರ್ತರ ಬದುಕೇ ಅತಂತ್ರಸ್ಥಿತಿಯಲ್ಲಿದ್ದಾಗ ಸಮಾಜದ ಸ್ಥಿತಿ ಎಂತಿರಬಹುದು ಎಂಬುದನ್ನು ಊಹಿಸಬೇಕಿದೆ. ಪತ್ರಿಕೆ ಇಲ್ಲವೆ ಪತ್ರಕರ್ತರು ಇಲ್ಲದಿದ್ದರೆ ಸಮಾಜದ ಸ್ಥಿತಿ ಏನಾಗಬಹುದು ಎಂಬುವುದನ್ನು ನೆನಪಿಸಿಕೊಳ್ಳಲೂ ಸಾಧ್ಯವಿಲ್ಲ. ಹಾಗಾಗಿ ನಿರಂತರ ಸಮಾಜದಲ್ಲಿ ಜರುಗುತ್ತಿರುವ ಅನ್ಯಾಯ, ಭ್ರಷ್ಟಾಚಾರ ನಿಯಂತ್ರಿಸುವ ಮೂಲಕ ಸದೃಢ ಸಮಾಜದ ನಿರ್ಮಾಣಕ್ಕೆ ಪಣ ತೊಟ್ಟು ನಿಂತಿರುವ ಪತ್ರಕರ್ತರ ಉಳಿವಿಗಾಗಿ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಘದ ಜಿಲ್ಲಾಧ್ಯಕ್ಷ ಯಳ್ಳಿ ವಲಿಭಾಷಾ ಮಾತನಾಡಿ, ಪ್ರತಿಯೊಬ್ಬ ಪತ್ರಕರ್ತರು ಅನ್ಯಾಯದ ವಿರುದ್ಧ ಧೈರ್ಯದಿಂದ ಹಾಗೂ ನಿಷ್ಪಕ್ಷಪಾತವಾಗಿ ಸುದ್ದಿ ಮಾಡಲು ಮುಂದಾಗಬೇಕು. ಆಗ ಸಮಾಜದ ಸುವ್ಯವಸ್ಥೆ ಕಾಪಾಡಲು ಸಾಧ್ಯ ಎಂದರು.

ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ಕಸಾಪ ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ ಮಾತನಾಡಿ, ಪತ್ರಕರ್ತರ ಕುರಿತು ಕವಿಗಳು ವಾಚಿಸದ ಕವನಗಳು ಸಮಾಜ ತಿದ್ದುವ ಕಾರ್ಯದಲ್ಲಿ ಮಗ್ನರಾಗಿರುವ ಪತ್ರಕರ್ತರ ನೀಲುವು ಆಗಸಕ್ಕೆ ಮುಟ್ಟಿದವು. ಸಮಾಜದ ಚಿಂತನೆ ಬಯಸುವ ಸಾಹಿತಿಗಳು ಹಾಗೂ ಪತ್ರಕರ್ತರು ಸಮಾಜಕ್ಕೆ ಅವಶ್ಯಕ ಎಂದರು.

ವೇದಿಕೆಯಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ನೌಕರರ ಕ್ಷೇತ್ರದಲ್ಲಿ ತಹಶೀಲ್ದಾರ್ ನರಸಪ್ಪ, ಸಮಾಜಸೇವೆ ಕ್ಷೇತ್ರದಲ್ಲಿ ಮೇಲುಮಠದ ಷಡಕ್ಷರಿಸ್ವಾಮಿ, ಸಾಹಿತ್ಯ ಕ್ಷೇತ್ರದಲ್ಲಿ ಡಾ.ತಿಪ್ಪೇರುದ್ರ ಸಂಡೂರು, ಕೃಷಿ ಕ್ಷೇತ್ರದಲ್ಲಿ ಮ್ಯಾಳೂರು ಶರಣನಗೌಡ ರವರಿಗೆ ಪ್ರಶಸ್ತಿ ನೀಡಿ ಗೌರವಿಸಿದರು.

ಕವಿಗೋಷ್ಠಿಯಲ್ಲಿ ಕೆಬಿ.ವೀರೇಶ್, ಬಿ.ಅರುಣ್ ಕುಮಾರ್, ಮಂಜುನಾಥಸ್ವಾಮಿ, ಗವಿಸಿದ್ದಪ್ಪ ಅಲ್ಲಾನಗರ, ಮೆಹಬೂಬು ಖಾಸಿಂ ಅಜೀಜ್, ಎಂ.ಬಸವರಾಜ, ಚಾನಾಳ ಅಂಬರೀಶ್, ದಾಕ್ಷಯಿಣಿ ಮಸೂತಿ ಹಾಗೂ ಇನ್ನಿತರ ಕವಿಗಳು ಕವನ ವಾಚಿಸಿದರು.

ಈ ಸಂದರ್ಭದಲ್ಲಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲೆ ಡಾ.ಶಾಂತಲಾ, ಪುರಸಭೆ ಮುಖ್ಯಾಧಿಕಾರಿ ದತ್ತಾತ್ರೇಯ ಹೆಗಡೆ, ಉಪ ಖಜಾನೆ ಅಧಿಕಾರಿ ಅಲ್ಲಾ ಬಕಾಷಿ, ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷ ಕೆ.ವೀರಭದ್ರಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದುರ್ಗೇಶ್ ಯಾದವ್, ಕಂಪ್ಲಿ ಅಧ್ಯಕ್ಷ ರಘುವೀರ್, ಸಿರುಗುಪ್ಪ ಅಧ್ಯಕ್ಷ ಮೆಹಬೂಬು ಭಾಷಾ, ಕಂಪ್ಲಿ ಪ್ರದಾನ ಕಾರ್ಯದರ್ಶಿ ಮರಿಯಪ್ಪ, ಸದಾಶಿವಸ್ವಾಮಿ, ಗುಂಡಪ್ಪನವರ ನಾಗರಾಜ, ತುಕರಾಮಗೊರವ, ಬಸ್ ಡಿಪೋ ವ್ಯವಸ್ಥಾಪಕರು, ಕರವೇ ಅಧ್ಯಕ್ಷರು, ಪತ್ರಕರ್ತರ ಸಂಘದ ಅಧ್ಯಕ್ಷ ಎಂ.ಅಣ್ಣಯ್ಯ ಸ್ವಾಮಿ, ಕಸಾಪ ಅಧ್ಯಕ್ಷ ನಾಗರಾಜ ಮಸೂತಿ, ಎನ್.ಬಸವರಾಜ, ನಾಗಲಿಂಗಸ್ವಾಮಿ, ಸಿದ್ದಪ್ಪ, ರಾಜಸಾಬ್, ಆಶೋಕ್, ಶೇಖರ್, ಪಟ್ಟಣದ ಮತ್ತು ಸಂಘ ಸಂಸ್ಥೆಗಳ ಮುಖಂಡರು ಹಾಗೂ ಪದವಿ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅವಧಿ ವಿಸ್ತರಣೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರದೇಶಿಕ ಕೇಂದ್ರದಲ್ಲಿ ಸ್ನಾತಕ, ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಾತಿ ಅವಧಿಯನ್ನು ಏಪ್ರಿಲ್ 10ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿಕೃತ ಜಾಲತಾಣ www.ksoumysuru.ac.in ನಲ್ಲಿ ಅರ್ಜಿ ಭರ್ತಿ ಮಾಡಿ ನಂತರ ಪ್ರಾದೇಶಿಕ ಕೇಂದ್ರಕ್ಕೆ ಭೇಟಿ ನೀಡಿ ಪ್ರವೇಶಾತಿ ಪಡೆಯಬಹುದುದಾಗಿದೆ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಪ್ರಾದೇಶಿಕ ಕೇಂದ್ರ, ಕನ್ನಡ ವಿಶ್ವವಿದ್ಯಾಲಯ ಆವರಣ ಅಥವಾ ದೂ.ಸಂ: 8088457148, 8296680114, 8088681698 ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕ ಮೈತ್ರಿ ಡಿ.ಎಸ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಗೀತ ಕುರ್ಚಿ ಸ್ಪರ್ಧೆಯಲ್ಲಿ ಕುಸಿದುಬಿದ್ದು ಮಹಿಳೆ ಸಾವು

• ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ

ಅಂಕೋಲಾ ತಾಲೂಕಿನ ಬೈಲಕೇರಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸುವರ್ಣ ಮಹೋತ್ಸವದ ನಿಮಿತ್ತ ಹಮ್ಮಿಕೊಳ್ಳಲಾದ ಸಂಗೀತ ಕುರ್ಚಿ ಕಾರ್ಯಕ್ರಮದಲ್ಲಿ ಸ್ಪರ್ಧಿಸಿದ್ದ ಮಹಿಳೆಯೊಬ್ಬಳು ತಲೆ ತಿರುಗಿ ಕುಸಿದು ಬಿದ್ದು ಮೃತಪಟ್ಟ ಘಟನೆ ಭಾನುವಾರ ನಡೆದಿದೆ.

ಬೈಲಕೇರಿಯ ಗೌರಿ ಕುಸ್ಲು ಗೌಡ (55) ಇವರೇ ಮೃತಪಟ್ಟ ಮಹಿಳೆಯಾಗಿದ್ದಾಳೆ. ಬೈಲಕೇರಿ ಶಾಲೆಯ ಸುವರ್ಣ ಮಹೋತ್ಸವವನ್ನು ಏ.10 ರಂದು ಹಮ್ಮಿಕೊಂಡಿದ್ದರು.

ಶಿಕ್ಷಣ ಸಚಿವರಿಂದ ಹಿಡಿದು ಹಲವು ಜನಪ್ರತಿನಿಧಿಗಳನ್ನು ಆಹ್ವಾನಿಸಿದ್ದರು. ಈ ಸಂದರ್ಭದಲ್ಲಿ ಶಾಲೆಯ ಹಳೆಯ ವಿದ್ಯಾರ್ಥಿಗಳಿಗೆ, ಗ್ರಾಮಸ್ಥರಿಗೆ ವಿವಿಧ ಕ್ರೀಡೆಯನ್ನು ಹಮ್ಮಿಕೊಂಡಿದ್ದರು. ಅದರಲ್ಲಿ ಸಂಗೀತ ಕುರ್ಚಿಯು ಒಂದಾಗಿತ್ತು.

ಇವರು ಬಿದ್ದ ತಕ್ಷಣ ಗೋಕರ್ಣದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ತರಲಾಯಿತು. ಆದರೆ ಆಸ್ಪತ್ರೆಗೆ ಬರುವಷ್ಟರಲ್ಲಿ ವಿಧಿವಶರಾಗಿದ್ದರು ಎಂದು ವೈದ್ಯ ಡಾ. ಜಗದೀಶ ನಾಯ್ಕ ಪ್ರತಿಕ್ರಿಯಿಸಿದ್ದಾರೆ. ಈ ಕುರಿತು ಅಂಕೋಲಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪಿಎಸ್ಐ ಲಲಿತಾ ರಜಪೂತ ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಒತ್ತಡ ಜೀವನಕ್ಕೆ ಸಂಗೀತ ಸಹಕಾರಿ: ವೀಣಾ ಗುಳೇದಗುಡ್ಡ



• ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ


ನಮ್ಮ ಮನಸ್ಸನ್ನು ಶುದ್ಧಗೊಳಿಸುವ ಶಕ್ತಿ ಸಂಗೀತಕ್ಕಿದೆ ಎಂದು ಡಾ. ವೀಣಾ ಗುಳೇದಗುಡ್ಡ ಅಭಿಪ್ರಾಯಪಟ್ಟರು.

ಪಟ್ಟಣದ ಮಯೂರಿ ನಾಟ್ಯಶಾಲೆಯ ವಾರ್ಷಿಕೋತ್ಸವ ಹಾಗೂ ಸಪ್ತಸ್ವರ ಸಂಗೀತ ಶಾಲೆಯ ಪ್ರಾರಂಭೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಇಂದಿನ ಒತ್ತಡದ ಜೀವನಕ್ಕೆ ಸಂಗೀತ ಅಗತ್ಯವಾಗಿದೆ. ಮನಸ್ಸಿಗೆ ಮುದ ನೀಡುವ ಸಂಗೀತದ ಜೀವಾಳ ರಾಗವಾಗಿದೆ. ಮಾನಸಿಕ ನೆಮ್ಮದಿ ಆರೋಗ್ಯ ಬೇಜಾರು ಕಳೆಯಲು ಸಂಗೀತ ಜೀವನದ ಭಾಗವಾಗಿದೆ.. ದೇಶಿ ಕಲೆಗೆ ಪ್ರೋತ್ಸಾಹ ನೀಡುವ ಅವಶ್ಯಕತೆ ಇದೆ ಎಂದರು.

ಸ್ಥಳೀಯ ಸಿದ್ದಲಿಂಗ ಶ್ರೀಗಳು, ವಿಶ್ವಕರ್ಮ ಸಮಾಜದ ಅಧ್ಯಕ್ಷ ಡಾ. ಕೆ ಬಿ ಕಡೆಮನಿ, ನಾಟ್ಯಕಲಾ ಅಕಾಡೆಮಿಯ ಲಕ್ಷ್ಮಿ ತೇರದಾಳಮಠ, ಸಂಗೀತ ಶಿಕ್ಷಕಿ ಸ್ಮೃತಿ ಯಾದವಾಡ, ಕರುಣಾ ಬಾಂಬಿರೆ, ವಿಭಾ ವೈ ಕುಲಕರ್ಣಿ ಸೇರಿದಂತೆ ಅನೇಕರು ಮಾತನಾಡಿದರು. ಈ ಸಂದರ್ಭದಲ್ಲಿ ಅಕಾಡೆಮಿ ಅಧ್ಯಕ್ಷ ಪೂರ್ಣಿಮಾ ಕರುಣಾಕರ ಚೌದರಿ ಸದಸ್ಯರಾದ ಪುಷ್ಪ ಹೂಗಾರ, ಡಾ. ಸ್ನೇಹ ಕಲ್ಲೂರ, ಮಹಾದೇವಿ ಬಿರಾದಾರ, ಶಿಲ್ಪಾ ಕಿಣಿಗಿ, ಲಕ್ಷ್ಮಿ ಕಿಣಿಗಿ, ರಂಜನಾ ಅಗರವಾಲ ಸೇರಿದಂತೆ ಅನೇಕರು ಹಾಜರಿದ್ದರು. ರೇವತಿ ವಂದಾಲಮಠ ಸ್ವಾಗತಿಸಿದರು. ಡಾ. ಮಂಜುಳಾ ಪಾಟೀಲ ವರದಿ ವಾಚಿಸಿದರು, ರಾಜೇಶ್ವರಿ ಯರನಾಳ ವಂದಿಸಿದರು . ಶ್ರೀದೇವಿ ಹಿರೇಮಠ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಮಯೂರಿ ನಾಟ್ಯಶಾಲೆ ಮಕ್ಕಳಿಂದ ನೃತ್ಯ ಪ್ರದರ್ಶನ ಹಾಗೂ ಪ್ರತಿಭಾವಂತ ಮಕ್ಕಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

# ಉಪವಾಸ, ವನವಾಸ ಇದ್ದರೂ ಚಿಂತೆ ಇಲ್ಲ, ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಿ: ಬಳೂಟಗಿ



• ಮಲ್ಲಮ್ಮ ನುಡಿವಾರ್ತೆ ಕುಕನೂರ

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ನಮ್ಮ ಮಕ್ಕಳು ಪ್ರಗತಿ ಸಾಧಿಸಲು ಕಡ್ಡಾಯವಾಗಿ ಪ್ರತಿಯೊಬ್ಬರಿಗೂ ಶಿಕ್ಷಣ ನೀಡಿ ಮಕ್ಕಳನ್ನು ಸುಸಂಸ್ಕೃತ ನಾಗರಿಕರನ್ನಾಗಿ ಮಾಡಿ ಎಂದು ಗೋರ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ ಬಳೂಟಗಿ ಹೇಳಿದರು. ಕುಕನೂರ ತಾಲೂಕಿನ ವಟಪರವಿ ತಾಂಡಾದಲ್ಲಿ ನಡೆದ ಸದ್ಗುರುಶ್ರೀ ಸೇವಾಲಾಲ ಮಹಾರಾಜರ ಭೋಗ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ನಮ್ಮ ವೈಯುಕ್ತಿಕ ಜೀವನದಲ್ಲಿ ಎಷ್ಟೇ ಕಷ್ಟ ಇದ್ದರೂ ಸಹ ಗಂಡು ಹೆಣ್ಣು ಎಂಬ ಭೇಧ ಮಾಡದೇ ಪ್ರತಿಯೊಬ್ಬರಿಗೂ ಶಿಕ್ಷಣ ನೀಡಿ,

ನಮ್ಮ ಬಂಜಾರ ಸಮಾಜ ಹೊಟ್ಟೆ ಪಾಡಿಗಾಗಿ ಕಬ್ಬು ಕಡಿಯಲು, ಕಲ್ಲು ಹೊಡೆಯಲು, ಕಟ್ಟಡ ನಿರ್ಮಾಣ ಕೆಲಸಕ್ಕೆ ಬೇರೆ ಬೇರೆ ರಾಜ್ಯಕ್ಕೆ ಗುಳೆ ಹೋಗುವ ಸಂಧರ್ಭದಲ್ಲಿ ನಮ್ಮ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿರುವುದು ದುರಂತದ ವಿಷಯ. ಯಾವುದೇ ಸರಕಾರ ಅಧಿಕಾರದಲ್ಲಿದ್ದರೂ ಕೂಡ ನಮ್ಮ ಸಮಾಜಗಳಿಗೆ ಸಾಮಾಜಿಕ ನ್ಯಾಯ ಒದಗಿಸಿಲ್ಲ. ಹೀಗಾಗಿ ನಾವು ಅರೆ ಹೊಟ್ಟೆ ಉಪವಾಸ ಇದ್ದರೂ ಚಿಂತೆ ಇಲ್ಲ ಮಕ್ಕಳಿಗೆ ವಿದ್ಯಾವಂತರನ್ನಾಗಿ ಮಾಡಿದಾಗ ಮಾತ್ರ ನಮ್ಮ ಸಮಾಜ ಪ್ರಗತಿ ಹೊಂದಲು ಸಾಧ್ಯ ಎಂದು ಹೇಳಿದರು. ಗೋರ ಸಿಕವಾಡಿ ಫುಲ್ ಟೈಮರ್ (ಪೂರ್ಣಾವಧಿ ಕಾರ್ಯಕರ್ತ) ಶ್ರೀ ಉಮೇಶ ರಾಠೋಡ ಅವರು ಮಾತನಾಡಿ ನಮ್ಮ ಸಮಾಜ ದೇಶದ ಪ್ರತಿಯೊಂದು ರಾಜ್ಯಲ್ಲಿದ್ದು ಇಲ್ಲಿನ ಭ್ರಷ್ಟ ವ್ಯವಸ್ಥೆ ನಮ್ಮನ್ನು ಹರಿದು ಹಂಚಿದ್ದಾರೆ, ನಾವೆಲ್ಲ ನಮ್ಮ ಭಾಷೆ, ಉಡುಗೆ, ಆಚಾರ, ವಿಚಾರ ಸಿದ್ಧಾಂತಗಳನ್ನು ಕಾಪಾಡಿಕೊಂಡು ಮುಂದಿನ ಪೀಳಿಗೆಗೆ ಧಾರೆ ಎರೆದು ನಮ್ಮ ಸಮಾಜ ಒಗ್ಗಟ್ಟಿನಿಂದ ಸಂಘಟಿ–ತರಾಗಿ ಬಾಳಿದಾಗ ಮಾತ್ರ ನಮಗೆ

ಈ ದೇಶದಲ್ಲಿ ಸಮಾನ ಹಕ್ಕು, ಅವಕಾಶ ಸಿಗುತ್ತದೆ, ಇಲ್ಲದಿದ್ದರೆ ಹೀಗೇ ನಾವು ಹೊಟ್ಟೆ ಹೊರೆಯಲು ಗುಳೆ ಹೋಗಿ ನಮ್ಮ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿ ಮಾಡಿದರೆ ನಮ್ಮ ಸಮಾಜ ದಿನಸ್ಥಿತಿಗೆ ತಲುಪುತ್ತದೆ, ಹೀಗಾಗಿ ಶಿಕ್ಷಣ, ಸಂಘಟನೆ, ಹೋರಾಟದ ಸಿದ್ಧಾಂತದ ಅಡಿಯಲ್ಲಿ ಹೋದರೆ ಮಾತ್ರ ಅಭಿವೃದ್ಧಿ ಹೊಂದುತ್ತೇವೆ ಎಂದರು.

ಗೋರ ಸೇನಾ ಕುಕನೂರ ತಾಲೂಕ ಅಧ್ಯಕ್ಷರಾದ ವೆಂಕಟೇಶ ರಾಠೋಡ ಪ್ರಾಸ್ತಾವಿಕ ನುಡಿ ಮಾತನಾಡಿದರು. ಗೋರ ಸೇನಾ ಮುಖಂಡ ವಿಶ್ವನಾಥ ರತನ್ ಸಮಾಜದ ಆಗು ಹೋಗುಗಳ ಬಗ್ಗೆ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ತಾಂಡಾದ ಹಿರಿಯರಾದ ಮೌನೇಶ ಲಮಾಣಿ, ಹನುಮಪ್ಪ ಲಮಾಣಿ, ಸೋಮಪ್ಪ ಪೂಜಾರ, ಪರಶುರಾಮ ಲಮಾಣಿ, ಹರಿಕೃಷ್ಣ ಲಮಾಣಿ, ಮಂಜುನಾಥ ಲಮಾಣಿ, ಕಸ್ತೂರಪ್ಪ ಲಮಾಣಿ, ಲೋಕೇಶ ಅಕ್ಕಸಾಲಿಗ, ಲಚಮಪ್ಪ ಕಾರಭಾರಿ ಹಾಗೂ ಗುರು ಹಿರಿಯರು, ತಾಯಂದಿರು ಭಾಗವಹಿಸಿದ್ದರು.

# ಮಾವಿನ ಹಣ್ಣಿನ ಕೊರಕ ನೊಣದ ಹತೋಟಿಗೆ: ತೋಟಗರಿಕೆ ಇಲಾಖೆ ಕ್ರಮ ಅನುಸರಿಸಿ

• ಮಲ್ಲಮ್ಮ ನುಡಿ ವಾರ್ತೆ, ವಿಜಯನಗರ

ಜಿಲ್ಲೆಯ ಎಲ್ಲಾ ಮಾವು ಬೆಳೆಯುವ ರೈತರಿಗೆ ಉತ್ತಮ ಗುಣ ಮಟ್ಟದ ಮಾವಿನ ಫಸಲನ್ನು ಪಡೆದುಕೊಳ್ಳಲು ಮಾವಿನ ಹಣ್ಣಿನ ಕೊರಕ ನೊಣದ ಹತೋಟಿ ಹಲವು ಕ್ರಮಗಳ ಸೂಚಿಸಿದ್ದು, ಎಲ್ಲಾ ಮಾವು ಬೆಳಗಾರ ರೈತರು ಅನುಸರಿಸುವಂತೆ ಹಿರಿಯ ತೋಟಗಾರಿಕಾ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇತ್ತೀಚೆಗೆ ಮಾವಿನ ಬೆಳೆಯಲ್ಲಿ ಹಣ್ಣಿನ ಕೊರಕ ನೊಣದ ಹಾವಳಿ ಹೆಚ್ಚಾಗುತ್ತಿದ್ದು ಇದರಿಂದ ಶೇ.20 ರಷ್ಟು ಇಳುವರಿ ಕುಂಠಿತವಾಗುತ್ತಿರುವುದಲ್ಲದೆ ಮಾರುಕಟ್ಟೆಯಲ್ಲಿ ಹಣ್ಣಿನ ಬೇಡಿಕೆ ಇಳಿಯುವಂತಾಗಿರುತ್ತದೆ. ಇದರ ಹಾವಳಿ ತಡವಾಗಿ ಹಣ್ಣು ಬಿಡುವ ತಳಿಗಳಲ್ಲಿ ಹೆಚ್ಚು ಕಂಡುಬರುತ್ತದೆ. ಮಾವಿನ ಹಣ್ಣಿನ ಕೊರಕ ನೊಣವು ಒಂದು ಮಧ್ಯಮ ಗಾತ್ರದ ನೊಣವಾಗಿದ್ದು ಇದು ಮಾವು ಕಾಯಿ ಹಂತದಲ್ಲಿದ್ದಾಗ ಮೊಟ್ಟೆಗಳನ್ನು ಇಡುತ್ತದೆ. ನೊಣವು ಫೆಬ್ರವರಿ– ಮಾರ್ಚ್ ಮಾಹೆಯಲ್ಲಿ ಕಾಯಿಗಳ ಮೇಲೆ ಮೊಟ್ಟೆ ಇಡುತ್ತದೆ , ಕಾರಣ ಮೊಟ್ಟೆಗಳನ್ನು ನಾಶ ಮಾಡುವುದರಿಂದ ಪ್ರಾಥಮಿಕ ಹಂತದಲ್ಲಿ ಹತೋಟಿ ಮಾಡಬಹುದು. ಇದಕ್ಕಾಗಿ ಫೆನಿಥಿಯಾನ್ 01 ಮಿ.ಲೀ ನ್ನು 01 ಲೀಟರ್ ನೀರಿಗೆ ಬೆರೆಸಿ ಸಿಂಪಡಿಸುವುದರಿಂದ ಹತೋಟಿ ಮಾಡಬಹುದು. ಫೆರಮೋನ್ (ಆಕರ್ಷಕ) ಬಲೆಗಳನ್ನು ಉಪಯೋಗಿಸಿ 01 ಲೀಟರ್ ನೀರಿನಲ್ಲಿ ಮಿಥೈಲ್ ಯೂಜಿನಾಲ್ 01 ಮಿಲೀ ಮತ್ತು 01 ಮಿಲೀ ಮೆಲಾಥಿಯಾನ್ ಕಲಸಿ ಪ್ರತಿ ಎಕರೆಗೆ 3–4 ಬಲೆಗಳನ್ನು ಅಲ್ಲಲ್ಲಿ ಇಡುವುದರಿಂದಲೂ ಹತೋಟಿ ಸಾಧ್ಯ. ಪೂರ್ಣ ಮಾಗುವ ಹಂತದ ಮಾವಿನ ಕಾಯಿಗಳನ್ನು ಕೊಯ್ಲುಮಾಡಿ, ಮರದಲ್ಲೇ ಹಣ್ಣಾಗಲು ಬಿಡಬೇಡಿ.

ಕೊಯ್ಲಿನ ನಂತರ ಕಾಯಿಯ ಮೇಲೆ ಈಗಾಗಲೇ ಇಟ್ಟಿರುವ ಮೊಟ್ಟೆಗಳನ್ನು ನಾಶಮಾಡಲು ಕಾಯಿಗಳನ್ನು ಉಪ್ಪಿನ ದ್ರಾವಣದಲ್ಲಿ 30 ಸೆಕೆಂಡ್ ನೆನೆಸಬೇಕು. ಹಾಗೆಯೇ ಮಾಗಿ ಉಳುಮೆ ಮಾಡುವುದರಿಂದ ನೆಲದೊಳಗೆ ಅವಿತಿರುವ ನೊಣದ ಪ್ಯುಪಾ ಹೊರಬಂದು ಬಿಸಿಲಿಗೆ ಸಾಯುತ್ತದೆ ಅಥವಾ ಇತರೆ ಪಕ್ಷಿಗಳು ತಿನ್ನುತ್ತವೆ.

ಹೆಚ್ಚಿನ ಮಾಹಿತಿಗಾಗಿ ರೈತರು ಆಯಾ ಹೋಬಳಿಯ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸಂಪರ್ಕಿಸಬಹುದಾಗಿದೆ. ಸಹಾಯಕ ತೋಟಗಾರಿ–ಕೆ ಅಧಿಕಾರಿ, ರೈತ ಸಂಪರ್ಕ ಕೇಂದ್ರ ಹೊಸಪೇಟೆ 9164297220ನ ಮರಿಯಮ್ಮನಹಳ್ಳಿ 7204888978, ಕಮಲಾಪುರ 8123465548 ಹೊಸಪೇಟೆ 8310291867 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ವ್ಯಕ್ತಿ ಕಾಣೆ ಮತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ, ವಿಜಯನಗರ

ಜಿಲ್ಲೆಯ ಕೊಟ್ಟೂರು ಪಟ್ಟಣದ 4ನೇ ವಾರ್ಡ ಮುದುಕನಕಟ್ಟಿ ಗ್ರಾಮದ ನಿವಾಸಿ ಮಲ್ಲೇಶ್ ಹಡಪದ ತಂದೆ ಶೇಖರಪ್ಪ ಹಡಪದ (ಸುಮಾರು 40 ವರ್ಷ) ವ್ಯಕ್ತಿ ಕಾಣೆಯಾಗಿದ್ದು, ಈ ಕುರಿತು ಮಾರ್ಚ್ 3 ರಂದು ಹರಪನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ಮಲ್ಲೇಶ್ ಹಡಪದ 5.3 ಅಡಿ ಎತ್ತರ, ಸಾಧಾರಣ ಮೈಕಟ್ಟು, ಕೋಲು ಮುಖ, ಕಪ್ಪು ಕೂದಲು, ಎಣ್ಣೆ ಕೆಂಪು ಬಣ್ಣ ಹೊಂದಿದ್ದು, ಮನೆಯಿಂದ ಹೋಗುವಾಗಬಿಳಿ ಬಣ್ಣ ಟೀ ಶರ್ಟ್, ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿದ್ದು, ಕನ್ನಡ ಮತ್ತು ಹಿಂದೆ ಭಾಷೆ ಮಾತನಾಡುವರು.

ಈ ಮೇಲ್ಕಂಡ ವ್ಯಕ್ತಿ ಮಾಹಿತಿ ತಿಳಿದುಬಂದಲ್ಲಿ ಪೊಲೀಸ್ ಉಪ ನಿರೀಕ್ಷಕರು ಹರಪನಹಳ್ಳಿ ದೂರವಾಣಿ ಸಂಖ್ಯೆ: 9480805776, ಸಿಪಿಐ ದೂ.ಸಂ: 9480805736, ಪೊಲೀಸ್ ಕಂಟ್ರೋಲ್ ರೂಂ ವಿಜಯನಗರ ದೂ.ಸಂ: 9480805700 ಗೆ ಸಂಪರ್ಕಿಸಬಹುದು ಎಂದು ಹರಪನಹಳ್ಳಿ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.12ಕ್ಕೆ ಅಲ್ಪಸಂಖ್ಯಾತರ ವಸತಿ ಶಾಲೆಗಳ ಪ್ರವೇಶ ಪರೀಕ್ಷೆ

• ಮಲ್ಲಮ್ಮ ನುಡಿ ವಾರ್ತೆ, ವಿಜಯನಗರ

2026–27ನೇ ಸಾಲಿನ ಶೈಕ್ಷಣಿಕ ವರ್ಷದ ಎಲ್ಲಾ ಅಲ್ಪಸಂಖ್ಯಾತರ ವಸತಿ ಶಾಲೆಗಳ ಪ್ರವೇಶ ಪರೀಕ್ಷೆಯನ್ನು ಏಪ್ರೀಲ್ 12ರಂದು ನಿಗಧಿಪಡಿಸಿದ್ದು, https://erp.dom.karnataka.gov.in/adm/Admission/StudentHallticket ಇಲಾಖೆ ವೆಬ್ ಸೈಟ್ ಭೇಟಿ ನೀಡಿ ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಳ್ಳಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕೆ.ಜಾವೀದ್ ಕರಂಗಿ ತಿಳಿಸಿದ್ದಾರೆ.

# ರಾಷ್ಟ್ರೀಯ ಶಿಶಿಕ್ಷು ಮೇಳ

• ಮಲ್ಲಮ್ಮ ನುಡಿ ವಾರ್ತೆ, ವಿಜಯನಗರ

ನಗರದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಜಂಬುನಾಥಹಳ್ಳಿಯಲ್ಲಿ ಏಪ್ರಿಲ್ 13 ಬೆಳಗ್ಗ 9.30 ಗಂಟೆಯಿಂದ ಸಂಜೆ 5.30 ಗಂಟೆವರೆಗೆ ಪ್ರಧಾನಮಂತ್ರಿ ರಾಷ್ಟ್ರೀಯ ಶಿಶಿಕ್ಷು ಮೇಳ ಏರ್ಪಡಿಸಲಾಗಿದ್ದು, ಈ ಮೇಳದಲ್ಲಿ ಜಿಲ್ಲೆಯ ವಿವಿಧ ಉದ್ದಮಿ ಸಂಸ್ಥೆಗಳು ಹಾಗೂ ಬೆಂಗಳೂರು ಪ್ರತಿಷ್ಠಿತ ಉದ್ದಮೆದಾರರು ಪಾಲಗೊಳ್ಳಲಿದ್ದಾರೆ. ಈ ನಿಟ್ಟಿನಲ್ಲಿ ವಿವಿಧ ವೃತ್ತಿಗಳಲ್ಲಿ ಐ.ಟಿ.ಐ ಉತ್ತೀರ್ಣರಾದ ಆಸಕ್ತ ಅಭ್ಯರ್ಥಿಗಳು ತಮ್ಮ ಬಯೋಡಾಟಾ, ಎಸ್.ಎಸ್.ಎಲ್.ಸಿ. ಐ.ಟಿಐ ಅಂಕ ಪಟ್ಟಿ ಮತ್ತು ಇತ್ತೀಚಿನ ಭಾವ ಚಿತ್ರದೊಂದಿಗೆ ಶಿಶಿಕ್ಷು ಮೇಳದಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9448173151, 9480729485, 8105623424 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ನೋಡಲ್ ಅಧಿಕಾರಿ ಮೋಹನ್ ಮುರಾಳ್ ತಿಳಿಸಿದ್ದಾರೆ.

# ಮ್ಯಾನುವೆಲ್ ಕ್ಯಾವೆಂಜರ್ಸ್ ಪದ್ಧತಿ ಸಂಪೂರ್ಣ ನಿಷೇಧ

• ಮಲ್ಲಮ್ಮ ನುಡಿ ವಾರ್ತೆ , ಬೀದರ

ಬೀದರ್ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಮಾನ್ಯುಯಲ್ ಕ್ಯಾವೆಂಜರ್ಸ್ ಪದ್ಧತಿ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಒಂದು ವೇಳೆ ನಿಯಮ ಉಲ್ಲಂಘನೆ ಕಂಡು ಬಂದಲ್ಲಿ (The Prohibition of employment as manual scavengers and their rehabilitation act, 2013) ಪ್ರಕಾರ 5–ವರ್ಷ ಜೈಲು ಶಿಕ್ಷೆ ಹಾಗೂ 5– ಲಕ್ಷ ರೂಪಾಯಿವರೆಗೆ ದಂಡ ವಿಧಿಸಲಾಗುವುದು. ಕಾರಣ ತಮ್ಮ ಮನೆಯ ವೈಯಕ್ತಿಕ ಶೌಚಾಲಯಗಳ ಸೆಪ್ಟಿಕ್ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸಬೇಕಾದಲ್ಲಿ ಸಹಾಯವಾಣಿ ಸಂಖ್ಯೆ: 9886187863 (ಮಹಮ್ಮದ್ ಅತಿಕ್) ಗೆ ಸಂಪರ್ಕಿಸಬಹುದಾಗಿದೆ. ಶೌಚಾಲಯದ ಸ್ವಚ್ಛತೆಯನ್ನು ಮಹಾನಗರ ಪಾಲಿಕೆಯ ಯಂತ್ರದ ವಾಹನದಿಂದ ಸ್ವಚ್ಛಗೊಳಿಸಲಾಗುವುದೆಂದು ಬೀದರ ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2.59 ಲಕ್ಷ ಮತದಾರರು, 322 ಮತಗಟ್ಟೆ ಸ್ಥಾಪನೆ

# ಮತದಾನಕ್ಕೆ ಸಕಲ ಸಿದ್ಧತೆ : ಸಂಗಪ್ಪ



• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆಗೆ ಇದೇ ಎಪ್ರೀಲ್ 9 ರಂದು ಮತದಾನ ನಡೆಯಲಿದ್ದು, ಮತದಾನಕ್ಕೆ ಬೇಕಾಗುವ ಎಲ್ಲ ರೀತಿಯ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆಗೆ 1,26,999 ಪುರುಷ ಮತ್ತು 1,32,775 ಮಹಿಳಾ ಮತದಾರರು ಹಾಗೂ 23 ಇತರೆ ಸೇರಿ ಒಟ್ಟು 2,59,797 ಮತದಾರರಿದ್ದು, ಎಪ್ರೀಲ್ 9 ರಂದು ಮತ ಚಲಾಯಿಸಲಿದ್ದಾರೆ. ಅಲ್ಲದೇ 385 ಸೇವಾ ಮತದಾರರು, 170 ಅಂಚೆ ಮತಪತ್ರಗಳು 90 ಪಿಡಬ್ಲೂಡಿ ಮತದಾರರಿದ್ದಾರೆ. ಉಪ ಚುನಾವಣೆಗೆ ಒಟ್ಟು 322 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ನವನಗರದ ಸೆಕ್ಟರ ನಂ.43 ರಲ್ಲಿರುವ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಸ್ಟರಿಂಗ್ ಕೇಂದ್ರ ಸ್ಥಾಪಿಸಲಾಗಿದೆ ಎಂದರು.

ಪ್ರತಿ ಮತಗಟ್ಟೆಗೆ ಒಬ್ಬ ಪ್ರಿಸೆಂಡಿಂಗ್ ಅಧಿಕಾರಿ, ಹಾಗೂ 3 ಜನ ಪೋಲೀಂಗ್ ಅಧಿಕಾರಿಗಳನ್ನು ಗುರುತಿಸಲಾಗಿದ್ದು, ಹೆಚ್ಚುವರಿ ಸಿಬ್ಬಂದಿಗಳು ಸೇರಿ ಒಟ್ಟು 1564 ಸಿಬ್ಬಂದಿಗಳ ನೇಮಕ ಮಾಡಲಾಗಿದೆ. ಇದನ್ನು ಹೊರತುಪಡಿಸಿ ಅಗತ್ಯತೆ–ಗೆ ಅನುಗುಣವಾಗಿ ಮೈಕ್ರೋ ಆಬ್ಸರವರ್ ಹಾಗೂ ಪೊಲೀಸ್ ಇಲಾಖೆಯಿಂದ ಸಶಸ್ತ್ರ ಪಡೆಯನ್ನು ಸಹ ಮತಗಟ್ಟೆಗಳಿಗೆ ನೇಮಕ ಮಾಡಲಾಗಿದೆ. ಅಲ್ಲದೇ 322 ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. ಮತದಾರರ ಮತ ಚಲಾವಣೆಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಎರಡು ಪಿಂಕ್, ತಲಾ ಒಂದು ಯುವ, ಪಿಡಬ್ಲೂಡಿ, ಥೀಮ್ ಆಧಾರಿತ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

1.20 ಲಕ್ಷ ರೂ.ಗಳ ಮೌಲ್ಯ ಜಪ್ತಿ :

ನೀತಿಸಂಹಿತೆ ಜಾರಿಯಾದಾಗಿನಿಂದ 94.03 ಲಕ್ಷ ರೂ.ಗಳ ನಗದು, 39.73 ಲಕ್ಷ ರೂ.ಗಳ ಮೌಲ್ಯದ ಅಬಕಾರಿ ಇಲಾಖೆಯಿಂದ 14637.01 ಲೀಟರ ಸಾರಾಯಿ, ಪೊಲೀಸ್ ಇಲಾಖೆಯಿಂದ 194.36 ಲೀಟರ ಸಾರಾಯಿ, 9 ವಾಹನ ಜಪ್ತಿ ಮಾಡಿ 21 ಪ್ರಕರಣ ದಾಖಲಿಸಲಾಗಿದೆ. 1.20 ಲಕ್ಷ ರೂ.ಗಳ ಮೌಲ್ಯದ ಸೀರೆಗಳನ್ನು ಜಪ್ತ ಮಾಡಲಾಗಿದೆ ಎಂದರು. ಅಂತಿಮ 72 ಗಂಟೆ ನಿಶ್ಯಬ್ದ : ಮತದಾನದ ಪೂರ್ವ 72 ಗಂಟೆಗಳಲ್ಲಿ ಮತದಾರರನ್ನು ಪ್ರಭಾವಿಸುವಂತಹ ಉಡುಗೊರೆ ವಸ್ತುಗಳು ಹಾಗೂ ಕಲ್ಯಾಣ ಮಂಟಪ, ಸಮುದಾಯ ಭವನಗಳಲ್ಲಿ ಉಚಿತ ಆಹಾರ ವಿತರಿಸುವ ಬಗ್ಗೆ, ನಕಲಿ ಸಮಾರಂಭ ಆಯೋಜನೆ, ಪಿ–3 ದಿನದಿಂದ ಮತದಾನ ದಿನದ ವರೆಗೆ ಕಾಯ್ದಿರಿಸಿದ ಕಲ್ಯಾಣ ಮಂಟಪ, ಸಮುದಾಯ ಭವನಗಳ ಪಟ್ಟಿ ಮೇಲೆ, ಸಮುದಾಯ ಅಡುಗೆಯನ್ನು ಏರ್ಪಡಿಸುವದ ಮೇಲೆ ತೀವ್ರ ನೀಗಾ ವಹಿಸಲಾಗುತ್ತಿದೆ ಎಂದರು.

ಅಂತಿಮ 48 ಗಂಟೆಗಳ ನಿಶ್ಯಬ್ದ:

ಎಪ್ರೀಲ್ 7 ರಂದು ಸಂಜೆ 6 ಗಂಟೆಯಿಂದ ಚುನಾವಣಾ ಬಹಿರಂಗ ಪ್ರಚಾರವನ್ನು ನಿಷೇಧಿಸಲಾಗಿದ್ದು, ಪ್ರಚಾರ ಅವಧಿ ಕೊನೆಗೊಂಡ ಬಳಿಕ ಹೊರಗಿನ ಮತಕ್ಷೇತ್ರದಿಂದ ಕರೆತಂದ ಮತ್ತು ಈ ಕ್ಷೇತ್ರದ ಮತದಾರರಲ್ಲದೇ ಇರುವ ರಾಜಕೀಯ ಅಧೀಕಾರಸ್ಥರು, ಪಕ್ಷದ ಕಾರ್ಯಕರ್ತರು, ಮೆರವಣಿಗೆ ಸಂಬಂಧ ಕಾರ್ಯಕರ್ತರು ಸೇರಿದಂತೆ ಮುಂತಾದವರು ಆ ಕ್ಷೇತ್ರದಿಂದ ಹೊರಹೋಗಬೇಕು. ಮತದಾನ ಕೊನೆಗೊಳ್ಳಲು ನಿಗದಿಸಪಡಿಸಿದ ಅವಧಿ ಮುಕ್ತಾಯಗೊಳ್ಳುವ ಅವಧಿಯಲ್ಲಿ 5 ಜನ ಮಾತ್ರ ಮನೆ ಮನೆಗೆ ತೆರಳಿ ಪ್ರಚಾರ್ಯ ಕೈಗೊಳ್ಳಲು ಅವಕಾಶವಿರುತ್ತದೆ. ಎಪ್ರೀಲ್ 7 ಸಂಜೆ 6 ರಿಂದ ಎಪ್ರೀಲ್ 9 ಮಧ್ಯರಾತ್ರಿ 12 ಗಂಟೆವರೆಗೆ ಬಾಗಲಕೋಟೆ ಮತಕ್ಷೇತ್ರದ ಸುತ್ತಲೂ 10 ಕಿ.ಮೀ ವ್ಯಾಪ್ತಿಯಲ್ಲಿ ಬರುವ ಮದ್ಯದ ಮಳಿಗೆಗಳಲ್ಲಿ ವ್ಯಾಪಾರ, ವಹಿವಾಟನ್ನು ಸಂಪೂರ್ಣವಾಗಿ ಬಂದ ಇಡಲಾಗಿದೆ ಎಂದರು.

ವಿದ್ಯುನ್ಮಾನ, ಮುದ್ರಣ ಮಾದ್ಯಮಗಳಿಗೆ ಮಾರ್ಗಸೂಚಿ ಮತದಾನಕೆ ನಿಗದಿಪಡಿಸಿರುವ ಅವಧಿ ಕೊನೆಗೊಳ್ಳುವ 48 ಗಂಟೆಗಳ ಮುಂಚೆ ಎಲೆಕ್ಟ್ರಾನಿಕ್ ಮಾಧ್ಯಗಳಲ್ಲಿ ಚುನಾವಣಾ ಸಂಬಂಧಿತ ವಿಷಯಗಳ ಪ್ರಸಾರವನ್ನು ಪ್ರಜಾಪ್ರತಿನಿಧಿ ಕಾಯ್ದೆ–1951ರ ಕಲಂ 126ರ ಪ್ರಕಾರ ನಿಷೇಧಿಸಲಾಗಿದೆ. ಎಪ್ರೀಲ್ 8 ಮತ್ತು 9 ರಂದು ಅಭ್ಯರ್ಥಿಗಳು, ಸಂಸ್ಥೆಗಳು ಅಥವಾ ಯಾವುದೇ ವ್ಯಕ್ತಿಯು ದಿನಪತ್ರಿಕೆಗಳಲ್ಲಿ ಚುನಾವಣಾ ಜಾಹೀರಾತು ಪ್ರಕಟಿಸಬೇಕಾದರೆ ಜಿಲ್ಲಾ ಮಟ್ಟದ ಎಂಸಿಎಂಸಿ ಸಮಿತಿಯ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ. ಈ ಕಾಯ್ದೆಯನ್ನು ಉಲ್ಲಂಘಿಸಿದಲ್ಲಿ 2 ವರ್ಷಗಳಿಗೆ ವಿಸ್ತರಿಸಬಹುದಾದ ಕಾರಾಗೃಹ ಶಿಕ್ಷೆ ಅಥವಾ ದಂಡ ಮತ್ತು ಶಿಕ್ಷೆ ವಿಧಿಸಲಾಗುತ್ತದೆ. ಟಿವಿ, ರೇಡಿಯೋ, ಕೇಬಲ್ ನೆಟವರ್ಕ ಮತ್ತು ಎಲ್ಲ ಡಿಜಿಟಲ್ ಮಾಧ್ಯಮಗಳು ಮತದಾನ ಪೂರ್ವ 48 ಗಂಟೆಗಳ ಅವಧಿಯಲ್ಲಿ ಓಪಿನಿಯನ್ ಪೋಲ್ ಫಲಿತಾಂಶ ಪ್ರಕಟಿಸುವುದು, ಚರ್ಚೆ ಅಥವಾ ವಿಶ್ಲೇಷಣೆ ಏರ್ಪಡಿಸುವದನ್ನು ನಿಷೇಧಿಸಿದೆ ಎಂದರು.



ಬಸವಕಲ್ಯಾಣ :– ತಾಲೂಕಿನ ಗುಣತೀರ್ಥ ವಾಡಿಯ ಕಲ್ಯಾಣ ಮಹಾ ಮನೆಯ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಎರಡು ದಿನಗಳ ಶರಣೆ ದಾನಮ್ಮ ದೇವಿ ಉತ್ಸವ ಹಾಗೂ 4 ನೇ ಶರಣ ಸಮಾಗಮ ವನ್ನು ಬೈಲೂರ ಪೂಜ್ಯ ಶ್ರೀ ನಿಜಗುಣ ಪ್ರಭು ಮಹಾಸ್ವಾಮಿಜಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಶಿವಾನಂದ ಮಹಾಸ್ವಾಮಿಜಿ. ಕಲ್ಯಾಣ ಮಹಾಮನೆಯ ಪೂಜ್ಯ ಶ್ರೀ ಬಸವಪ್ರಭು ಸ್ವಾಮೀಜಿ. ದೀಲಿಪ ಶಿಂಧೆ. ಡಾ. ವಚನ ಕುಮಾರಸ್ವಾಮಿ. ಬಸವಕುಮಾರ ಪಾಟೀಲ. ಮಹಾಂತೇಶ ಕುಂಬಾರ. ಸತೀಶಕುಮಾರ ಮುಳೆ. ವಿಜಯ ಕುಮಾರ ತೇಗಲತಿಪಿ. ಯುವರಾಜ ಭೇಡೆ. ಸೇರಿದಂತೆ ಅನೇಕರು ರಾಜಕೀಯ ನಾಯಕರು. ಸಾಹಿತಿಗಳು. ಕಲಾವಿದರು. ಪ್ರಗತಿಪರ. ಹೋರಾಟಗಾರರು. ರೈತ ಮುಖಂಡ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಪಿಡಿಓ ವಿರುದ್ಧ ಕ್ರಮಕ್ಕೆ ಗ್ರಾಮಸ್ಥರ ಆಕ್ರೋಶ



• ಮಲ್ಲಮ್ಮ ನುಡಿ ವಾರ್ತೆ, ಗುರುಮಠಕಲ್

ತಾಲೂಕಿನ ಚಂಡರಿಕಿ ಗ್ರಾಮದಲ್ಲಿ ಮೂಲಭೂತ ಸ್ವಚ್ಛತಾ ಕಾಮಗಾರಿಗಳ ನಿರ್ಲಕ್ಷ್ಯಕ್ಕೆ ಚರಂಡಿಗಳಿಂದ ದುರ್ನಾತ ಹಾಗೂ ಸೊಳ್ಳೆಗಳ ಕಾಟಕ್ಕೆ ಗ್ರಾಮಸ್ಥರು ಪಿಡಿಓ ವಿರುದ್ಧ ಭಾನುವಾರ ಆಕ್ರೋಶಗೊಂಡಿದ್ದಾರೆ.

ಪಿಡಿಓ ಗೀತಾ ಅವರು ಹಲವು ದಿನಗಳಿಂದ ಮನವಿ ನೀಡಿದರು ಸಹ ಕೇವಲ ಮೇಲಾಧಿಕಾರಿಗಳಿಂದ ಸೂಚನೆ ಬಂದರೆ ಅಲ್ಪ ಮಟ್ಟಿಗೆ ಅಪೂರ್ಣ ಕೆಲಸ ಮಾಡುವ ಇವರ ಕಾರ್ಯವೈಖರಿಗೆ ಗ್ರಾಮದ ಸಾರ್ವಜನಿಕ ವಲಯದಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಚರಂಡಿಗಳಲ್ಲಿ ನೀರು ನಿಂತು ದುರ್ಗಂಧ ಹರಡುತ್ತಿದ್ದು, ಸೊಳ್ಳೆಗಳ ಕಾಟದಿಂದ ಮಕ್ಕಳು, ವೃದ್ಧರು, ಮಹಿಳೆಯರು ನಿದ್ರೆಯಿಂದಲೂ ವಂಚಿತರಾಗಿದ್ದಾರೆ. ಬ್ಲೀಚಿಂಗ್ ಪೌಡರ್ ಸಿಂಪಡಣೆ ಸೇರಿದಂತೆ ಯಾವುದೇ ಮುನ್ನೆಚ್ಚರಿಕೆ ಇಲ್ಲ.

> “ಪಿಡಿಓ ಗೀತಾ ಅವರಿಗೆ ಹಲವು ಬಾರಿ ಹೇಳಿದ್ದೇವೆ ಹಾಗೂ ಮನವಿಯನ್ನು ನೀಡಿದ್ದೇವೆ ,ಆದರೆ ಕೆಲಸ ಮಾತ್ರ ಅಪೂರ್ಣ, ನಮಗೆ ಸಾಕಾಗಿ ಹೋಗಿದೆ!”
> **ಮಾಧವ ರೆಡ್ಡಿ ಉಲ್ಲಿ**

> “ಪಿಡಿಓ ಅವರ ಮೊಬೈಲ್ ಸಂಖ್ಯೆಗೆ ಕರೆ ಮಾಡಿದರೆ ಅವರ ಪತಿ ಕರೆ ಸ್ವೀಕರಿಸುತ್ತಾರೆ, ನಾವು ಗ್ರಾಮದ ಸಮಸ್ಯೆಗಳನ್ನು ಯಾರಿಗೆ ಹೇಳಬೇಕು ಅರ್ಥ ಆಗುತ್ತಿಲ್ಲ
> **ಹರ್ಷವರ್ಧನ್ ರೆಡ್ಡಿ ಉಲ್ಲಿ.**

ಪಿಡಿಓ ಕಾಲಹರಣ ಮಾಡುತ್ತಾ ನೆಪಗಳನ್ನು ಹೇಳುತ್ತಿದ್ದಾರೆ ಎಂಬ ಆರೋಪ. ಕೆಲಸ ಮಾಡದ ಪಿಡಿಓ ವಿರುದ್ಧ ಮೇಲಾಧಿಕಾರಿಗಳು ತಕ್ಷಣ ಕ್ರಮ ತೆಗೆದುಕೊಳ್ಳಲು ಗ್ರಾಮಸ್ಥರು ಮನವಿ ಮಾಡಿದ್ದಾರೆ.

# ಸಂಭ್ರಮದ ಸಪ್ತಪದಿ ತುಳಿದ 81 ನವಜೋಡಿಗಳು



• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ಗಣಿನಾಡು ನೂತನ ಜೋಡಿಗಳು ಉತ್ತಮ ಜೀವನ ನಡವೆ ಅವಿಭಕ್ತ ಕುಟುಂಬದ ದೊಂದಿಗೆ ಹಿರಿಯರನ್ನು ಗೌರವಿಸಿ. ಉತ್ತಮ ಮಕ್ಕಳ ಜನ್ಮ ನೀಡಿ ಸಂಸ್ಕೃತಿಯ. ಸಾರ್ಥಕತೆ ಗೊಳಿಸಿ ಎಂದು ಶ್ರೀ ಸದ್ಗುರು ಷಡಕ್ಷರಿ ಅವ ಧೂತ ಮಹಾಸ್ವಾಮಿಗಳ ಹೇಳಿದರು ಅವರು ತಾಲೂಕಿನ ಸೋಮಲಾಪುರ ಗ್ರಾಮದಲ್ಲಿ ಆರಾಧ್ಯದೈವ ಶ್ರೀ ಚಿದಾನಂದ ಅವಧೂತರ 34 ನೇ ವರ್ಷದ ಪುಣ್ಯಾರಾಧನೆ ಪ್ರಯುಕ್ತ ಗ್ರಾಮದಲ್ಲಿ ರಥೋತ್ಸವ ಕಾರ್ಯಕ್ರಮ, ಉಚಿತ 80 ಜೋಡಿಗಳ ಸಾಮೂಹಿಕ ವಿವಾಹ ಸಾನಿಧ್ಯವಹಿಸಿ ಮಾತನಾಡಿ ಮದುವೆಗಳು ದುಂದು ವೆಚ್ಚ ಮಾಡದೇ ಸರಳ ಸಾಮೂಹಿಕ ನಮ್ಮ ಮಠದ ಹಿರಿಯ ಶ್ರೀ ಗಳು ಆಶೀರ್ವಾದದಿಂದ ಹಲವು ವರ್ಷಗಳು ಹಾಗೂ ಭಕ್ತರ ಸಹಕಾರದೊಂದಿಗೆ ಮುನ್ನಡೆದಿದೆ. ಇಂದಿನ ದಿನಗಳಲ್ಲಿ ಜನತೆ ಧಾರ್ಮಿಕ ಬಗ್ಗೆ ಹೆಚ್ಚು ಆದ್ಯತೆ ಒಲವು ವ್ಯಕ್ತಿವಾಗಿದ್ದು. ಮುಂದಿನ ಮುಂಗಾರು ಮಳೆ ಬೀಳಲಿ ರೈತರ ಬದುಕು ಹಸನಾಗಲಿ ಎಂದು ಸಂಕಲ್ಪ ಮಾಡಿದರು. ಈ ವೇಳೆ ಕಂಪ್ಲಿ ಶಾಸಕ ಜೆ.ಎನ್ ಗಣೇಶ. ಮಾಜಿ ಶಾಸಕ ಟಿ.ಎಚ್

ಸುರೇಶಬಾಬು. ಹಾಗೂ ಕ್ಷೇತ್ರದ ಸೂತ್ತಮುತ್ರಲಿನ ಎಚ್ ವೀರಾಪುರ. ಚಿಟಗಿನಹಾಳ್ . ಎಮ್ಮಿಗನೂರು. ಕಲ್ಲಕಂಭ. ಗುತ್ತಿಗನೂರು. ಓರ್ವಾಯಿ. ಪಟ್ಟಣಸೆರಗು. ನೆಲ್ಲುಡಿ. ಗೆಣಿಕೆಹಾಳ್. ಕ್ಯಾದಿಗೆಹಾಳ್. ಕೋಳೂರು. ಸೇರಿದಂತೆ ನೂರಾರು ಭಕ್ತರು ಬಾಗಿಯಾಗಿದ್ದರು.

ಹಾಗೂ ಜಾತ್ರೆಯ ದಿನ ಭಕ್ತಾದಿಗಳಿಗೆ ಅನ್ನಪ್ರಸಾದ ಜರುಗಿತು.

## ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷ ನಿಸಾರ್ ಅಹ್ಮದ್ ಆಶಯ

# 6 ವರ್ಷದ ಮಕ್ಕಳ ಸಮಗ್ರ ಸಮೀಕ್ಷೆ 3 ತಿಂಗಳಲ್ಲಿ ಪೂರ್ಣ

• ಮಲ್ಲಮ್ಮ ನುಡಿ ವಾರ್ತೆ, ವಿಜಯಪುರ

ಸಾಕ್ಷರತಾ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಜೊತೆ ಸಮನ್ವಯ ಸಭೆ ನಡೆಸಿ 6 ವರ್ಷದ ಮಕ್ಕಳ ಸಮಗ್ರ ಸಮೀಕ್ಷೆ ನಡೆಸುವಂತೆ ಸಿಇಓ ಅವರಿಗೆ ನಿರ್ದೇಶನ ನೀಡಲಾಗಿದೆ ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹ್ಮದ್ ಹೇಳಿದರು.



ವಿಜಯಪುರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲೆಯಲ್ಲಿರುವ 6 ವರ್ಷದ ಮಕ್ಕಳ ಸಂಖ್ಯೆ ಇದೆ, ಆದರೆ ಶಾಲೆಯಿಂದ ಅನೇಕ ಮಕ್ಕಳು ಹೊರಗುಳಿದಿರುವ ಸಾಧ್ಯತೆಯನ್ನೂ ಅಲ್ಲಗಳೆಯುವಂತಿಲ್ಲ. ರಾಜ್ಯದಲ್ಲಿರುವ ಆರು ವರ್ಷದ ಮಕ್ಕಳ ಸಂಖ್ಯೆ ದತ್ತಾಂಶಗಳ ಸಂಗ್ರಹಣೆಯೇ ಇಲ್ಲ, ಕಳೆದ ಒಂದು ವರ್ಷದಿಂದ ಈ ನಿಖರವಾದ ದತ್ತಾಂಶ ಸಂಗ್ರಹಣೆ ಪ್ರಯತ್ನ ನಡೆಸಲಾಗುತ್ತಿದೆ, 100 ಮಕ್ಕಳು 6 ವರ್ಷದವರು ಇದ್ದರೆ ಅದರಲ್ಲಿ ಶಾಲೆಗೆ ಸೇರಿದ ಮಕ್ಕಳ ಸಂಖ್ಯೆ 80 ಇರಬಹುದು, ಶಾಲೆಯಲ್ಲಿರುವ ಮಕ್ಕಳು ಹೊರತುಪಡಿಸಿ 6 ವರ್ಷದ ಮಕ್ಕಳ ಸಂಖ್ಯೆ ಇಲ್ಲಿಯವರೆಗೂ ಲಭ್ಯವಾಗಿಲ್ಲ ಎಂದರು.

ಈ ಹಿನ್ನೆಲೆಯಲ್ಲಿ ಕೂಡಲೇ ಸಾಕ್ಷರತಾ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಸಮನ್ವಯ ಸಭೆ ನಡೆಸಿ ಈ ನಿಖರವಾದ ದತ್ತಾಂಶ ಸಂಗ್ರಹಣೆಗೆ ಅಗತ್ಯ ಕಾರ್ಯಯೋಜನೆ ರೂಪಿಸಿ ಎಂದು ಹೇಳಲಾಗಿದ್ದು, ಜಿಲ್ಲೆಯಲ್ಲಿ 3 ತಿಂಗಳಲ್ಲಿ ಈ ದತ್ತಾಂಶ ಸಂಗ್ರಹಣೆ ಕಾರ್ಯ ಪೂರ್ಣಗೊಳ್ಳುವ ಸಾಧ್ಯತೆ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇದು ಒಂದು ರೀತಿ ಪೈಲಟ್ ಪ್ರಾಜೆಕ್ಟ್ ರೀತಿಯಲ್ಲಿ ಈ ದತ್ತಾಂಶ ಸಂಗ್ರಹಣೆಯ ಕಾರ್ಯ ನಡೆಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಯೋಜನೆಗಳ ಅನುಷ್ಠಾನ, ಅಲ್ಪಸಂಖ್ಯಾತರಿಗೆ ಸರ್ಕಾರದ ಸೌಲಭ್ಯಗಳು ಸಮರ್ಪಕವಾಗಿ ಮುಟ್ಟುತ್ತಿರುವ ಬಗ್ಗೆ ಸುದೀರ್ಘವಾದ ಸಭೆ ನಡೆಸಿ ಸಂಬಂಧಿಸಿದ ಇಲಾಖೆಯ ಪರಾಮರ್ಶನ ಮಾಡಲಾಗಿದೆ ಎಂದರು.

ಸಾಮಾಜಿಕ ಜಾಲತಾಣದಲ್ಲಿ ಅಸಭ್ಯ ರೀತಿಯ ಸಂದೇಶವನ್ನು ನೇರವಾಗಿ ಡಿಲೀಟ್ ಮಾಡುವ ಅಧಿಕಾರ ಪೊಲೀಸ್ ಇಲಾಖೆಗೆ ಇಲ್ಲ, ಪೋಸ್ಟ್ ಹಾಕಿದವರಿಗೆ ಈ ಕಂಟೆಂಟ್ ಡಿಲೀಟ್ ಮಾಡಿ ಎಂದು ಸೂಚನೆ ನೀಡುವ ಅಧಿಕಾರ ಇದೆ, ಈ ನಿಟ್ಟಿನಲ್ಲಿ ವಿಜಯಪುರ ಪೊಲೀಸರು ಉತ್ತಮವಾಗಿ ಕಾರ್ಯಾಚರಣೆ ನಡೆಯುತ್ತಿದ್ದು, ಈ ರೀತಿ ಕಳೆದ ವರ್ಷದಲ್ಲಿ ಅಸಭ್ಯ ರೀತಿಯಲ್ಲಿ ಪೋಸ್ಟ್ ಮಾಡಲಾದ 21 ಪೋಸ್ಟಗಳನ್ನು ಡಿಲೀಟ್ ಮಾಡಿಸುವಲ್ಲಿ ಯಶಸ್ವಿಯಾಗಿದ್ದು, ಈ ವರ್ಷ ಈಗಾಗಲೇ 21 ಪೋಸ್ಟ್ ಡಿಲೀಟ್ ಮಾಡಿಸಿದ್ದಾರೆ ಎಂಬ ಮಾಹಿತಿ ನೀಡಿದರು.

ಎಪ್ಲಾಯಿಮೆಂಟ್ ಪ್ಲಾಟ್‌ಫಾರ್ಮ್ ಉದ್ಯೋಗ ಕಲ್ಪಿಸುವ ಕಾರ್ಯಕ್ಕೂ ಆಯೋಗ ವಿಶೇಷ ಮುತವರ್ಜಿ ಹಾಗೂ ಈ ನಿಟ್ಟಿನಲ್ಲಿ ವಿಶೇಷ ಹೆಜ್ಜೆ ಇರಿಸಿದೆ, ಅಲ್ಪಸಂಖ್ಯಾತ ಆಯೋಗ ಉದ್ಯೋಗ ಮೇಳವನ್ನು ಪ್ರಥಮ ಬಾರಿಗೆ ಆಯೋಜಿಸಿದೆ, ಬೆಂಗಳೂರಿನಲ್ಲಿ ವಿಶ್ವವಿದ್ಯಾಲಯವೊಂದರ ಸಹಯೋಗದಲ್ಲಿ 200 ಕ್ಕೂ ಹೆಚ್ಚು ಕಂಪನಿಗಳನ್ನು ಆಹ್ವಾನಿಸಲಾಗಿದ್ದು, ಸಾವಿರಾರು ಉದ್ಯೋಗಿಗಳಿಗೆ ಸ್ಥಳದಲ್ಲಿಯೇ ಉದ್ಯೋಗ ಆದೇಶ ಪತ್ರ ಒದಗಿಸುವ ಕೆಲಸ ಮಾಡಲಾಗಿದ್ದು, ಉದ್ಯೋಗ ಮಾಹಿತಿ ಒದಗಿಸುವ ಎಂಪ್ಲಾಯಿಮೆಂಟ್ ಪ್ಲಾಟ್‌ಫಾರ್ಮ್ ರೂಪಿಸುವ ಕೆಲಸ ಮಾಡಲಾಗಿದೆ ಎಂದರು. ಆಯೋಗದ ಜಾಲತಾಣವನ್ನು ಉದ್ಯೋಗ, ಜ್ಞಾನ ಮಾಹಿತಿ ನೀಡುವ ನಿಟ್ಟಿನಲ್ಲಿ ಸಮಗ್ರವಾಗಿ ರೂಪಿಸಲಾಗಿದೆ ಎಂದರು.

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತವಾಗಿ ತರಬೇತಿ ನೀಡುವ ನಿಟ್ಟಿನಲ್ಲಿಯೂ ಆಯೋಗ ಕಾರ್ಯೋನ್ಮುಖವಾಗಿದ್ದು, ಉತ್ತರ ಕರ್ನಾಟಕ ಭಾಗದಲ್ಲಿ ಈ ತರಬೇತಿಗೆ ಆದ್ಯತೆ ನೀಡಲಾಗಿದೆ ಎಂದರು.

ಕಳೆದ ಒಂದೂವರೆ ವರ್ಷದಿಂದ ಈ ಜವಾಬ್ದಾರಿ ವಹಿಸಿದ್ದು, ಸಾಮರಸ್ಯ ಸದ್ಭಾವ ಮೂಡಿಸುವ ನಿಟ್ಟಿವಿನಲ್ಲಿ ವಿಶೇಷ ಆದ್ಯತೆ ನೀಡಲಾಗಿದ್ದು, ಸರ್ವಧರ್ಮದ ಸಾಧಕರಿಗೆ ಸಾಧಕರಿಗೆ ಪ್ರಶಸ್ತಿ ನೀಡುವ ಕಾರ್ಯ ಕೈಗೊಳ್ಳಲಾಗುತ್ತಿದೆ, ಈ ಅಪೂರ್ವ ಕಾರ್ಯಕ್ರಮವನ್ನು ಯಶಸ್ವಿಯಾಗಿ ಸಂಘಟಿಸಲಾಗಿದೆ ಎಂದರು.

ಸಿಇಓ ರಿಷಿ ಆನಂದ, ಅಲ್ಪಸಂಖ್ಯಾತ ಇಲಾಖೆಯ ವಿವಿಧ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

# ರಾಜ್ಯ ಮಟ್ಟದ ರಸ ಪ್ರಶ್ನೆ ಸ್ಪರ್ಧೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕು ಆಡಳಿತ,ಪೊಲೀಸ್ ಇಲಾಖೆ,ಶಿಕ್ಷಣ ಇಲಾಖೆಗಳು ಸ್ಥಳೀಯ ದಲಿತ,ಕನ್ನಡ ಪರ ಹಾಗೂ ಇತರೆ ಸಂಘಟನೆಗಳ ಸಹಯೋಗದಲ್ಲಿ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ನಿಮಿತ್ಯ ಡಾ.ಬಿ.ಆರ್.ಅಂಬೇಡ್ಕರ್ ಅವರ ಬದುಕು ಮತ್ತು ಬರಹ ಕುರಿತು ರಾಜ್ಯ ಮಟ್ಟದ ಮುಕ್ತ ರಸಪ್ರಶ್ನೆ ಸ್ಪರ್ಧೆ ಆಯೋಜಿಸಿದೆ.ಸ್ಪರ್ಧೆಯು ಏಪ್ರೀಲ್ 12 ರಂದು ಬೆಳಿಗ್ಗೆ 9 ಗಂಟೆಗೆ ಕುಷ್ಟಗಿ ಪಟ್ಟಣದ ಕ್ರೈಸ್ಟ್ ದಿ ಕಿಂಗ್ ಶಾಲೆಯಲ್ಲಿ ನಡೆಯಲಿದೆ.

ಈ ರಸಪ್ರಶ್ನೆ ಸ್ಪರ್ಧೆಯಲ್ಲಿ ಯಾವುದೇ ವಯೋಮಿತಿ ,ವಿದ್ಯಾರ್ಹತೆಯ ನಿರ್ಬಂಧ ಇರುವುದಿಲ್ಲ,ಎಲ್ಲ ಆಸಕ್ತರಿಗೂ ಮುಕ್ತ ಅವಕಾಶವಿರುತ್ತದೆ. ರಾಜ್ಯದ ಯಾವುದೇ ಜಿಲ್ಲೆಗಳ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡಿನ ನಕಲು ಪ್ರತಿ ಒದಗಿಸಿ ಭಾಗವಹಿಸಬಹುದು.ಮೊದಲ ಸುತ್ತಿನಲ್ಲಿ 50 ಅಂಕಗಳ ಬಹುಆಯ್ಕೆ ಮಾದರಿಯ ಸುತ್ತು , ಈ ಸುತ್ತಿನಲ್ಲಿ ಅತಿಹೆಚ್ಚು ಅಂಕಗಳಿಸಿದ ಮೊದಲ 12 ಅಭ್ಯರ್ಥಿಗಳು ಎರಡನೇ ಸುತ್ತಿಗೆ ಆಯ್ಕೆಯಾಗುತ್ತಾರೆ. ಈ 12 ಅಭ್ಯರ್ಥಿಗಳನ್ನು 6 ತಂಡಗಳಾಗಿ ವಿಂಗಡಿಸಿ ಎರಡನೇ ಹಂತದ ಮೌಖಿಕ ಸುತ್ತು ನಡೆಸಲಾಗುವುದು.ವಿಜೇತ ತಂಡಗಳಿಗೆ 50 ಸಾವಿರ ರೂ. ಪ್ರಥಮ ಬಹುಮಾನ ,30 ಸಾವಿರ ರೂ.ದ್ವಿತೀಯ ಬಹುಮಾನ ಹಾಗೂ 20 ಸಾವಿರ ರೂ.ಗಳ ತೃತೀಯ ಬಹುಮಾನ ನೀಡಲಾಗುವುದು.ಭಾಗವಹಿಸಿದ ಎಲ್ಲರಿಗೂ ಪ್ರಮಾಣ ಪತ್ರ ನೀಡಲಾಗುವುದು.

ರಸಪ್ರಶ್ನೆ ಸ್ಪರ್ಧೆಯ ಪಠ್ಯ

ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ ಮತ್ತು ಶಿಕ್ಷಣ, ರಾಷ್ಟ್ರೀಯ ಹೋರಾಟ,ಭಾರತ ಸಂವಿಧಾನ ರಚನೆ,ಶಿಕ್ಷಣ, ಸಂಘಟನೆ,ಹೋರಾಟ ತತ್ವಗಳು,ಚಿಂತನೆಗಳು,ಮೀಸಲಾತಿ,ಮಹಿಳಾ ಹಕ್ಕುಗಳು,ಜಾಗತಿಕ ಮಹಾನಾಯಕರಾಗಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಪ್ರಸ್ತುತ ದಿನಮಾನ.ಆಸಕ್ತರು ಏಪ್ರಿಲ್ 11ರ ಒಳಗಾಗಿ ಈ ಮೊಬೈಲ್ ನಂಬರುಗಳ ಮೂಲಕ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಎಸ್.ಎಸ್.ತೆಮಿನಾಳ–9740421421,ಶ್ರೀನಿವಾಸ ದೇಸಾಯಿ–9845808941,ಸುರೇಶ್ ಅಂಕೋಲಿ–9901797951,ಅಮರೇಗೌಡ–9902180043 ಅಥವಾ ಭರಮಪ್ಪ ಪಿ–9731799080 ಮೂಲಕ ಸಂಪರ್ಕಿಸಬಹುದು ಎಂದು ಕುಷ್ಟಗಿ ವೃತ್ತದ ಪೊಲೀಸ್ ಇನ್ಸಪೆಕ್ಟರ್ ವಿಶ್ವನಾಥ ಹಿರೇಗೌಡರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ 2025ನೇ ವರ್ಷದ ಪುಸ್ತಕ ಬಹುಮಾನ ಯೋಜನೆಯಡಿ 23 ಪ್ರಕಾರಗಳ ಪುಸ್ತಕ ಬಹುಮಾನಕ್ಕಾಗಿ ಸಲ್ಲಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಬೆಂಗಳೂರಿನ ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್‌ರಾದ ಕರಿಯಪ್ಪ ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುತ್ತದೆ. ಬಹುಮಾನಕ್ಕಾಗಿ ಸಲ್ಲಿಸುವ ಕೃತಿಗಳು 2025ರ ಜನವರಿ 1 ರಿಂದ ಡಿಸೆಂಬರ್ 31 ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಯಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2025 ಎಂದು ಮುದ್ರಿತವಾಗಿರಬೇಕು.

ಮೇಲ್ಕಂಡ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ 4 ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು-560002 ಇವರ ವಿಳಾಸಕ್ಕೆ ರಿಜಿಸ್ಟರ್ಡ್ ಅಂಚೆ ಮೂಲಕ ಅಥವಾ ಕೊರಿಯರ್ ಮೂಲಕ ಅಥವಾ ಖುದ್ದಾಗಿ 2026ರ ಜೂನ್ 30ರೊಳಗೆ ಕಳುಹಿಸಬೇಕು.

ಪುಸ್ತಕದ ಪ್ರಕಾರಗಳು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ https://sahithyaacademy.karnataka.gov.in ವೆಬ್‌ಸೈಟ್‌ನ್ನು ಹಾಗೂ ಅಕಾಡೆಮಿಯ ದೂರವಾಣಿ ಸಂಖ್ಯೆ 080-22211730, 22106460ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಬಸವ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಿ: ಡಿಸಿ



• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಏ.06: ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿಯನ್ನು ಏಪ್ರಿಲ್ 20 ರಂದು ವಿಜೃಂಭಣೆಯಿಂದ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್, ಮನ್ನಿಕೇರಿ ತಿಳಿಸಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಸವ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶ್ವಗುರು ಸಾಂಸ್ಕೃತಿಕ ನಾಯಕರಾದ ಬಸವಣ್ಣನವರ ಜಯಂತಿಯನ್ನು ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಲಾಗುಗವುದು. ಅಂದು ಬಸವಣ್ಣನವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು, ನಂತರ ಕೊಟ್ಟೂರ ಮಠದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗುವುದು. ಜಯಂತಿಯನ್ನು ಸರ್ಕಾರದ ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ವಿದ್ಯುತ್ ದೀಪಗಳಿಂದ ಅಲಂಕರಿಸಬೇಕು. ಬಸವಣ್ಣನವ ತತ್ವದಾರ್ಶಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸಲು ಉಪನ್ಯಾಸ ಆಯೋಜಿಸಬೇಕು ಎಂದರು.

ಜಯಂತಿ ಅಂಗವಾಗಿ ಭವ್ಯ ಮೆರವಣಿಗೆ:

ಜಯಂತಿ ಅಂಗವಾಗಿ ಬೃಹತ್ ಮೆರವಣಿಗೆ ಕಾರ್ಯ ಹಮ್ಮಿಕೊಂಡಿದ್ದು, ಸಣ್ಣಕ್ಕಿ ವೀರಭದ್ರೇಶ್ವರ ದೇವಸ್ಥಾನದಿಂದ ಆರಂಭವಾದ ಮೆರವಣಿಗೆಯು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕೊಟ್ಟೂರು ಮಠದ ಹತ್ತಿರ ಮುಕ್ತಾಯಗೊಳ್ಳಲಿದೆ. ಈ ವೇಳೆ ಯಾವುದೇ ತೊಂದರೆ ಆಗದಂತೆ ಶಾಂತಿಯುತವಾಗಿ ಮತ್ತು ಸೌಹಾರ್ದಯುತವಾಗಿ ನಡೆಸಲು ಪ್ರತಿಯೊಬ್ಬರು ಸಹಕರಿಸಬೇಕು. ಇದಕ್ಕೆ ಸಮಾಜದ ಸಹಕಾರವು ಅತ್ಯಗತ್ಯ ಎಂದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಇದ್ದರು.


# ಭಗೀರಥ ಜಯಂತಿ ಅರ್ಥಪೂರ್ಣ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏಪ್ರಿಲ್ 21 ರಂದು ಶ್ರೀ ಶಂಕರಾಚಾರ್ಯರ ಜಯಂತಿ ಹಾಗೂ ಏಪ್ರಿಲ್ 23 ರಂದು ಭಗೀರಥ ಜಯಂತಿಯನ್ನು ಸಾಂಕೇತಿಕ ಮತ್ತು ಯಾವುದೇ ಧಾರ್ಮಿಕತೆಗೆ ಧಕ್ಕೆಯುಂಟಾಗದ ರೀತಿಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗೇಶ್ ರಂಗಣ್ಣನವರ ತಿಳಿಸಿದರು.

ಈ ವೇಳೆ ಶಂಕರಾಚಾರ್ಯ ಸಮಾಜ ಮತ್ತು ಭಗೀರಥ ಸಮಾಜದ ಮುಖಂಡರು, ಸಮಾಜದ ಪದಾಧಿಕಾರಿಗಳು ಇದ್ದರು.

# ಡಾ. ಬಿ. ಆರ್ .ಅಂಬೇಡ್ಕರ್ 135 ಜಯಂತಿ ಆಚರಣೆ ಕುರಿತು ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ




• ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು

ಡಾ.ಬಾಬು ಸಾಹೇಬ್ ಅಂಬೇಡ್ಕರ್ ರವರ 135 ನೇ ಜಯಂತಿ ಆಚರಣೆ ಕುರಿತು ತಾಲೂಕು ತಹಶೀಲ್ದಾರ್ ಅರುಣ್ ಕುಮಾರ್ ಎಚ ದೇಸಾಯಿ ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಈ ಸಭೆಯಲ್ಲಿ ಸಮಾಜದ ಮುಖಂಡರು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿ ತಮ್ಮ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ನಂತರ ಎಲ್ಲರೂ ಅಭಿಪ್ರಾಯ ಸಲಹೆಗಳನ್ನು ಸ್ವೀಕರಿಸಿ ನಂತರ ತಾಲೂಕು ತಹಶೀಲ್ದಾರ್ ಅರುಣ್ ಕುಮಾರ್ ಎಚ ದೇಸಾಯಿ ಮಾತನಾಡಿದ ಅವರು ಪ್ರತಿ ವರ್ಷದಂತೆ ಈ ವರ್ಷವೂ ಸರ್ಕಾರದ ಆದೇಶದಂತೆ ಎಪ್ರಿಲ್ 14 ರಂದು ಡಾ ಅಂಬೇಡ್ಕರ್ ಜಯಂತಿ ಆಚರಣೆ ಮಾಡಲಾಗಿತ್ತು . ಅದರಂತೆ ಈ ವರ್ಷವೂ ಪ್ರತಿ ಇಲಾಖೆಯ ಮೇಲೆ ಲೈಟಿಂಗ್ ವ್ಯವಸ್ಥೆ ಮಾಡಿ. ಅದ್ದೂರಿಯಾಗಿ ಡಾ.ಅಂಬೇಡ್ಕರ್ 135ನೇ ಜಯಂತಿಯನ್ನು ಆಚರಣೆ ಮಾಡಲಾಗುತ್ತದೆ.

ಅವತ್ತು ದಿನ ಪಿಡಬ್ಲ್ಯೂಡಿ ಕ್ಯಾಂಪ್ ನಲ್ಲಿ ಇರುವ ಡಾ. ಅಂಬೇಡ್ಕರ್ ಮೂರ್ತಿ ಲೈಟಿಂಗ್ ವ್ಯವಸ್ಥೆ ಮಾಡಿ ಅ ಸ್ಥಳವನ್ನು ಅಲಂಕಾರಗೊಳಿಸಬೇಕು ಹಾಗೂ ಎಲ್ಲಾ ಅಧಿಕಾರಿಗಳು ಸಿಬ್ಬಂದಿ ವರ್ಗ ತಮ್ಮ ತಮ್ಮ ಇಲಾಖೆಯಲ್ಲಿ ಜಯಂತಿ ಆಚರಿಸಿಕೊಂಡು ಸಿಂಧನೂರು ನಲ್ಲಿ ನೆಡೆಯುವ ಜಯಂತಿ ಕಾರ್ಯಕ್ರಮಕ್ಕೆ ಎಲ್ಲರೂ ಭಾಗವಹಿಸಬೇಕು ಎಂದು ತಾಲೂಕು ತಹಶೀಲ್ದಾರ್ ಅರುಣ್ ಕುಮಾರ್ ಎಚ ದೇಸಾಯಿ ಅವರ ಅಧಿಕಾರಿಗಳಿಗೆ ಸೂಚನೆ ನೀಡಿದರು.

> “ಗ್ರಾಮ ಪಂಚಾಯಿತಿ ಇರುವ ಗ್ರಾಮದಲ್ಲಿ ಅಲ್ಲಿನ ಪಿಡಿಓ ಡಾ. ಅಂಬೇಡ್ಕರ್ ಕಟ್ಟೆಯಲ್ಲಿ ಭಾವಚಿತ್ರಕ್ಕೆ ಮಾಲಾರ್ಪಣೆ ಪೂಜೆ ಸಲ್ಲಿಸಿ ಅಲ್ಲಿ ಆಚರಣೆ ಮಾಡಲಿಕ್ಕೆ ಎಲ್ಲಾ ಪಿಡಿಓಗಳಿಗೆ ಆದೇಶ ಹೊರಡಿಸಿ ಎಂದು ಛಲವಾದಿ ಮಹಾಸಭಾದ ಅಧ್ಯಕ್ಷ ಡಾ. ರಾಮಣ್ಣ ಗೊನವಾರ ತಹಶೀಲ್ದಾರ್ ರಲ್ಲಿ ಒತ್ತಾಯಿಸಿದರು.

ಮೆರವಣಿಗೆ.ನಗರದ ಪಿಡಬ್ಲ್ಯೂಡಿ ಕ್ಯಾಂಪ್ ನಲ್ಲಿ ಡಾ. ಬಾಬು ಸಾಹೇಬ್ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಅಲ್ಲಿಂದ ಚೆನ್ನಮ್ಮ. ಕನಕದಾಸ

ಗಾಂಧಿ ಸರ್ಕಲ್. ಬಸವ ಸರ್ಕಲ್.ಹಳೆ ಬಜಾರ್ ಮೂಲಕ ಟೌನ್ ಹಾಲ್ ತಲುಪಿ ಅಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು ಜಯಂತಿ ಕಾರ್ಯಕ್ರಮ ಕುರಿತು ಗಾಳೆಪ್ಪ ಸಾಹಿತಿಗಳು ಯಾದಗಿರಿ ಅವರು ಡಾ. ಅಂಬೇಡ್ಕರ್ ಅವರ ಕುರಿತು ಉಪನ್ಯಾಸವನ್ನು ನೀಡಲಿದ್ದಾರೆ. ಎಂದು ಹೇಳಿದರು

ಈ ಸಂದರ್ಭದಲ್ಲಿ. ತಾಲೂಕು ಇಓ ಚಂದ್ರಶೇಖರ. ಪಾಂಡುರಂಗ ಇಟಗಿ ನಗರ ಸಭೆ ಪೌರಾಯುಕ್ತರು. ಎಮ್ ವೆಂಕಟೇಶ್. ಸಮಾಜ ಕಲ್ಯಾಣ ಇಲಾಖೆ.ಡಾ.ರಾಮಣ್ಣ ಗೊನವಾರ ಅಧ್ಯಕ್ಷರು ಛಲವಾದಿ ಮಹಾಸಭಾ ಸಿಂಧನೂರು. ಜಿಲ್ಲಾ ಉಪಾಧ್ಯಕ್ಷ ಹನುಮಂತಪ್ಪ ಗೋಮರ್ಶಿ. ನರಸಪ್ಪ ಕಟ್ಟಿ ಮನೆ.ಹನುಮಂತಪ್ಪ ಹಂಚಿನಾಳ. ಸುರೇಶ್ ಹಾಗೂ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಎಲ್ಲಾ ಸಂಘ ಸಂಸ್ಥೆಗಳು ಪ್ರಗತಿಪರ ಸಂಘಟನೆಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಾರ್ವಜನಿಕ ಜೀವನದಲ್ಲಿ ಅಧಿಕಾರ ಶಾಶ್ವತವಲ್ಲ: ಕಂಬಳಿ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ



ಯಾವುದೇ ವ್ಯಕ್ತಿಗೆ ಸಹಾಯ ಮಾಡಲು ಸಾರ್ವಜನಿಕ ಜೀವನದಲ್ಲಿ ಅಧಿಕಾರ ಮುಖ್ಯವಲ್ಲ ಮಾನವೀಯ ತುಡಿತ ಮುಖ್ಯ ಎಂದು ತಾ.ಪಂ. ಮಾಜಿ ಉಪಾಧ್ಯಕ್ಷ ಕಳಕಪ್ಪ ಕಂಬಳಿ ಹೇಳಿದರು.

ತಾಲೂಕಿನ ಕರಮುಡಿ ಗ್ರಾಮದ ಕರವೀರಬದ್ರೇಶ್ವರ ಆವರಣದಲ್ಲಿ ಶ್ರೀ ಹುಚ್ಚೀರೇಶ್ವರ ಜಾತ್ರಾಮಹೋತ್ಸವದ ಅಂಗವಾಗಿ ಯಲಬುರ್ಗಾದ ಶ್ರೀ ವೀರಬದ್ರೇಶ್ವರ ವಿಕಲ ಚೇತನರ ಗ್ರಾ.ಅ. ಹಾಗೂ ಶಿ.ಸಂಸ್ಥೆ (ರಿ) ಕುಕನೂರಿನ ವಿ.ಎಚ್.ತಳವಾರ ಗ್ರಾ.ಅ. ಹಾಗೂ ಶಿ.ಸಂಸ್ಥೆ ಸ್ಥಳೀಯ ಕರ್ನಾಟಕ ಯುವಕ ಮಂಡಳ ಹಾಗೂ ಗ್ರಾ.ಪಂ. ಇವುಗಳ ಸಂಯುಕ್ತ ಆಶ್ರಯದಲ್ಲಿ ಶಿಕ್ಷಣ ಪ್ರೇಮಿ ದಿ.ಕಾಶೀನಾಥ ಕುಕನೂರ ಇವರ ಸ್ಮರಣಾರ್ಥವಾಗಿ ಹಿರಿಯ ನಾಗರಿಕರ ಹಾಗೂ ವಿಕಲ ಚೇತನರಿಗೆ ಉಚಿತ ಸಾಧನಾ ಸಲಕರಣೆಗಳ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಅಧಿಕಾರವಿದೆಯೆಂದು ಕೆಲವರು ತಮ್ಮನ್ನು ಆಯ್ಕೆ ಮಾಡಿದ ಮತದಾರ ಪ್ರಭುಗಳನ್ನು ಮರೆಯುತ್ತಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಯ ದುರಂತ ಎಂದು ಕಳವಳ ವ್ಯಕ್ತಪಡಿಸುತ್ತಾ ವೀರಬದ್ರೇಶ್ವರ ವಿಕಲ ಚೇತನ ಸಂಸ್ಥೆಯವರು ವಿ.ಎಚ್.ತಳವಾರ ಗ್ರಾಮೀಣ ಅಭಿವೃದ್ಧಿ ಶಿಕ್ಷಣ ಸಂಸ್ಥೆಯವರ ಸಹಕಾರವನ್ನು ತೆಗೆದು ಕೊಂಡು ಸ್ಥಳೀಯ ಕರ್ನಾಟಕ ಯುವಕ ಮಂಡಳ ಹಾಗೂ ಗ್ರಾಮ ಪಂಚಾಯತಿ ವತಿಯವರು ಮಾನವೀಯ ಮೌಲ್ಯಗಳನ್ನು ಹೆಚ್ಚಿಸುವ ಕೆಲಸವನ್ನು ಮಾಡುತ್ತಿರುವುದು ನಿಜಕ್ಕೂ ಸಮಾಜ ಸೇವೆಯ ಭಾಗವಾಗಿದೆ. ಇವು ಸಣ್ಣ ಪುಟ್ಟ ಕೆಲಸಗಳೆಂದು ಯಾರು ತಿಳಿಯಬಾರದು ಯಾವುದೇ ಒಂದು ಓಟದ ಸ್ಪರ್ಧೆಯಲ್ಲಿ ಒಬ್ಬವ್ಯಕ್ತಿ ಪ್ರಥಮ ಬಂದಿದ್ದಾನೆ ಎಂದರೆ ಆತನ ಪ್ರಥಮ ಹೆಜ್ಜೆಯೆ ಯಶಸ್ಸಿಗೆ ಸಾಕ್ಷಿಯಾಗಿರುತ್ತದೆ ಎಂದು ಯಾರು ಮರೆಯಬಾರದು ಎಂದರು.

ವಿ.ಎಚ್.ತಳವಾರ ಗ್ರಾ.ಅ. ಹಾಗೂ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಸಮಾಜಸೇವಕರಾದ ಟಿ.ರತ್ನಾಕರರವರು ಮಾತನಾಡಿ ನಮ್ಮ ಸಂಸ್ಥೆವತಿಯಿಂದ ಹಲವಾರು ವಿಧಾಯಕ ಕಾರ್ಯಕ್ರಮವನ್ನು ಈಗಾಗಲೆ ಆಯೋಜಿಸಲಾಗಿದೆ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಲು ಸದಾ ಸಿದ್ಧವಾಗಿದೆ ಎಂದರು

ರತ್ನಾಕರ ಟಿ. ಶಕುಂತಲಾ ಪಾಟೀಲ ! ಸಂಗಪ್ಪ ಬಂಡಿ ವೀರಪ್ಪ ಪತ್ತಾರ ಬಸವರಾಜ ಉಳ್ಳಾಗಡ್ಡಿ ಶರಣಪ್ಪಗೌಡ ಪೋ.ಪಾಟೀಲ ಮುತ್ತಣ್ಣ ಫರಸಪ್ಪ ಇಮಾಮ ವೀರಣ್ಣ ಮಾನಶೆಟ್ಟಿ ಗೌಡಪ್ಪ ಬಲಕುಂದಿ ಮಂಜುನಾಥ ಉಳ್ಳಾಗಡ್ಡಿ ಕಳಕಪ್ಪ ರಾಟಿ ವೀರಮ್ಮ ಕವಲೂರ ವಿಜಯ ಕರೆಕುರಿ ಇನ್ನೂ ಮುಂತಾದವರು ಮಾತನಾಡಿದರು ತೊದೇವಪ್ಪ ತೊಂಡಿಹಾಳ ಮುಂತಾದವರು ಉಪಸ್ಥಿತರಿದ್ದರು

ಡಾ!ಬಸವರಾಜ ಕುಕನೂರ ಅಧ್ಯಕ್ಷತೆವಹಿಸಿದ್ದರು ವಿರುಪಾಕ್ಷಪ್ಪ ಉಳ್ಳಾಗಡ್ಡಿ ಪ್ರಾಸ್ತಾವಿಕವಾಗಿ ನುಡಿದರು

ನಿಖಿಲ್ ಗೊಂಗಡಶೆಟ್ಟಿ ಸ್ವಾಗತಿಸಿದರು ಉಮೇಶ ಕುಕನೂರ ಪ್ರಾರ್ಥಿಸಿದರು.ಭೀಮಪ್ಪ ಹವಳಿ ನಿರೂಪಿಸಿ ವಂದಿಸಿದರು

### ಶೀಲವಂತ ಪ್ರೀಮಿಯರ್ ಲೀಗ್ ಕ್ರಿಕೆಟ್ ಟೂರ್ನಮೆಂಟ್ ಯಶಸ್ವಿ

# ರಾಮಲಲಾ ತಂಡಕ್ಕೆ ಪ್ರಥಮ ಬಹುಮಾನ ಛತ್ರಪತಿ ಶಿವಾಜಿ ಭಾವ ತಂಡ ರನ್ನರ್ ಅಪ್



• ಮಲ್ಲಮ್ಮ ನುಡಿ ವಾರ್ತೆ, ಬೀದರ

ಶೀಲವಂತ ಸೇವಾ ಸಮಿತಿ ವತಿಯಿಂದ ನಗರದ ನೆಹರು ಸ್ಟೇಡಿಯಂನಲ್ಲಿ ನಿನ್ನೆ ನಡೆದ ಶೀಲವಂತ ಪ್ರೀಮಿಯರ್ ಲೀಗ್ ನಾಕೌಟ್ ಕ್ರಿಕೆಟ್ ಟೂರ್ನಮೆಂಟ್ ಯಶಸ್ವಿಯಾಗಿ ನಡೆಯಿತು. ಈ ಟೂರ್ನಮೆಂಟ್‌ನಲ್ಲಿ ಎಲ್ಲಾ ಸಮಾಜದ ಒಟ್ಟು ಎಂಟು ತಂಡಗಳು ಭಾಗವಹಿಸಿದ್ದವು ಎಂದು ಸಮಿತಿಯ ಅಧ್ಯಕ್ಷ ನಾಗರಾಜ್ ಕರಕ್ಯಾಳ ಹಾಗೂ ಉಪಾಧ್ಯಕ್ಷ ಉಮೇಶ್ ಕಾಡವಾದ ತಿಳಿಸಿದ್ದಾರೆ.

ಟೂರ್ನಮೆಂಟ್ ಬೆಳಿಗ್ಗೆ 8 ಗಂಟೆಗೆ ಆರಂಭಗೊಂಡು ಸಂಜೆ 5:30ರವರೆಗೆ ಪಂದ್ಯಗಳು ನಡೆದವು. ಬಳಿಕ ವಿಜೇತ ತಂಡಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮ ನಡೆಯಿತು.

ಪಂದ್ಯಗಳಲ್ಲಿ ಉತ್ತಮ ಪ್ರದರ್ಶನ ನೀಡಿ ರಾಮಲಲಾ ತಂಡ ಪ್ರಥಮ ಸ್ಥಾನ ಪಡೆದು □15,000 ನಗದು ಬಹುಮಾನ ಹಾಗೂ ಪ್ರಶಸ್ತಿ ಕಪ್ ತನ್ನದಾಗಿಸಿಕೊಂಡಿತು. ಛತ್ರಪತಿ ಶಿವಾಜಿ ಭಾವ ತಂಡ ದ್ವಿತೀಯ ಸ್ಥಾನ (ರನ್ನರ್ ಅಪ್) ಪಡೆದು □10,000 ನಗದು ಬಹುಮಾನ ಮತ್ತು ಕಪ್ ಪಡೆದುಕೊಂಡಿತು. ಎಲ್ಲಾ ತಂಡಗಳು ಉತ್ತಮ ಪ್ರದರ್ಶನ ನೀಡಿವೆ ಎಂದು ಸಮಿತಿಯ ಆಯೋಜಕರು ತಿಳಿಸಿದ್ದಾರೆ.

ಸಮಾಜದ ಯುವಕರಲ್ಲಿ ಕ್ರೀಡಾ ಮನೋಭಾವ ಬೆಳೆಸುವುದು ಹಾಗೂ ಪರಸ್ಪರ ಒಗ್ಗಟ್ಟು ಹೆಚ್ಚಿಸುವ ಉದ್ದೇಶದಿಂದ ಈ ಟೂರ್ನಮೆಂಟ್ ಆಯೋಜಿಸಲಾಗಿತ್ತು. ಶೀಲವಂತ ಸಮಾಜದ ಯುವಕರು, ಸಮಾಜದ ಬಾಂಧವರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಟೂರ್ನಮೆಂಟ್ ಯಶಸ್ವಿಗೊಳಿಸಿದರು.

ಟೂರ್ನಮೆಂಟ್ ಯಶಸ್ವಿಗೆ ಸಹಕರಿಸಿದ ಎಲ್ಲರಿಗೂ ಸಮಿತಿಯ ಅಧ್ಯಕ್ಷ ನಾಗರಾಜ್ ಕರಕ್ಯಾಳ ಹಾಗೂ ಉಪಾಧ್ಯಕ್ಷ ಉಮೇಶ್ ಕಾಡವಾದ ಪತ್ರಿಕಾ ಪ್ರಕಟಣೆಯಲ್ಲಿ ಧನ್ಯವಾದಗಳನ್ನು ತಿಳಿಸಿದ್ದಾರೆ

# ಕುಸುಮ ಸಂಜೀವಿನಿ ಸರ್ಕಾರದ ಮಹತ್ವಕಾಂಕ್ಷಿ ಯೋಜನೆ: ಧ್ಯಾನೇಶ್ವರ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಏಪ್ರಿಲ್.6 :- ಕುಸುಮ ಸಂಜೀವಿನಿ ಕಾರ್ಯಕ್ರಮ ಸರಕಾರದ ಮಹತ್ವಕಾಂಕ್ಷಿ ಯೋಜನೆಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಧ್ಯಾನೇಶ್ವರ ನೀರಗುಡೆ ಹೇಳಿದರು.

ಅವರು ಇತ್ತೀಚಿಗೆ ಕರ್ನಾಟಕ ರಾಜ್ಯ ರಕ್ತ ಚಾಲನೆ ಪರಿಷತ್ತು ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೀದರ, ಬ್ರಿಮ್ಸ್ ಬೋಧಕ ಆಸ್ಪತ್ರೆ ಬೀದರ ಮತ್ತು ಹಿಮೋಫಿಲಿಯಾ ಸೊಸೈಟಿ ಬೀದರ ಇವರ ಸಹಯೋಗದೊಂದಿಗೆ ಹಿಮೋಫಿಲಿಯಾ ಪೀಡಿತರಿಗೆ ಕುಸುಮ ಸಂಜೀವಿನಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹಿಮೋಫಿಲಿಯಾ ಪೀಡಿತರು ಪ್ರತಿ ತಿಂಗಳಿಗೆ ಚುಚ್ಚುಮದ್ದನ್ನು ಪಡೆದು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಬ್ರಿಮ್ಸ್ ಜಿಲ್ಲಾ ಶಸ್ತ್ರ ಚಿಕಿತ್ಸಕತರಾದ ಡಾ.ಅಹಮೋದ್ದಿನ್, ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ/ ಜಿಲ್ಲಾ ಹಿಮೋಫಿಲಿಯಾ ನೋಡಲ್ ಅಧಿಕಾರಿ ಡಾ.ಅನೀಲಕುಮಾರ ಚಿಂತಾಮನಿ, ಬೀದರನ ಬ್ಲಡ್ ಬ್ಯಾಂಕ ವೈದ್ಯಾಧಿಕಾರಿ ಡಾ.ವಿರೇಂದ್ರ ಪಾಟೀಲ್, ಬ್ರಿಮ್ಸ್ ಮಕ್ಕಳ ವಿಭಾಗದ ಮುಖ್ಯಸ್ಥರಾದ ಡಾ.ಸಂಕುಮಾರ, ಬ್ರಿಮ್ಸ್ ಮಕ್ಕಳ ವೈದ್ಯರಾದ ಡಾ.ಭಗವಾನ್, ಡಾ.ರವಿಕಾಂತ, ಬೀದರನ ಹಿಮೋಫಿಲಿಯಾ ಸೊಸೈಟಿಯ ಕಾರ್ಯದರ್ಶಿ ನಾಗೇಶ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಈ ಕಾರ್ಯಕ್ರಮದ ಉದ್ಘಾಟಕರಾಗಿ ಡಾ.ಅಹಮೋದ್ದಿನ್ ಜಿಲ್ಲಾ ಶಸ್ತ್ರಚಿಕಿತ್ಸಕರು ಬ್ರಿಮ್ಸ್ ಬೀದರರವರು ಪಾಲ್ಗೊಂಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ.ಧ್ಯಾನೇಶ್ವರ ನೀರಗುಡೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಬೀದರರವರು ವಹಿಸಿಕೊಂಡಿದರು. ಐಸಿಟಿಸಿ(ಎ) ಬ್ರಿಮ್ಸ್ ಬೀದರ ಕೇಂದ್ರ ಪ್ರ.ಶಾ.ತಂತ್ರಜ್ಞ ಅರವಿಂದ ಕುಲಕರ್ಣಿ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು. ಬೀದರನ ಹಿಮೋಫಿಲಿಯಾ ಸೊಸೈಟಿಯ ಕಾರ್ಯದರ್ಶಿ ನಾಗೇಶ ಅವರು ವಂದನಾರ್ಪಣೆ ಮಾಡಿದರು.




# ಗ್ರಾಮ ಒನ್ ಕೇಂದ್ರಗಳ ಸ್ಥಾಪನೆಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

“ಗ್ರಾಮ ಒನ್” ಯೋಜನೆಯನ್ನು ಈಗಾಗಲೇ ಅನುಷ್ಠಾನಗೊಳಿಸಲಾಗುತ್ತಿದ್ದು, ಕಲಬುರಗಿ ಜಿಲ್ಲೆಯಲ್ಲಿ ಸಧ್ಯ ಸ್ಥಾಪನೆಗಾಗಿ ಬಾಕಿ ಇರುವ ಗ್ರಾಮ ಒನ್ ಕೇಂದ್ರಗಳಿಗೆ ಆಸಕ್ತಿಯುಳ್ಳ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಗ್ರಾಮ್ ಒನ್ ಕೇಂದ್ರಗಳ ವಿವರ: ಚಿಂಚೋಳಿ ತಾಲೂಕಿನ ಮಿರಿಯಾಣ, ಆಳಂದ ತಾಲೂಕಿನ ಧುತ್ತರಗಾಂವ, ಚಿತ್ತಾಪೂರ ತಾಲೂಕಿನ ಸಾತನೂರ, ಯಡ್ರಾಮಿ ತಾಲೂಕಿನ ಸಾತಖೇಡ, ಕಾಳಗಿ ತಾಲೂಕಿನ ಅರಣಕಲ್, ಕಲಬುರಗಿ ತಾಲೂಕಿನ ಸರಡಗಿ(ಬಿ) ಮತ್ತು ಫಿರೋಜಾಬಾದ ಹಾಗೂ ಯಡ್ರಾಮಿ ತಾಲೂಕಿನ ಕರಕಿಹಳ್ಳಿ.

ಆಸಕ್ತಿಯುಳ್ಳ ಅಭ್ಯರ್ಥಿಗಳು https://sevasindhuservices.karnataka.gov.in/directApply.do?serviceId=2631 ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2026ರ ಏಪ್ರಿಲ್ 15 ರೊಳಗಾಗಿ ಅರ್ಜಿ ಸಲ್ಲಿಸಬೇಕು.

# ಅರಿವು ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಅಡಿಯಲ್ಲಿರುವ ಅಫಜಲಪೂರ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಘಟಕ ಹಾಗೂ ಕಲಬುರಗಿ ಜಿಲ್ಲಾ ಘಟಕ ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ “ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಆತ್ಮಹತ್ಯೆಗಳನ್ನು ತಡೆಗಟ್ಟುವುದು” ಎಂಬ ವಿಷಯದ ಕುರಿತು ಇದೇ ಏಪ್ರಿಲ್ 7 ರಂದು ಬೆಳಿಗ್ಗೆ 11.15 ಗಂಟೆಗೆ ಗೂಗಲ್ ಮೀಟ್ ಮೂಲಕ ರಾಜ್ಯಮಟ್ಟದ ಆನ್‌ಲೈನ್ ಉಪನ್ಯಾಸ/ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಫಜಲಪುರ ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಾಚಾರ್ಯರು ತಿಳಿಸಿದ್ದಾರೆ.

ಪದ್ಮಶ್ರೀ ಪುರಸ್ಕೃತರು ಹಾಗೂ ನಾಡಿನ ಖ್ಯಾತ ಮನೋವೈದ್ಯರಾದ ಡಾ. ಸಿ.ಆರ್. ಚಂದ್ರಶೇಖರ್ ಅವರು ಆನ್‌ಲೈನ್ ಮೂಲಕ ಅರಿವು ಮೂಡಿಸುವ ಉಪನ್ಯಾಸವನ್ನು ನೀಡಲಿದ್ದಾರೆ.

ಬೆಂಗಳೂರಿನ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಅವರು ಹೊರಡಿಸಿರುವ ಸುತ್ತೋಲೆಯನ್ವಯ ಗೂಗಲ್ ಮೀಟ್ ಲಿಂಕ್‌ನ್ನು ಬಳಸಿಕೊಂಡು ಉನ್ನತ ಶಿಕ್ಷಣ ಇಲಾಖೆ ಅಡಿಯಲ್ಲಿರುವ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳು, ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪ್ರಥಮ ದರ್ಜೆ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಲು ಅನುವಾಗುವಂತೆ ಆಯಾ ಕಾಲೇಜುಗಳ ಪ್ರಾಚಾರ್ಯರು ಇದೇ ಏಪ್ರಿಲ್ 7 ರಂದು ಬೆಳಿಗ್ಗೆ 11.15 ಗಂಟೆಗೆ ವ್ಯವಸ್ಥೆ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕೆಂದು ಕಾರ್ಯಕ್ರಮದ ಸಂಯೋಜಕರು ಹಾಗೂ ಅಫಜಲಪೂರ ಸರಕಾರಿ ಪಾಲಿಟೆಕ್ನಿಕ್ ಪ್ರಾಚಾರ್ಯರಾದ ಡಾ. ಪ್ರಭುದೇವ್ ಎಂ.ಎಸ್ (ಮೊಬೈಲ್ ಸಂಖ್ಯೆ 9449381159) ಅವರು ಮನವಿ ಮಾಡಿದ್ದಾರೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯ ಆದೇಶದಂತೆ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಆತ್ಮಹತ್ಯೆಗಳನ್ನು ತಡೆಗಟ್ಟಲು ರಾಷ್ಟ್ರೀಯ ಕಾರ್ಯಪಡೆ (ಓಖಿಈ) ಕಾರ್ಯಾಚರಣೆಯಲ್ಲಿದ್ದು, ಇದರ ಉದ್ದೇಶ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಕಾಳಜಿಗಳನ್ನು ಪರಿಹರಿಸಲು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಆತ್ಮಹತ್ಯೆಗಳನ್ನು ತಡೆಗಟ್ಟುವುದು ಆಗಿರುತ್ತದೆ ಎಂದು ಅವರು ತಿಳಿಸಿದ್ದಾರೆ.

# ಇಂದು ಪೂರ್ವಭಾವಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಇದೇ ಏಪ್ರಿಲ್ 14 ರಂದು ಡಾ. ಬಿ.ಆರ್.ಅಂಬೇಡ್ಕರ್ ಅವರ ಜಯಂತ್ಯೋತ್ಸವ ಆಚರಣೆ ಪ್ರಯುಕ್ತ ಏಪ್ರಿಲ್ 7 ರಂದು ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಸೇಡಂ ತಾಲೂಕು ಆಡಳಿತ ಭವನದಲ್ಲಿನ ತಹಶೀಲ್ದಾರ ಕಚೇರಿಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಸೇಡಂ ತಹಶೀಲ್ದಾರರು ತಿಳಿಸಿದ್ದಾರೆ.

ಈ ಮೇಲ್ಕಂಡ ದಿನದಂದು ನಡೆಯುವ ಪೂರ್ವಭಾವಿ ಸಭೆಗೆ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು, ಚುನಾಯಿತ ಜನಪ್ರತಿನಿಧಿಗಳು, ಸಾರ್ವಜನಿಕರು, ಎಲ್ಲಾ ಸಂಘಟನೆಗಳ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸಮಯಕ್ಕೆ ಸರಿಯಾಗಿ ಹಾಜರಾಗಿ ತಮ್ಮ ಸೂಕ್ತ ಸಲಹೆಗಳನ್ನು ನೀಡಬೇಕೆಂದು ಅವರು ತಿಳಿಸಿದ್ದಾರೆ.

# ಇಂದು ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ವ್ಯಾಪ್ತಿಯಲ್ಲಿ ಬರುವ ಕೆಳಕಂಡ ಫೀಡರ್ ವ್ಯಾಪ್ತಿಯ ಪ್ರದೇಶಗಳಲ್ಲಿ ಇದೇ ಏಪ್ರಿಲ್ 7 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆವರೆಗೆ ನಿರ್ವಹಣಾ ಕೆಲಸ ಕಾರ್ಯಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಕೆಳಕಂಡ ಫೀಡರ್‌ಗಳ ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಮ್.ಎಸ್.ಕೆ.ಮಿಲ್ ಫೀಡರ್: ಮದೀನಾ ಕಾಲೋನಿ, ನ್ಯೂ ಮದೀನಾ ಕಾಲೋನಿ, ಮಿಸ್ಬಾ ನಗರ, ಇಕ್ಬಾಲ್ ಕಾಲೋನಿ, ಹುಸೇನ್ ಗಾರ್ಡನ್, ಕೃಷ್ಣ ಮಿನರಲ್ಸ್, ನ್ಯೂ ರಾಘವೇಂದ್ರ ಕಾಲೋನಿ, ಖಾನಿ ಏರಿಯಾ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.ಪೊಲೀಸ್ ಕಾಲೋನಿ ಫೀಡರ್: ಎಮ್.ಎಸ್.ಐ. ಡಿಗ್ರಿ ಕಾಲೇಜ್, ರಾಜಾಪುರ್, ನಾಯ್ಡು ಲೇಔಟ್, ಪಿ.ಡಬ್ಲ್ಯೂಡಿ. ಕ್ವಾರ್ಟರ್ಸ್, ಕುವೆಂಪು ನಗರ, ಪೊಲೀಸ್ ಭವನ, ನೃಪತುಂಗಾ ಕಾಲೋನಿ, ಪ್ರಶಾಂತನಗರ-ಬಿ, ಶಾಹಾಬಾದ್ ಶಕ್ತಿನಗರ, ಗರ್ಲ್ ಹಾಸ್ಟೇಲ್, ಏಶಿಯನ್ ಮಾಲ್, ಜಗತ್, ಹನುಮಾನ ದೇವಸ್ಥಾನ, ಗೊಲ್ಲರ್‌ಗಲ್ಲಿ, ಜಗತ್ ಅಪ್ಪರ & ಲೊವರ್ ಲೇನ್, ಮೈಲಾರಲಿಂಗ ದೇವಾಲಯ, ಪಿ.ಎಲ್.ಡಿ. ಬ್ಯಾಂಕ್, ಬಂಜಾರಾ ಲೇಔಟ್, ರಾಜಾಪೂರ್ ಜಿಡಿಎ, ಅಂಬೇಡ್ಕರ್ ಹಾಸ್ಟೇಲ್ ಹಾಗೂ ಸುತ್ತಮುತ್ತಲ್ಲಿನ ಪ್ರದೇಶಗಳು ರಾಘವೇಂದ್ರ ಕಾಲೋನಿ ಫೀಡರ್: ಆರ್ಕಿಡ್ ಮಾಲ್, ಸಾರಿಗೆ ಸದನ, ಗ್ರ್ಯಾಂಡ್ ಹೋಟೆಲ್ ರಂಗಮಂದಿರ, ವೀರಶೈವ ಕಲ್ಯಾಣ ಮಂಟಪ, ರೋಟರಿ ಕ್ಲಬ್, ಶರಣ ನಗರ, ಗೋವಾ ಹೋಟೆಲ್, ವೆಂಕೂನ್ ಮಾರ್ಕೆಟ್, ಶರಣ ಬಸವೇಶ್ವರ ದೇವಸ್ಥಾನ, ಅಪ್ಪಾ ಪಬ್ಲಿಕ್ ಶಾಲೆ, ಹೊಸ ಕಾರ್ಪೋರೇಷನ್ ಕಚೇರಿ, ಯತೀಮಖಾನಾ ಏರಿಯಾ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

# ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಬೀದರ: ಬೀದರ ಮಹಾನಗರ ಪಾಲಿಕೆಯ ಎಸ್.ಎಫ್.ಸಿ. (ಮುಕ್ತನಿಧಿ) 2025-26ನೇ ಸಾಲಿನ 24.10%/7.25%/5% ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಇತರೆ ಬಡ ವಿಕಲಚೇತನರಿಗೆ ಧನ ಸಹಾಯ ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹರು ಬೀದರ ಮಹಾನಗರ ಪಾಲಿಕೆಯ ವೆಬ್‌ಸೈಟ್ www.bidarcity.mrc.gov.in ನಲ್ಲಿ ನಿಗಧಿತ ಅರ್ಜಿ ನಮೂನೆಗಳನ್ನು ಪಡೆದುಕೊಂಡು ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ದಿನಾಂಕ: 16-04-2026 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಬೀದರ ಮಹಾನಗರ ಪಾಲಿಕೆಯ ಆಶ್ರಯ ಶಾಖೆ ಸಿಬ್ಬಂದಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಭೂ ಒಡೆತನ ಯೋಜನೆ ಜಾರಿಗೆ ಆಗ್ರಹಿಸಿ ಪ್ರತಿಭಟನೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಭೂ ಒಡೆತನ ಯೋಜನೆಯನ್ನು ತಕ್ಷಣ ಜಾರಿಗೊಳಿಸಿ ಭೂ ದರ ನಿಗದಿ ಸಮಿತಿ ಸಭೆ ಕರೆದು ಅನುಮೋದನೆ ನೀಡುವಂತೆ ಆಗ್ರಹಿಸಿ ಭೂ ಒಡೆತನ ಯೋಜನೆ ಅನುಷ್ಠಾನ ಹೋರಾಟ ಸಮಿತಿ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ನಾರಾಯಣರಾವ್ ಪಾರ್ಕ್‌ನಿಂದ ಆರಂಭವಾದ ಪ್ರತಿಭಟನೆ ರ್ಯಾಲಿ ಪ್ರಮುಖ ರಸ್ತೆಗಳಲ್ಲಿ ಸಾಗಿದ್ದು, ಬಳಿಕ ರಾಯಲ್ ಸರ್ಕಲ್ ಬಳಿ ಕೆಲಕಾಲ ಪ್ರತಿಭಟನಾ ಧರಣಿ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ನಂತರ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.ಮನವಿಯಲ್ಲಿ ತಿಳಿಸಿರುವಂತೆ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಭೂ ಒಡೆತನ ಯೋಜನೆ ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ಸಮುದಾಯಗಳಿಗೆ ಸ್ವಾಭಿಮಾನದಿಂದ ಬದುಕಲು ಸಹಕಾರಿಯಾಗಬೇಕಾದ ಯೋಜನೆಯಾಗಿದೆ. ಆದರೆ ಬಳ್ಳಾರಿ ಜಿಲ್ಲೆಯಲ್ಲಿ ಯೋಜನೆ ಜಾರಿಗೆ ವಿಳಂಬವಾಗುತ್ತಿರುವುದರಿಂದ ಫಲಾನುಭವಿಗಳಿಗೆ ಭೂಮಿ ದೊರೆಯದೆ ಸಂಕಷ್ಟ ಎದುರಾಗಿದೆ ಎಂದು ಆರೋಪಿಸಲಾಗಿದೆ.

ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಭೋವಿ ಅಭಿವೃದ್ಧಿ ನಿಗಮ, ಅಲೆಮಾರಿ ಅಭಿವೃದ್ಧಿ ನಿಗಮ, ಮೇದಾರ ಅಭಿವೃದ್ಧಿ ನಿಗಮ ಹಾಗೂ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮಗಳಿಗೆ ಸಂಬಂಧಿಸಿದ ಫಲಾನುಭವಿಗಳು ಭೂಮಿ ಸಿಗದ ಕಾರಣ ಜೀವನೋಪಾಯ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಸಮಿತಿ ತಿಳಿಸಿದೆ.ಇದೀಗ ಯೋಜನೆ ವಿಳಂಬವಾಗಿರುವ ಹಿನ್ನೆಲೆ ಸುಮಾರು ಶೇಕಡಾ 30ರಷ್ಟು ಭೂ ಮಾಲೀಕರು ನೀಡಲು ಮುಂದಾದ ಭೂಮಿಯನ್ನು ಹಿಂಪಡೆಯಲು ಮುಂದಾಗಿದ್ದು, ಇದರಿಂದ ಯೋಜನೆ ಸಂಪೂರ್ಣ ಸ್ಥಗಿತಗೊಳ್ಳುವ ಆತಂಕ ಎದುರಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಆದ್ದರಿಂದ ತಕ್ಷಣ ಭೂ ದರ ನಿಗದಿ ಸಮಿತಿ ಸಭೆ ಕರೆದು ಭೂಮಿಯ ದರ ನಿಗದಿ ಮಾಡಿ ಅನುಮೋದನೆ ನೀಡಬೇಕು. ಇಲ್ಲವಾದಲ್ಲಿ ಹಿಂದುಳಿದ ಸಮುದಾಯಗಳಿಗೆ ದೊರೆಯಬೇಕಾದ ಭೂ ಹಕ್ಕು ಕಳೆದು ಅವರು ಸಂಕಷ್ಟದ ಜೀವನಕ್ಕೆ ತಳ್ಳಲ್ಪಡುವ ಪರಿಸ್ಥಿತಿ ಉಂಟಾಗಲಿದೆ ಎಂದು ಸಮಿತಿ ಎಚ್ಚರಿಕೆ ನೀಡಿದೆ.

# ಪಾಲಿಕೆ ನೌಕರರ ಮುಷ್ಕರ ಅಂತ್ಯ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಮಹಾನಗರ ಪಾಲಿಕೆಯ ಎ.ಡಬ್ಲ್ಯೂ(ಅಸಿಸ್ಟೆಂಟ್ ವರ್ಕ್ಸ್) ಇಂಜಿನಿಯರ್ ವೀರೇಶ್ ಅವರ ಮೇಲೆ ಪಾಲಿಕೆ ಸದಸ್ಯ ಕುಬೇರ್ ಹಲ್ಲೆ ನಡೆಸಿದ ಘಟನೆ ಖಂಡಿಸಿ ಆರಂಭಗೊಂಡಿದ್ದ ಪಾಲಿಕೆ ನೌಕರರ ಮುಷ್ಕರಕ್ಕೆ ಮಾಜಿ ಶಾಸಕ ನಾರಾ ಸೂರ್ಯನಾರಾಯಣರೆಡ್ಡಿ ಅವರ ಮಧ್ಯಸ್ಥಿಕೆಯಿಂದ ಅಂತ್ಯ ಕಂಡಿದೆ.

ಘಟನೆಯ ಹಿನ್ನೆಲೆ ಪಾಲಿಕೆ ಅಧಿಕಾರಿಗಳು ಹಾಗೂ ಸಿಬ್ಬಂದಿಯಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದ್ದು, ಸಿಬ್ಬಂದಿ ಭದ್ರತೆ ಪ್ರಶ್ನೆಯಾಗಿದೆ ಎಂದು ಆರೋಪಿಸಿ ಕೆಲಸ ಸ್ಥಗಿತಗೊಳಿಸಿ ಪ್ರತಿಭಟನೆಗೆ ಮುಂದಾಗಿದ್ದರು. ಹಲ್ಲೆ ನಡೆಸಿದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂಬುದು ನೌಕರರ ಪ್ರಮುಖ ಬೇಡಿಕೆಯಾಗಿತ್ತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಕಮಿಷನರ್ ಮಂಜುನಾಥ್ ಅವರ ನೇತೃತ್ವದಲ್ಲಿ ಪಾಲಿಕೆ ಸಿಬ್ಬಂದಿ ಪ್ರತಿಭಟನೆ ನಡೆಸಿ ಘಟನೆಗೆ ಖಂಡನೆ ವ್ಯಕ್ತಪಡಿಸಿದರು. ಪಾಲಿಕೆ ಕಚೇರಿ ಆವರಣದಲ್ಲಿ ನಡೆದ ಪ್ರತಿಭಟನೆಯಲ್ಲಿ ಹಲವರು ಭಾಗವಹಿಸಿ ನ್ಯಾಯ ಒದಗಿಸುವಂತೆ ಆಗ್ರಹಿಸಿದರು.

ಮುಷ್ಕರದ ಪರಿಣಾಮವಾಗಿ ನಗರದಲ್ಲಿ ಸ್ವಚ್ಛತೆ ಸೇರಿದಂತೆ ವಿವಿಧ ಮೂಲಭೂತ ನಾಗರಿಕ ಸೇವೆಗಳು ಅಸ್ತವ್ಯಸ್ತಗೊಂಡು ಸಾರ್ವಜನಿಕರಿಗೆ ತೊಂದರೆ ಉಂಟಾಯಿತು. ಕಸದ ವಿಲೇವಾರಿ ಹಾಗೂ ಇತರ ಸೇವೆಗಳು ಸ್ಥಗಿತಗೊಂಡ ಕಾರಣ ನಾಗರಿಕರು ಆತಂಕ ವ್ಯಕ್ತಪಡಿಸಿದರು.

ಪರಿಸ್ಥಿತಿ ಗಂಭೀರವಾಗುತ್ತಿದ್ದಂತೆ ಮಾಜಿ ಶಾಸಕ ನಾರಾ ಸೂರ್ಯನಾರಾಯಣರೆಡ್ಡಿ ಅವರು ಮಧ್ಯಸ್ಥಿಕೆ ವಹಿಸಿ ನೌಕರರ ಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಸ್ಯೆಗಳನ್ನು ಆಲಿಸಿದರು. ನೌಕರರ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

ಮಾತುಕತೆ ಫಲಪ್ರದವಾಗುತ್ತಿದ್ದಂತೆ ನೌಕರರು ಮುಷ್ಕರವನ್ನು ಹಿಂಪಡೆಯಲು ಒಪ್ಪಿಕೊಂಡು ತಕ್ಷಣವೇ ತಮ್ಮ ಕರ್ತವ್ಯಕ್ಕೆ ಹಾಜರಾದರು. ಬಳಿಕ ಮಹಾನಗರ ಪಾಲಿಕೆಯ ಸೇವೆಗಳು ಹಂತ ಹಂತವಾಗಿ ಸಾಮಾನ್ಯಸ್ಥಿತಿಗೆ ಮರಳಿದವು.

ಘಟನೆ ಮರುಕಳಿಸದಂತೆ ಸಿಬ್ಬಂದಿ ಭದ್ರತೆಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ನೌಕರರು ಆಗ್ರಹಿಸಿದ್ದು, ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

• **ಮಲ್ಲಮ್ಮ ನುಡಿ ವಾರ್ತೆ , ಕಲಬುರಗಿ**

ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ರಾಯಚೂರಿನಿಂದ ರಸ್ತೆ ಮೂಲಕ ಏಪ್ರಿಲ್ 8 ರಂದು ಬುಧವಾರ ಸಂಜೆ 5 ಗಂಟೆಗೆ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು. ಏಪ್ರಿಲ್ 9 ಹಾಗೂ 10 ರಂದು ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು.

# ಎಲ್‌ಪಿಜಿ ಕೊರತೆ ಆಟೋಗಳ ದೀರ್ಘ ಸಾಲು



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಎಲ್‌ಪಿಜಿ ಗ್ಯಾಸ್ ಕೊರತೆಯಿಂದಾಗಿ ಬಳ್ಳಾರಿ ನಗರದಲ್ಲಿ ಆಟೋ ಚಾಲಕರು ಸಂಕಷ್ಟಕ್ಕೆ ಸಿಲುಕಿದ್ದು, ಅನಂತಪುರ ರಸ್ತೆಯಲ್ಲಿರುವ ಎಲ್‌ಪಿಜಿ


ಫಿಲ್ಲಿಂಗ್ ಬಂಕ್ ಬಳಿ ಇಂದು 500ಕ್ಕೂ ಹೆಚ್ಚು ಆಟೋಗಳು ದೀರ್ಘ ಸಾಲಿನಲ್ಲಿ ನಿಂತಿರುವ ದೃಶ್ಯ ಕಂಡುಬಂದಿತು. ನಗರದ ಇತಿಹಾಸದಲ್ಲೇ ಇಷ್ಟು ದೊಡ್ಡ ಪ್ರಮಾಣದಲ್ಲಿ ಆಟೋಗಳು ಸಾಲಾಗಿ ನಿಂತಿರುವುದು ಇದೇ ಮೊದಲು ಎಂದು ಸ್ಥಳೀಯರು ತಿಳಿಸಿದ್ದಾರೆ.

ಬಳ್ಳಾರಿಯಲ್ಲಿ ಒಟ್ಟು ಏಳು ಎಲ್‌ಪಿಜಿ ಫಿಲ್ಲಿಂಗ್ ಸ್ಟೇಷನ್‌ಗಳು ಇದ್ದರೂ, ಸದ್ಯಕ್ಕೆ ಕೇವಲ ಒಂದು ಬಂಕ್ ಮಾತ್ರ ಕಾರ್ಯನಿರ್ವಹಿಸುತ್ತಿರುವುದರಿಂದ ಸಮಸ್ಯೆ ಗಂಭೀರವಾಗಿದೆ. ಗ್ಯಾಸ್ ಪೂರೈಕೆ ಕೊರತೆಯಿಂದ ಆಟೋ ಚಾಲಕರು ಬೆಳಗ್ಗೆಯಿಂದಲೇ ಸಾಲಿನಲ್ಲಿ ನಿಂತು ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ಎದುರಾಗಿದೆ.

ಎಲ್‌ಪಿಜಿ ತುಂಬಿಸಿಕೊಳ್ಳಲು ಹಲವು ಗಂಟೆಗಳ ಕಾಲ ಕಾಯಬೇಕಾದ ಕಾರಣ ಚಾಲಕರ ದಿನಸಿ ಆದಾಯಕ್ಕೂ ಹೊಡೆತ ಬಿದ್ದಿದೆ. ಪ್ರಯಾಣಿಕರ ಸೇವೆಯೂ ವ್ಯತ್ಯಯಗೊಂಡಿದ್ದು, ಸಾರ್ವಜನಿಕರಿಗೆ ಸಹ ಸಾರಿಗೆ ತೊಂದರೆ ಉಂಟಾಗಿದೆ ಎಂದು ಆಟೋ ಚಾಲಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಮಸ್ಯೆ ಶೀಘ್ರ ಪರಿಹರಿಸಿ ಉಳಿದ ಎಲ್‌ಪಿಜಿ ಫಿಲ್ಲಿಂಗ್ ಕೇಂದ್ರಗಳನ್ನು ಕೂಡ ತಕ್ಷಣ ಕಾರ್ಯಾರಂಭಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಆಟೋ ಚಾಲಕರು ಆಗ್ರಹಿಸಿದ್ದಾರೆ.

# ಮುಖ್ಯೋಪಾಧ್ಯಾ ಸೇವಾ ನಿವೃತ್ತಿ ಬೀಳ್ಕೊಡುಗೆ



• **ಮಲ್ಲಮ್ಮ ನುಡಿವಾರ್ತೆ ಕುಕನೂರು**

ತಾಲ್ಲೂಕಿನ ಬಳಗೇರಿ ಗ್ರಾಮದ ಶ್ರೀಮತಿ ಶಿವಮ್ಮ ಬಸವರೆಡ್ಡಿ ರೆಡ್ಡೇರ ಸರಕಾರಿ ಪ್ರೌಢ ಶಾಲೆಯಲ್ಲಿ ವೀರಭದ್ರಪ್ಪ ಎಸ್. ಬೇಣಕಲ್

ಮುಖ್ಯೋಪಾಧ್ಯಾಯರು ಇವರ ಸೇವಾ ನಿವೃತ್ತಿ ನಿಮಿತ್ಯ ಅಭಿನಂದನಾ ಸಮಾರಂಭದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಉತ್ತಮ ಶಿಕ್ಷಣ ಪಡೆದಿದ್ದಕ್ಕೆ ವೀರಭದ್ರಪ್ಪ ಬೇಣಕಲ್ಲ ರವರು ಉತ್ತಮ ಶಿಕ್ಷಣ ಪಡೆದನು ಶಿಕ್ಷಕನಾಗಿ ಉತ್ತಮ ಜಗತ್ತಿನ ಉತ್ತಮ ನಿರ್ಮಾಣಕ್ಕೆ ಅವರು ಕಾರಣವಾಗಿದ್ದಾರೆ ನಾವು ಉತ್ತಮ ಶಿಕ್ಷಣ ಪಡೆಲಿಲ್ಲಾ ಅದಕ್ಕೆ ನಾವು ರಾಜಕೀಯ ದಾರಿಯನ್ನು ಹಿಡಿದಿದ್ದೇವೆ ಅವರ ನಿವೃತ್ತ ಜೀವನ ಉತ್ತಮವಾಗಿರಲಿ ಎಂದು ಹೇಳಿದರು.

ಜಿಪಂ ಮಾಜಿ ಸದಸ್ಯರಾದ ಸಿ.ಎಚ್. ಪೊಲೀಸ್ ಪಾಟೀಲ್ ಮಾತನಾಡಿ,ರಾಷ್ಟ್ರದಲ್ಲಿ ಅತ್ಯುತ್ತಮವಾದ ವೃತ್ತಿ ಅಂದರೆ ಶಿಕ್ಷಕ ವೃತ್ತಿ ಈ ಜಗತ್ತಿನಲ್ಲಿ ಶಿಕ್ಷಕನ ಕೊಡುಗೆ ಅಪಾರವಾಗಿದೆ. ಯಾರಿಗೂ ಸರಿಸಾಟಿ ಇಲ್ಲಾ ಅಂತಹ ವೃತ್ತಿ

ಸಾರ್ವಜನಿಕರ ಶಿಕ್ಷಣ ಇಲಾಖೆ ನಿವೃತ್ತ ಉಪನಿರ್ದೇಶಕರಾದ ಎಸ್. ಡಿ. ಗಾಂಜಿ ಮಾತನಾಡಿ. ಬಾಲ್ಯದಲ್ಲಿ ಮಕ್ಕಳನ್ನ ತಿದ್ದುವಲ್ಲಿ ಶಿಕ್ಷಕರ ಪಾತ್ರ ಬಹಳ ಮುಖ್ಯ ತಮ್ಮ ಮನೆ ಏನಾದರೂ ಚಿಂತೆಯಿಲ್ಲಾ ಮಕ್ಕಳ ಭವಿಷ್ಯ ರೂಪಿಸುವುದೇ ಅವರ ನಿಜವಾದ ಕಾರ್ಯ ಅಂತ ಕಾರ್ಯದಲ್ಲಿ ಭಾಗಿಯಾದ ವ್ಯಕ್ತಿ ವೀರಭದ್ರಪ್ಪ ಬೇಣಕಲ್ಲರವರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಿಡಿಪಿಓ ಬೇಟದಪ್ಪ ಮಳೆಕೊಪ್ಪ, ಶರಣಪ್ಪ ರಾವಣಕಿ ಹಿರಿಯ ಸಹೋದರ ಮತ್ತು ಹಿರಿಯ ಮುಖ್ಯಪಾಧ್ಯಾಯರು ಕೆ ಪಿ ಎಸ್ ಬಂಡಿ ಇವರು ತಮ್ಮ ಸಹ ಶಿಕ್ಷಕರೊಂದಿಗೆ ಉಪಸ್ಥಿತರಿದ್ದರು. ಶ್ರೀಮತಿ ನೀಲಾವತಿ ಶರಣಪ್ಪ ರಾವಣಕಿ, ಬಸವರಾಜ್ ಮೇಟಿ, ಗುದ್ನೇಶ್, ಸುಧಾಕರ್ ದೇಸಾಯಿ, ಬಸವರಾಜ್ ಭಜೇಂತ್ರಿ, ಮಲ್ಲಿಕಾರ್ಜುನಸ್ವಾಮಿ ಶಂಕರಾಗೌಡ್ರು ಪಾಟೀಲ್, ಮಾರುತಿ, ಜಾಕಿರ್ಹುಸೇನ್ ಕುಕನೂರ, ಎಪ್. ಎಂ. ಕಳ್ಳಿ, ಮಹೇಶ್ ಸಬರದ್, ಹಾಗೂ ಇತರರು ಇದ್ದರು.

# ಕ್ಯಾನ್ಸರ್ ಭೀತಿ: ಜಾಗೃತಿ ಆರಂಭಿಕ ಪತ್ತೆಗೆ ತಜ್ಞರ ಕರೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಕರ್ನಾಟಕದಲ್ಲಿ ಕ್ಯಾನ್ಸರ್ ರೋಗದ ಪ್ರಮಾಣ ಆತಂಕಕಾರಿ ಮಟ್ಟದಲ್ಲಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಾಗೃತಿ, ಆರಂಭಿಕ ಹಂತದಲ್ಲಿಯೇ ರೋಗ ಪತ್ತೆ ಹಾಗೂ ಸಮಾಜದ ಒಗ್ಗಟ್ಟಿನ ಹೋರಾಟ ಅತ್ಯಂತ ಅಗತ್ಯವಾಗಿದೆ ಎಂದು ತಜ್ಞರು ಎಚ್ಚರಿಸಿದ್ದಾರೆ.




ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಅವರಣದಲ್ಲಿರುವ ಪತ್ರಿಕಾ ಭವನದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಣಿಪಾಲ್ ಆಸ್ಪತ್ರೆಯ ಸರ್ಜಿಕಲ್ ಆಂಕೊಲಾಜಿ ಮತ್ತು ರೊಬೊಟಿಕ್ ಸರ್ಜರಿ ವಿಭಾಗದ ಸಲಹೆಗಾರರಾದ ಡಾ. ದೇವೇಶ್ ಎಸ್. ಬಲ್ಲಾಳ್ ಅವರು ರಾಜ್ಯದಲ್ಲಿ ಕ್ಯಾನ್ಸರ್ ಸಮಸ್ಯೆಯ ಗಂಭೀರತೆ ಕುರಿತು ವಿವರಿಸಿದರು.

2024ರ ಅಂಕಿಅಂಶಗಳ ಪ್ರಕಾರ ಕರ್ನಾಟಕದಲ್ಲಿ ವರ್ಷಕ್ಕೆ ಅಂ–ದಾಜು 87,855 ಹೊಸ ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗುತ್ತಿದ್ದು, ಸುಮಾರು 26,516 ಮಂದಿ ಸಾವನ್ನಪ್ಪುತ್ತಿದ್ದಾರೆ ಎಂದು ಅವರು ತಿಳಿಸಿದರು. ರೋಗವನ್ನು ತಡವಾಗಿ ಪತ್ತೆಹಚ್ಚುವುದು, ಆಧುನಿಕ ಜೀವನಶೈಲಿಯಿಂದ ಉಂಟಾಗುತ್ತಿರುವ ಜಡತ್ವ, ಕಳಪೆ ಆಹಾರ ಪದ್ಧತಿ ಹಾಗೂ ಕ್ಯಾನ್ಸರ್ ತಪಾಸಣೆಯ ಕಡಿಮೆ ಪ್ರಮಾಣ ಈ ಸಮಸ್ಯೆಗೆ ಪ್ರಮುಖ ಕಾರಣಗಳಾಗಿವೆ ಎಂದು ಹೇಳಿದರು. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಜಾಗೃತಿ ಕೊರತೆ ಮತ್ತು ಆರೋಗ್ಯ ಸೇವೆಗಳ ಲಭ್ಯತೆಯ ಅಭಾವ ಪರಿಸ್ಥಿತಿಯನ್ನು ಮತ್ತಷ್ಟು ಗಂಭೀರಗೊಳಿಸುತ್ತಿದೆ ಎಂದರು.

ರಾಜ್ಯದಲ್ಲಿ ತಂಬಾಕು ಸೇವನೆ ದೊಡ್ಡ ಮಟ್ಟದ ಅಪಾಯಕಾರಕ ಅಂಶವಾಗಿದ್ದು, ಒಟ್ಟು ಕ್ಯಾನ್ಸರ್ ಪ್ರಕರಣಗಳಲ್ಲಿ ಸುಮಾರು ಶೇಕಡಾ 25ರಷ್ಟು ಪ್ರಕರಣಗಳು ತಂಬಾಕು ಬಳಕೆಗೆ ನೇರವಾಗಿ ಸಂಬಂಧ ಹೊಂದಿವೆ. ಅಂದಾಜು 22ಸಾವಿರಕ್ಕೂ ಹೆಚ್ಚು ಪ್ರಕರಣಗಳು ತಂಬಾಕು ಸೇವನೆಯಿಂದಲೇ ಉಂಟಾಗುತ್ತಿವೆ ಎಂದು ತಜ್ಞರು ಎಚ್ಚರಿಸಿದರು. ಇದರಿಂದ ತಂಬಾಕು ನಿಯಂತ್ರಣ ಹಾಗೂ ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳನ್ನು ಬಲಪಡಿಸುವ ಅಗತ್ಯ ಸ್ಪಷ್ಟವಾಗುತ್ತಿದೆ ಎಂದು ಹೇಳಿದರು.

ಕ್ಯಾನ್ಸರ್ ಪ್ರಕರಣಗಳಲ್ಲಿ ಲಿಂಗ ಅಸಮಾನತೆ ಕೂಡ ಗಮನಾರ್ಹವಾಗಿದೆ. ಉತ್ತರ ಕರ್ನಾಟಕದ ತೃತೀಯ ಹಂತದ ಆರೋಗ್ಯ ಕೇಂದ್ರಗಳ ವರದಿಗಳ ಪ್ರಕಾರ, ಕ್ಯಾನ್ಸರ್ ರೋಗಿಗಳಲ್ಲಿ ಸುಮಾರು 60 ಶೇಕಡಾ ಮಹಿಳೆಯರು ಇದ್ದಾರೆ. ವಿಶೇಷವಾಗಿ 40ರಿಂದ 59 ವರ್ಷದ ಮಹಿಳೆಯರಲ್ಲಿ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿವೆ. ಗ್ರಾಮೀಣ ಮಹಿಳೆಯರು ಆರೋಗ್ಯ ಸಮಸ್ಯೆಗಳನ್ನು ನಿರ್ಲಕ್ಷಿಸುವುದು, ಆರ್ಥಿಕ ಅಡಚಣೆಗಳು ಹಾಗೂ ಸಂಕೋಚದ ಕಾರಣದಿಂದ ತಪಾಸಣೆಗೆ ಹಿಂದೇಟು ಹಾಕುತ್ತಿರುವುದು ಪ್ರಮುಖ ಸಮಸ್ಯೆಯಾಗಿದೆ ಎಂದು ತಿಳಿಸಿದರು.

ನಗರಪ್ರದೇಶಗಳಲ್ಲಿ ಗರ್ಭಕೋಶದ ಕೊರಳಿನ ಕ್ಯಾನ್ಸರ್ ತಪಾಸಣೆ ಪ್ರಮಾಣ ಶೇ.2.4 ಇದ್ದರೆ, ಗ್ರಾಮೀಣ ಪ್ರದೇಶಗಳಲ್ಲಿ ಅದು ಕೇವಲ ಶೇ.1.8 ಮಾತ್ರ ಇರುವುದರಿಂದ ಆರೋಗ್ಯ ಸೇವೆಗಳ ಅಸಮಾನತೆ ಸ್ಪಷ್ಟವಾಗುತ್ತದೆ ಎಂದರು. ಆದರೆ ಸರ್ಕಾರದ 'ಗೃಹ ಆರೋಗ್ಯ' ಯೋಜನೆಯಡಿ 2025ರ ಅಂತ್ಯದವರೆಗೆ 40 ಲಕ್ಷಕ್ಕೂ ಹೆಚ್ಚು ಗ್ರಾಮೀಣ ಜನರನ್ನು ಪ್ರಮುಖ ಕ್ಯಾನ್ಸರ್ ತಪಾಸಣೆಗೆ ಒಳಪಡಿಸಿರುವುದು ಆಶಾದಾಯಕ ಬೆಳವಣಿಗೆಯಾಗಿದೆ ಎಂದು ಹೇಳಿದರು.

"ಕ್ಯಾನ್ಸರ್ ಆರಂಭಿಕ ಹಂತದಲ್ಲೇ ಪತ್ತೆಯಾದರೆ ಜೀವ ಉಳಿಸುವುದು ಸಾಧ್ಯ. ಆರೋಗ್ಯ ಸೇವೆಗಳು ನಗರಗಳಿಗೆ ಮಾತ್ರ ಸೀಮಿತವಾಗದೆ ಗ್ರಾಮೀಣ ಪ್ರದೇಶಗಳಿಗೂ, ವಿಶೇಷವಾಗಿ ಮಹಿಳೆಯರಿಗೂ ತಲುಪಬೇಕು. ರೋಗ ಪತ್ತೆಯಲ್ಲಿ ವಿಳಂಬವಾದರೆ ಬದುಕುಳಿಯುವ ಸಾಧ್ಯತೆ ಹಾಗೂ ಜೀವನದ ಗುಣಮಟ್ಟದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ" ಎಂದು ಡಾ. ದೇವೇಶ್ ಬಲ್ಲಾಳ್ ಅಭಿಪ್ರಾಯಪಟ್ಟರು. ಕ್ಯಾನ್ಸರ್ ತಪಾಸಣಾ ವ್ಯಾಪ್ತಿಯನ್ನು ವಿಸ್ತರಿಸುವುದು, ತಂಬಾಕು ನಿಯಂತ್ರಣ ಕ್ರಮಗಳನ್ನು ಬಲಪಡಿಸುವುದು ಹಾಗೂ ಗ್ರಾಮೀಣ ಜನರಲ್ಲಿ ಜಾಗೃತಿ ಹೆಚ್ಚಿಸುವುದು ರಾಜ್ಯದಲ್ಲಿ ಕ್ಯಾನ್ಸರ್ ಭಾರವನ್ನು ಕಡಿಮೆ ಮಾಡಲು ಪ್ರಮುಖವಾಗಿದ್ದು, ಸಮಾಜ, ಸರ್ಕಾರ ಮತ್ತು ವೈದ್ಯಕೀಯ ವಲಯ ಒಗ್ಗೂಡಿ ಕಾರ್ಯನಿರ್ವಹಿಸಿದಾಗ ಮಾತ್ರ ಈ ಮಹಾಮಾರಿಯನ್ನು ನಿಯಂತ್ರಿಸಲು ಸಾಧ್ಯ ಎಂದು ಅವರು ಹೇಳಿದರು.

# ಆಕ್ಷೇಪಣೆ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಕಲಬುರಗಿ ಮಹಾನಗರ ಪಾಲಿಕೆಯಿಂದ 2025–26ನೇ ಸಾಲಿಗೆ ಶೇ. 5ರ ಯೋಜನೆಯಡಿ 2022–23ನೇ ಸಾಲಿನ ಪರಿಷ್ಕೃತ ಕ್ರಿಯಾ ಯೋಜನೆಯಡಿ ಎಸ್.ಎಫ್.ಸಿ.(ಮುಕ್ತನಿಧಿ) ಅನುದಾನದಡಿ ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು (ಸಣ್ಣ ಉದ್ದಿಮೆಗಾಗಿ) ಸಹಾಯಧನ ನೀಡಲು ಅರ್ಜಿ ಆಹ್ವಾನಿಸಿ, ಅರ್ಹ ಹಾಗೂ ಅನರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪಾಲಿಕೆಯ ನೋಟೀಸ್ ಬೋರ್ಡ್ ಹಾಗೂ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಕಲಬುರಗಿ ಮಹಾನಗರ ಪಾಲಿಕೆಯ http://www.kalaburagicity.mrc.gov ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಈ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಅಭ್ಯರ್ಥಿಗಳ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2026ರ ಏಪ್ರಿಲ್ 21 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ತದನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕಲಬುರಗಿ ಮಹಾನಗರ ಪಾಲಿಕೆ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

# ಡಾ. ಬಾಬುಜಗಜೀವನರಾಮ್ ಸಮಾನತೆಯ ಸಂದೇಶ ಪಾಲಿಸಿ: ದಿಲೀಷ್

• **ಮಲ್ಲಮ್ಮ ನುಡಿ ವಾರ್ತೆ ಕಾರವಾರ**

ಅಸ್ಪೃಶ್ಯತೆಯನ್ನು ತೊಡೆದು ಹಾಕಿ ಸಮಾಜದಲ್ಲಿ ಸಮಾನತೆ ತರುವ ಉದ್ದೇಶದಿಂದ ಡಾ.ಬಾಬು ಜಗಜೀವನರಾಮ್ ಅವರು ಜಾರಿಗೆ ತಂದ ಹಲವು ಕಾರ್ಯಕ್ರಮಗಳಲ್ಲಿನ ಸಮಾನತೆಯ ಸಂದೇಶವನ್ನು ಪ್ರತಿಯೊಬ್ಬರೂ ಅನುಸರಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಹೇಳಿದರು.

ಅವರು ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಕನ್ನಡ ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಕಾರವಾರ ಇವರ ಸಂಯುಕ್ತ ಆಶ್ರಯದಲ್ಲಿ , ಜಿಲ್ಲಾಧಿಕಾರಿ ಕಚೇರಿ ಸಭಾ ಭವನದಲ್ಲಿ ನಡೆದ ಡಾ.ಬಾಬು ಜಗಜೀವನರಾಮ್ ಅವರ 119 ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.




ದೇಶದ ಸ್ವಾತಂತ್ರ್ಯ ಪೂರ್ವದಲ್ಲಿ ಬಾಲ್ಯದಲ್ಲಿಯೇ ಅಸ್ಪೃಶ್ಯತೆಯನ್ನು ಅನುಭವಿಸಿ, ಅದರ ವಿರುದ್ಧ ಹೋರಾಟ ಆರಂಭಿಸಿ, ಶಿಕ್ಷಣದ ಮೂಲಕ ದೇಶದ ಉನ್ನತ ಹುದ್ದೆಗಳನ್ನೂ ಅಲಂಕರಿಸಿದ ಡಾ.ಬಾಬು ಜಗಜೀವನರಾಮ್ ಅವರು , ಸಮಾನತೆಯ ಹರಿಕಾರರಾಗಿ, ದೇಶದ ಎಲ್ಲಾ ವರ್ಗದ ಹಾಗೂ ಸಮುದಾಯಗಳಿಗೆ ಸಮಾನ ಅವಕಾಶಗಳನ್ನು ನೀಡುವ ಕಾಯಿದೆಗಳನ್ನು , ಕಾರ್ಯಕ್ರಮಗಳನ್ನು ಜಾರಿಗೆ ತರುವ ಮೂಲಕ ಸಮಾನತೆಯ ಸಂದೇಶವನ್ನು ಸಾರಿದ್ದಾರೆ. ಪ್ರಸ್ತುತ ಸಮಾಜದಲ್ಲಿನ ಎಲ್ಲಾ ವರ್ಗದ ವ್ಯಕ್ತಿಗಳು ಕೂಡ ತಮ್ಮ ಕಾರ್ಯವ್ಯಾಪ್ತಿಯಲ್ಲಿ ಪ್ರತಿಯೊಬ್ಬರಿಗೂ ಸಮಾನ ಅವಕಾಶಗಳು ದೊರೆಯುವಂತೆ ಮತ್ತು ಹಿಂದುಳಿದವರನ್ನು ಮುಂದೆ ತರುವ ಕಾರ್ಯವನ್ನು ಮಾಡುವ ಕಾರ್ಯವನ್ನು ಮಾಡಬೇಕು ಎಂದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅಲ್ಲಾಭಕಷ್ ಮಾತನಾಡಿ, ಡಾ.ಬಾಬು ಜಗಜೀವನರಾಮ್ ಅವರು , ಕಾರ್ಮಿಕರ ಹಿತ ರಕ್ಷಣೆಗಾಗಿ ಕನಿಷ್ಠ ವೇತನ ಕಾಯ್ದೆ, ನ್ಯಾಷನಲ್ ಲೇಬರ್ ಕಮಿಷನ್ ಸ್ಥಾಪನೆ, ಹಸಿರು ಕ್ರಾಂತಿಯ ಹರಿಕಾರರಾಗಿ ದೇಶದಾದ್ಯಂತ ಕೃಷಿ ವಿಜ್ಞಾನ ಕೇಂದ್ರಗಳ ಸ್ಥಾಪನೆ, ರೈಲ್ವೆ ಮಜ್ದೂರು ಯೂನಿಯನ್ ಗೆ ಮಾನ್ಯತೆ ಸೇರಿದಂತೆ ಹಲವು ಕ್ರಾಂತಿಕಾರಿ ಕಾರ್ಯಕ್ರಮಗಳ ಮೂಲಕ ಸಮಾನತೆ ಮತ್ತು ಜಾತ್ಯಾತೀತತೆಗೆ ಒತ್ತು ನೀಡಿದ್ದು, ಅವರ ತತ್ವಗಳನ್ನು ಪ್ರತಿಯೊಬ್ಬರೂ ಅನುಸರಿಸಬೇಕು ಎಂದರು.

ಡಾ.ಬಾಬು ಜಗಜೀವನರಾಮ್ ಕುರಿತು ಉಪನ್ಯಾಸ ನೀಡಿದ, ನಿವೃತ್ತ ಪ್ರಾಚಾರ್ಯರು ಮತ್ತು ಜಿಲ್ಲಾ ಪ.ಜಾತಿ,ಪ. ವರ್ಗಗಳ ನೌಕರರ ಒಕ್ಕೂಟದ ಅಧ್ಯಕ್ಷ ಜಿ.ಡಿ.ಮನೋಜ್, ಶಕ್ತಿ ಮತ್ತು ಹೋರಾಟಕ್ಕೆ ಮತ್ತೊಂದು ಹೆಸರೇ ಡಾ.ಬಾಬು ಜಗಜೀವನರಾಮ್, ದೇಶದ ಸ್ವಾತಂತ್ರ್ಯ ಹೋರಾಟ ಮತ್ತು ಅಸಮಾನತೆಯ ವಿರುದ್ದದ ಹೋರಾಟಕ್ಕೆ ತಮ್ಮ ಇಡೀ ಜೀವನ ಮುಡಿಪಾಗಿಟ್ಟಿದ್ದರು. ದೇಶದಲ್ಲಿನ ಪ್ರತಿಯೊಬ್ಬರಿಗೂ ಸಮಾನ ಅವಕಾಶಗಳು ದೊರೆಯಬೇಕು ಎನ್ನುವ ಉದ್ದೇಶದಿಂದ ಕೇಂದ್ರ ಸಚಿವರಾಗಿ ತಾವು ಕರ್ತವ್ಯ ನಿರ್ವಹಿಸಿದ ಎಲ್ಲಾ ಇಲಾಖೆಗಳಲ್ಲಿ ಹಲವು ಕಾಯಿದೆಗಳನ್ನು ಜಾರಿಗೆ ತಂದಿದ್ದರು. ಸಮಾಜ ಪರಿವರ್ತನೆಯ ತುಡಿತ ಹೊಂದಿದ್ದ ಅವರು ದೇಶದ ಪ್ರಗತಿಯೇ ಪ್ರತಿಯೊಬ್ಬರ ಪ್ರಗತಿ ಎಂದು ನಂಬಿದ್ದರು. ದೇಶದ ಕೃಷಿ, ರಕ್ಷಣೆ, ರೈಲ್ವೆ, ಸಾರಿಗೆ, ಕಾರ್ಮಿಕ ಸಚಿವರಾಗಿ ಅವರು ನೀಡಿರುವ ಕೊಡುಗೆಗಳು ಅಪಾರವಾಗಿದ್ದು, ಸಮಾನತೆಯ ಹರಿಕಾರರಾಗಿ ಅವರು ಸದಾ ಪ್ರೇರಣೆಯಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ವೈ.ಕೆ.ಉಮೇಶ್, ದಲಿತ ಸಂಘಟನೆಗಳು ಮುಖಂಡರಾದ ದೀಪಕ್ ಕುಡಾಳಕರ, ನಾಗರಾಜ ತಳವಾರ , ಜಿಲ್ಲೆಯ ಪ.ಜಾತಿ ಪಂಗಡ ಸಂಘಟನೆಗಳ ಸದಸ್ಯರು, ಜಿಲ್ಲಾ ಮತ್ತು ತಾಲೂಕುಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಮತ್ತಿತರರು ಇದ್ದರು. ಸಮಾಜ ಕಲ್ಯಾಣ ಇಲಾಖೆಯ ನಳಿನಿ ಪಟಗಾರ್ ಸ್ವಾಗತಿಸಿದರು, ಪತ್ರಾಂಕಿತ ವ್ಯವಸ್ಥಾಪಕ ನಾಗರಾಜ ನಾಯಕ ವಂದಿಸಿದರು.

# ಜೋಳ ಹೊತ್ತ ದೀರ್ಘದಂಡ ನಮಸ್ಕಾರ



• **ಮಲ್ಲಮ್ಮ ನುಡಿ ವಾರ್ತೆ ಮುದಗಲ್**

ಪಟ್ಟಣ ಸಮೀಪದ ಕನಸಾವಿ ಗ್ರಾಮದ ಬಸವರಾಜ ನಾಯಕ (ವ –47 ) ಎಂಬುವವರು ಸುಮಾರು 1 ಕ್ವಿಂಟಲ್ ಜೋಳದ ಚೀಲ ಹೊತ್ತು ದೀರ್ಘದಂಡ ನಮಸ್ಕಾರ ಹಾಕಿದ್ದಾರೆ

ಕನಸಾವಿ ಗ್ರಾಮದ ಶ್ರೀ ಅನ್ನದಾನೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಬಸವರಾಜ ನಾಯಕ ಅವರ ಮನೆಯಿಂದ ಸುಮಾರು 1 ಕ್ವಿಂಟಲ್ ಜೋಳದ ಚೀಲ ಹೊತ್ತು ದೀರ್ಘದಂಡ ನಮಸ್ಕಾರ ಹಾಕುವ ಮೂಲಕ ಹರಕೆ ತೀರಿಸಿದ್ದಾರೆ ಇದೆ ವೇಳೆ ಶ್ರೀ ಮುಪ್ಪಿನ ಬಸವ ಲಿಂಗ ಶ್ರೀಗಳ ಆಶೀರ್ವಾದ ಪಡೆದುಕೊಂಡರು ಈ ಸಂದರ್ಭದಲ್ಲಿ ತುರಡಗಿ ದುರುಗಪ್ಪ ಪೂಜಾರಿ ಹಾಗೂ ಬಸವರಾಜ ನಾಯಕ ಕುಟುಂಬಸ್ಥರು ಇದ್ದರು.

# CITATION

**IN THE COURT OF THE ADDL CIVIL JUDGE & JM.F.C.. AT BASAVAKALYAN**

**Crl. Misc. No. 42/2026**

**Petitioner**

Amrut & others

**// Versus//**

**Respondent**

**The Tahasildar, Basavakalyan.**

**Sub: For issue of Death Certificate.**

**PETITION U/SEC 13(3) OF BIRTH AND DEATH REGISTRATION**

ACT 1969

**PAPER PUBLICATION**

Whereas the above named petitioner has filed petition under section 13(3) of Birth & Death Registration Act 1969 for issue the direction to respondent to give death certificate of petitioner Brother of petitioners, by name "Prabhu S/o Kalyani Uppar who was died on 02/02/2023 in his house at Village Hiranagaon, Tq: Basavakalyan, Dist; Bidar.

Hence this paper publication is issued to all concerned person to file necessary objection if any on 04 /05/2026 at 11:00 AM.

Given under my hand seal of the court on this 4/4/2026

**// By order of the court//**

**Chief Ministerial Officer**

**JMFC Court Basavakalyan**

## ಆಸ್ತಿ ತೆರಿಗೆಯಲ್ಲಿ ಶೇ.05 ರಷ್ಟು ಏರಿಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕಂಪ್ಲಿ ಪುರಸಭೆ ವ್ಯಾಪ್ತಿಯಲ್ಲಿ ಬರುವ ವಸತಿ ಮತ್ತು ವಾಣಿಜ್ಯ ಉದ್ದೇಶದ ಆಸ್ತಿಗಳ ತೆರಿಗೆಯನ್ನು 2026-27ನೇ ಸಾಲಿಗೆ ಅನ್ವಯವಾಗುವಂತೆ ಹೆಚ್ಚಳ ಮಾಡಲಾಗಿದೆ ಎಂದು

ಕಂಪ್ಲಿ ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ನಗರಾಡಳಿತ ನಿರ್ದೇಶನಾಲಯದ ಸುತ್ತೋಲೆ ಮತ್ತು ಕರ್ನಾಟಕ ಪುರಸಭೆಗಳ ಕಾಯ್ದೆ 1964ರ ತಿದ್ದುಪಡಿ ನಿಯಮಗಳನ್ವಯ ಈ ಕ್ರಮ ಕೈಗೊಳ್ಳಲಾಗಿದೆ.

ಸರ್ಕಾರದ ಮಾರ್ಗಸೂಚಿಯಂತೆ ಆಸ್ತಿ ತೆರಿಗೆಯನ್ನು ಮಾರುಕಟ್ಟೆ ಮೌಲ್ಯದ ಆಧಾರದ ಮೇಲೆ ಪರಿಷ್ಕರಿಸುವುದು ಕಡ್ಡಾಯವಾಗಿದೆ.

ಕಂಪ್ಲಿ ಪುರಸಭೆ ವ್ಯಾಪ್ತಿಯ ಎಲ್ಲಾ ಆಸ್ತಿ ಮಾಲೀಕರಿಗೆ ಈ ಪರಿಷ್ಕೃತ ದರ ಅನ್ವಯವಾಗಲಿದೆ. ವಸತಿ ಆಸ್ತಿಗಳಿಗೆ ಶೇ.05 ರಷ್ಟು ತೆರಿಗೆ ಹೆಚ್ಚಳ, ವಾಣಿಜ್ಯ ಮತ್ತು ಕೈಗಾರಿಕಾ ಆಸ್ತಿಗಳ ಖಾಲಿ ನಿವೇಶನ ಹಾಗೂ ಕಟ್ಟಡಗಳಿಗೆ ಶೇ.05 ರಷ್ಟು ತೆರಿಗೆ ಹೆಚ್ಚಳ ಮಾಡಲಾಗಿದ್ದು, ಈ ಹೊಸ ದರಗಳು 2026-27ನೇ ಆರ್ಥಿಕ ಸಾಲಿಗೆ ಅನ್ವಯವಾಗಲಿವೆ.

ಆಸ್ತಿ ಮಾಲೀಕರು ಈ ಬದಲಾವಣೆಯನ್ನು ಗಮನಿಸಿ, ಪರಿಷ್ಕೃತ ದರದಂತೆ ತೆರಿಗೆ ಪಾವತಿಸಿ ಪುರಸಭೆಯೊಂದಿಗೆ ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಸ್ವೀಪ್ ಮತದಾನ ಜಾಗೃತಿಗಾಗಿ ಬೈಕ್ ರ್‍ಯಾಲಿ

## ಬೈಕ್ ರ್‍ಯಾಲಿಯಲ್ಲಿ ಗಮನ ಸೆಳೆದ ಡಿಸಿ, ಸಿಇಒ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:

ಜನರಲ್ಲಿ ಮತದಾನದ ಜಾಗೃತಿ ಮೂಡಿಸುವನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಅಪರ ಜಿಲ್ಲಾಧಿಕಾರಿಗಳು ಹಾಗೂ ಜಿ.ಪಂ ಉಪ ಕಾರ್ಯದರ್ಶಿಗಳು ಬೈಕ್ ರ್‍ಯಾಲಿ ಮೂಲಕ ಸಂಚರಿಸಿ ಗಮನ ಸೆಳೆದರು.

ಜಿಲ್ಲಾ ಸ್ವೀಪ್ ಹಾಗೂ ಜಿಲ್ಲಾ ನೌಕರರ ಸಂಘದ ಸಹಯೋಗದಲ್ಲಿ ಸೋಮವಾರ ಜಿಲ್ಲಾಡಳಿತ ಭವನದ ಮುಖ್ಯ ದ್ವಾರದಲ್ಲಿ ಬೈಕ್ ರ್‍ಯಾಲಿ ಮೂಲಕ ಮತದಾರರ ಜಾಗೃತಿ ಅಭಿಯಾನಕ್ಕೆ ಜಿಲ್ಲಾಧಿಕಾರಿ ಸಂಗಪ್ಪ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಚಾಲನೆ ನೀಡಿದರು. ನಂತರ ಬೈಕ್‌ನಲ್ಲಿ ಸಂಚರಿಸಿ ಸಾರ್ವಜನಿಕರ ಗಮನ ಸೆಳೆದರು.

ಬೈಕ್ ರ್‍ಯಾಲಿ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನವನಗರದ ಬಸ್ ನಿಲ್ದಾಣ, ಎಲ್‌ಐಸಿ ವೃತ್ತ, ಭಾರತೀಯ ಸ್ಟೇಟ್ ಬ್ಯಾಂಕ್, ಜಿಲ್ಲಾ ಆಸ್ಪತ್ರೆ, ಕಾಳಿದಾಸ ಸರ್ಕಲ್, ವಿದ್ಯಾಗಿರಿ ಸರ್ಕಲ್, ವಿದ್ಯಾಗಿರಿ ಮೂರನೇ ಕ್ರಾಸ್, ಅಯೋಧ್ಯ ಹೋಟೆಲ್, ಮುಚಖಂಡಿ ಕ್ರಾಸ್, ಕೃಷ್ಣಾ ಟಾಕೀಜ್, ವಲ್ಲಭಾಯಿ ಚೌಕ್, ಬಸವೇಶ್ವರ ಸರ್ಕಲ್, ರೈಲ್ವೆ ಸ್ಟೇಷನ್, ರೋಟರಿ ಸರ್ಕಲ್ ಹಾಗೂ ಎಪಿಎಂಸಿ ಕ್ರಾಸ್ ಮಾರ್ಗವಾಗಿ ಜಿಲ್ಲಾಡಳಿತ ಭವನಕ್ಕೆ ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಯೋಜನಾ ನಿರ್ದೇಶಕ ಅಲ್ಲಮಪ್ರಭು, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಸಿದ್ರಾಮೇಶ್ವರ ಉಕ್ಕಲಿ, ಯೋಜನಾ ಸಹಾಯಕ ಭೀಮಪ್ಪ ತಳವಾರ, ಸಹಾಯಕ ನಿರ್ದೇಶಕ ಎಸ್.ಎಂ.ಕಾಂಬಳೆ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಸೇರಿದಂತೆ ನೌಕರರ ಸಂಘದ ಪದಾಧಿಕಾರಿಗಳಾದ ಎಂ.ಬಿ.ಬಳ್ಳಾರಿ, ಎಸ್.ವಿ.ಸತ್ಯರೆಡ್ಡಿ, ವಿಠಲ ವಾಲಿಕಾರ, ಗೋಪಾಲ ನೀಲನಾಯಕ, ಬಿ.ಸಿ.ಹೊಸಳ್ಳಿ ಹಾಗೂ ಇತರರು ಉಪಸ್ಥಿತರಿದ್ದರು.

ಬೈಕ್ ರ್‍ಯಾಲಿಯಲ್ಲಿ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳು, ವಿವಿಧ ಇಲಾಖೆಯ ನೌಕರರು ಹಾಗೂ ಸಿಬ್ಬಂದಿ ವರ್ಗದವರು ಸೇರಿದಂತೆ ಇತರರು ಪಾಲ್ಗೊಂಡು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದರು. ರ್‍ಯಾಲಿಯಲ್ಲಿ ಮತದಾನ ಜಾಗೃತಿಯ ಘೋಷಣಾ ಫಲಕಗಳನ್ನು ಪ್ರದರ್ಶಿಸುವ ಮೂಲಕ ಕೂಗಲಾಯಿತು. ನಿಮ್ಮ ಹಕ್ಕು, ನಿಮ್ಮ ಧ್ವನಿ ನಿಮ್ಮ ಕರ್ತವ್ಯ, ಆಶೆ ಆಮೀಷಗಳಿಗೆ ಒಳಗಾಗದೇ ಮತ ಚಲಾಯಿತಿ, ನಿಮ್ಮ ಮತ ನಿಮ್ಮ ಭವಿಷ್ಯ, ಓಟ್ ಮಾಡಿದವನೇ ಹೀರೋ, ನಿಮ್ಮ ನಡೆ ಮತಗಟ್ಟೆ ಕಡೆ ಘೋಷಣೆಗಳನ್ನು ಕೂಗಿದರು. ರ್‍ಯಾಲಿ ಪೂರ್ವದಲ್ಲಿ ಜಿಲ್ಲಾಡಳಿತ ಭವನದ ಆಚರಣದಲ್ಲಿ ಪ್ರತಿಜ್ಞಾವಿಧಿ ಬೋಧಿಸಲಾಯಿತು.

## ಆಲಿಕಲ್ಲು ಮಳೆಯಿಂದ ರೈತರ ಬೆಳೆಗಳು ಹಾನಿ



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಹಾಗೂ ಹುಲಸೂರ ತಾಲೂಕಗಳಲ್ಲಿ ಇತ್ತೀಚೆಗೆ ಸುರಿದ ಮಳೆಯಿಂದಾಗಿ ಅಲಿಕಲ್ಲು ಮಳೆ ಬಿದ್ದಿದರಿಂದ ರೈತರ ಹಿಂಗಾರು ಬೆಳೆಗಳಾದ ಗೋಧಿ, ಬಿಳಿಜೋಳ ಮತ್ತು ಇತರೇ ಬೆಳೆಗಳು ಹಾನಿಗಿಡಾಗಿವೆ. ಇವುಗಳಲ್ಲದೆ ತೋಟಗಾರಿಕೆ ಬೆಳೆಗಳು ಮತ್ತು ತರಕಾರಿಗಳು ಸಂಪೂರ್ಣವಾಗಿ ಹಾಳಾಗಿದ್ದು ಸರಿಯಾದ ರೀತಿಯಲ್ಲಿ ಸಮೀಕ್ಷೆ ಕೈಗಂಡು ರೈತರಿಗೆ ಸರಕಾರದಿಂದ ಪರಿಹಾರ ಕೊಡಿಸುವಂತೆ ಇಲ್ಲಿನ ತಹಸೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಭಾರತ ಕಿಸಾನ್ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ ಶಿವರುದ್ರಪ್ಪ ತಾಟೆ, ತಾಲೂಕಾ ಅಧ್ಯಕ್ಷರಾದ ಶರಣಪ್ಪ ಧನ್ನಾ ಹಾಗೂ ನಾಗನಾಥ ಪೂಜಾರಿ. ಜೈಯ ಕುಮಾರ್ ಬಿರಾದಾರ. ಅನೀಲಕುಮಾರ ತಾಂಬೋಳೆ. ಬಸವರಾಜ ಕಣಜೆ. ದೇವಿಂದ್ರಪ್ಪ ಹಲಂಗೆ. ವೀರಶೆಟ್ಟಿ ಮೂಲಗೆ. ಗುರುಲಿಂಗಪ್ಪ ಅಪಗುಂಡೆ. ಚಂದ್ರಪ್ಪಾ ಹಾಗೂ 2. ತಾಲೂಕಾ ರೈತರು ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

## ರಸಗೊಬ್ಬರ ಖರೀದಿಸಲು ಎಫ್‌ಐಡಿ ಕಡ್ಡಾಯ

• ಮಲ್ಲಮ್ಮ ನುಡಿವಾರ್ತೆ, ಬೀದರ

ರಾಜ್ಯದಲ್ಲಿ ರಸಗೊಬ್ಬರ ಮಾಫಿಯಾಕ್ಕೆ ಕಟಿವಾಣ ಹಾಕಲು ರಸಗೊಬ್ಬರ ಖರೀದಿಗೆ ಇನ್ಮುಂದೆ ರೈತರು ಕಡ್ಡಾಯವಾಗಿ ಎಫ್‌ಐಡಿ ಹೊಂದಿರಬೇಕೆಂದು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಮ್ಮ ಭೂಮಿಯನ್ನು ಸಹ ಎಫ್‌ಐಡಿಗೆ ಜೋಡಿಸಿರಬೇಕು. ಇದರ ಆಧಾರದಲ್ಲಿಯೇ ರಸಗೊಬ್ಬರವನ್ನು ಕೆ.ಕಿಸಾನ್ ತಂತ್ರಾಂಶದ ಮೂಲಕ ವಿತರಣೆ ಮಾಡಲಾಗುತ್ತದೆ. ಇದರಿಂದ ರಸಗೊಬ್ಬರ ವಿತರಣೆಯ ಮೇಲೆ ವಿಶೇಷ ನಿಗಾ ಇರಿಸಲು ನಿರ್ಧರಿಸಲಾಗಿದೆ. ಈ ಕುರಿತು ರಾಜ್ಯ ಸರ್ಕಾರದ ಕೃಷಿ ಇಲಾಖೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ರೈತರು ರಸಗೊಬ್ಬರ ಖರೀದಿ ಮಾಡಬೇಕು ಎಂದಾದರೆ ಮೊದಲು ಎಫ್ ಐಡಿ ಹೊಂದುವುದು ಕಡ್ಡಾಯ. ಅದಾದ ನಂತರ ಎಫ್ ಐಡಿಗೆ ರೈತರು ತಮ್ಮ ಭೂಮಿಯನ್ನೆಲ್ಲ ಕಡ್ಡಾಯವಾಗಿ ಜೋಡಿಸಬೇಕು. ಇದರ ಆಧಾರದ ಮೇಲೆ ಹಾಕಿದ ಬೆಳೆಗೆ ರಸಗೊಬ್ಬರವನ್ನು ರೈತರಿಗೆ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ವಿತರಣೆ ಮಾಡಲಾಗುವುದು.

ರೈತರ ಪಾಲಿನ ಸಬ್ಸಿಡಿ ದರದ ಗೊಬ್ಬರವು ರೈತರ ಹೆಸರಿನಲ್ಲಿ ಖರೀದಿಸಿ ಕಾಳಸಂತೆಯಲ್ಲಿ ಮಾರಾಟ, ಕೈಗಾರಿಕ ವಲಯದಲ್ಲಿ ಉಪಯೋಜಿಸುವುದು ಹಾಗೂ ಅಂತರ ಜಿಲ್ಲೆ/ರಾಜ್ಯಗ್ಗೆ ಮಾಡುತ್ತಿರುವುದಕ್ಕೆ ಬ್ರೇಕ್ ಹಾಕುವುದು ಮತ್ತು

ರೈತರುಸಹಮಿತವ್ಯಯವಾಗಿ ರಸಗೊಬ್ಬರ ಬಳಕೆ ಮಾಡುವಂತಾಗಬೇಕು ಎನ್ನುವ ಕಾರಣಕ್ಕಾಗಿ ಕೆ-ಕಿಸಾನ್ ತಂತ್ರಾಂಶದ ಮೂಲಕ ರಸಗೊಬ್ಬರ ವಿತರಣೆ ಮಾಡಲಾಗುತ್ತದೆ. ಸಧ್ಯ ಆಧಾರ್ ಸಂಖ್ಯೆ ಪಡೆದು ಸಬ್ಸಿಡಿದರದಲ್ಲಿ ರಸಗೊಬ್ಬರ ಮಾರಾಟ ಮಾಡಲಾಗುತ್ತಿದೆ. ಈಗಾಗಲೆ ರೈತರಿಗೆ ಸರಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ಎಫ್ ಐಡಿ ಕಡ್ಡಾಯವಾಗಿದ್ದು ರೈತರು ಎಫ್‌ಐಡಿಸಂಖ್ಯೆ ಹೊಂದಿರುತ್ತಾರೆ.

ಎಫ್‌ಐಡಿ ಹೊಂದಿರದೆ ಇದ್ದಲ್ಲಿ ಹೊಸದಾಗಿ ಎಫ್‌ಐಡಿ ಸೃಜಿಸಿಕೊಳ್ಳಬೇಕು (ಸೃಜಿಸಿಕೊಳ್ಳಲು ಅಗತ್ಯ ದಾಖಲಾತಿಗಳೊಂದಿಗೆ ಕೇಂದ್ರ ಸಂಪರ್ಕಿಸಬೇಕು)

ಮಾರಾಟಗಾರರು ಕಡ್ಡಾಯವಾಗಿ ರಸಗೊಬ್ಬರವನ್ನು ಕೆ-ಕಿಸಾನ್ ತಂತ್ರಾಂಶದ ಮೂಲಕ ರೈತರ ಎಫ್‌ಐಡಿ ನಮೂದಿಸಿ ಮಾರಾಟ ಮಾಡಬೇಕು

ಹಾಗೂತಮ್ಮಎಲ್ಲಓಫಾರಂನವೀಕರಣಗೊಳಿಸಿಕೊಳ್ಳಬೇಕು. ಒಂದು ವೇಳೆ ಮಾರಾಟಗಾರರು ಓ ಫಾರಂಗಳ ನೋಂದಣಿ ಇಲ್ಲದೇ ಮಾರಾಟ ಮಾಡಿದಲ್ಲಿ ಹಾಗೂ ಗರಿಷ್ಠ ಮಾರಾಟ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು ಕಂಡುಬಂದಲ್ಲಿ ಪರವಾನಗಿ ಅಮಾನತು ಅಥವಾ ರದ್ದು ಮಾಡುವ ಎಚ್ಚರಿಕೆ ನೀಡಿದ್ದಾರೆ.

ಜಿಲ್ಲೆಗೆ ಮುಂಗಾರು ಹಂಗಾಮಿಗೆ ಬೇಡಿಕೆ ಅನುಗುಣವಾಗಿ ರಸಗೊಬ್ಬರ ದಾಸ್ತಾನಿಕರಿಸಲು ಅಗತ್ಯ ಕ್ರಮವಹಿಸಲಾಗಿದೆ , ಕೃಷಿ ಇಲಾಖೆಯಿಂದ ಜಿಲ್ಲೆಗೆ ಪೂರೈಕೆ ಆಗುವ ರಸಗೊಬ್ಬರ ಕಾಳಸಂತೆಯಲ್ಲಿ, ಹೊರ ರಾಜ್ಯಕ್ಕೆ ಹೋಂಗದಂತೆ ದೂರುಪಯೋಗ ತಡೆಗಡ ಜಿಲ್ಲಾ ಸಮಿತಿಯ ರಚಿಸಿ ತೀವ್ರ ಕಣ್ಗಾವಲು ವಹಿಸಲಾಗಿದೆ ಕಾಳಸಂತೆಯಲ್ಲಿ ಮಾಡುವರ ವಿರುದ್ಧ ಕಠಿಣ ಕಾನುನು ಕ್ರಮ ತೆಗೆದು ಕೋಳ್ಳಗಾಗುವುದೆಂದು ಅವರು ತಿಳಿಸಿದ್ದಾರೆ.

## ಜನಕಲ್ಯಾಣದ ಯೋಜನೆಗಳ ಮೂಲಕ ಬಿಜೆಪಿ ಜನಮನ ಗೆದ್ದಿದೆ: ನಾಡಗೌಡ



• ಮಲ್ಲಮ್ಮ ನುಡಿವಾರ್ತೆ ಕುಕನೂರ

ಸಂಜಯನಗರ ಭಾರತೀಯ ಜನತಾ ಪಕ್ಷದ ಸಂಸ್ಥಾಪನಾ ದಿನವನ್ನು ವಿಶೇಷವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಂಜಯನಗರದ ಬೂತ್ ಅಧ್ಯಕ್ಷರಾದ ವೀರೇಶ ಸಬರದ ಅವರ ನಿವಾಸದಲ್ಲಿ ಧ್ವಜಾರೋಹಣ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಮುಖಂಡ ಮಂಜುನಾಥ ನಾಡಗೌಡರವರು, ಬಿಜೆಪಿ ಪಕ್ಷದ ಸ್ಥಾಪನೆಯಿಂದ ಇಂದಿನವರೆಗಿನ ಅದರ ಹಾದಿ, ತತ್ವಗಳು ಮತ್ತು ದೇಶಸೇವೆಯಲ್ಲಿ ಅದರ ಪಾತ್ರವನ್ನು ವಿವರಿಸಿದರು. 1980ರಲ್ಲಿ ಸ್ಥಾಪಿತವಾದ ಭಾರತೀಯ ಜನತಾ ಪಕ್ಷವು, ಭಾರತೀಯ ಜನಸಂಘದ ಪರಂಪರೆಯನ್ನು ಮುಂದುವರಿಸಿಕೊಂಡು ರಾಷ್ಟ್ರವಾದ, ಸಾಂಸ್ಕೃತಿಕ ಮೌಲ್ಯಗಳು ಮತ್ತು ಉತ್ತಮ ಆಡಳಿತದ ತತ್ವಗಳನ್ನು ಆಧಾರವಾಗಿಟ್ಟುಕೊಂಡು ಬೆಳೆಯಿತು. ಅಟಲ್ ಬಿಹಾರಿ ವಾಜಪೇಯಿ ಮತ್ತು ಎಲ್. ಕೆ. ಅಡ್ವಾಣಿ ಅವರಂತಹ ಮಹಾನ್ ನಾಯಕರ ನೇತೃತ್ವದಲ್ಲಿ ಪಕ್ಷವು ದೇಶದ ರಾಜಕೀಯದಲ್ಲಿ ಬಲವಾದ ಶಕ್ತಿಯಾಗಿ ಹೊರಹೊಮ್ಮಿತು.

ಮುಂದಿನ ವರ್ಷಗಳಲ್ಲಿ ಬಿಜೆಪಿ ಕೇಂದ್ರ ಮತ್ತು ಹಲವು ರಾಜ್ಯಗಳಲ್ಲಿ ಆಡಳಿತ ನಡೆಸಿ, ಅಭಿವೃದ್ಧಿ, ಮೂಲಸೌಕರ್ಯ ಮತ್ತು ಜನಕಲ್ಯಾಣದ ಯೋಜನೆಗಳ ಮೂಲಕ ಜನಮನ ಗೆದ್ದಿದೆ. ಇಂದಿನ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಪಕ್ಷವು ವಿಶ್ವ ಮಟ್ಟದಲ್ಲಿ ಭಾರತದ ಸ್ಥಾನವನ್ನು ಮತ್ತಷ್ಟು ಬಲಪಡಿಸುತ್ತಿದೆ ಎಂದು ಅವರು ಹೇಳಿದರು.

ಈ ಕಾರ್ಯಕ್ರಮದಲ್ಲಿ ಅಂದಪ್ಪ ಜವಳಿ, ಬಸವರಾಜ ಹಾಲಕೇರಿ, ಕರಬಸಯ್ಯ ಬಿನ್ನಾಳ, ರಾಮನಗೌಡ ಅರಿಶಿನಬಿಡಿ, ಪ್ರಕಾಶ ಬೋರಣ್ಣವ ಸೇರಿದಂತೆ ವಾರ್ಡ್‌ನ ಪ್ರಮುಖ ಕಾರ್ಯಕರ್ತರು ಉಪಸ್ಥಿತರಿದ್ದು, ಪಕ್ಷದ ಕಾರ್ಯಚಟುವಟಿಕೆಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚಿಸಿದರು.

ಕಾರ್ಯಕ್ರಮವು ಬಿಜೆಪಿ ಕಾರ್ಯಕರ್ತರಲ್ಲಿ ಹೊಸ ಉತ್ಸಾಹವನ್ನು ತುಂಬಿದಂತಾಯಿತು.

## ಮಾರುತಿ ಭೀಮಣ್ಣಗೆ ಲೆಫ್ಟಿನೆಂಟ್ ಹುದ್ದೆ: ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಬೀದರದ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಎನ್‌ಸಿಸಿ ಅಧಿಕಾರಿ ಮಾರುತಿ ಭೀಮಣ್ಣ ಅವರು 90 ದಿನಗಳ ಕಠಿಣ ಎನ್‌ಸಿಸಿ ಅಧಿಕಾರಿಗಳ ತರಬೇತಿಯನ್ನು ನಾಗ್ಪುರದ ಎನ್‌ಸಿಸಿ ಆಫೀಸರ್ಸ್ ಟ್ರೈನಿಂಗ್ ಅಕಾಡೆಮಿ ಕಾಂಪ್ಟಿಯಲ್ಲಿ ಯಶಸ್ವಿಯಾಗಿ ಪೂರ್ಣಗೊಳಿಸಿ ಲೆಫ್ಟಿನೆಂಟ್ ಹುದ್ದೆ ಪಡೆದಿದ್ದಾರೆ. ಈ ಹಿನ್ನೆಲೆ ಅವರ ಪೀಪಿಂಗ್ ಸಮಾರಂಭ ಹಾಗೂ ಸನ್ಮಾನ ಕಾರ್ಯಕ್ರಮವನ್ನು ಮಹಾವಿದ್ಯಾಲಯದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಎಚ್.ಕೆ.ಇ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು ಹಾಗೂ ಬಿ.ವಿ.ಬಿ ಮಹಾವಿದ್ಯಾಲಯ ಅವರಣದ ಶಾಲಾ□ಕಾಲೇಜುಗಳ ಸಂಚಾಲಕರಾದ ಡಾ.ರಜನೀಶ್ ವಾಲಿ ಅವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ.ರಜನೀಶ್ ವಾಲಿ ಅವರು, ಎನ್‌ಸಿಸಿ ತರಬೇತಿ ಶಿಬಿರದಲ್ಲಿ ಶಿಸ್ತು, ನಾಯಕತ್ವ, ದೈಹಿಕ ಸಾಮರ್ಥ್ಯ ಮತ್ತು ದೇಶಭಕ್ತಿಯ ಮೌಲ್ಯಗಳನ್ನು ಅಳವಡಿಸಿಕೊಂಡ ಮಾರುತಿ ಭೀಮಣ್ಣ ಅವರು ತಮ್ಮ ಪರಿಶ್ರಮದಿಂದ ಈ ಹುದ್ದೆಯನ್ನು ಸಾಧಿಸಿದ್ದಾರೆ ಎಂದು ಶ್ಲಾಘಿಸಿದರು. ತರಬೇತಿ ಅವಧಿಯಲ್ಲಿ ಅವರು ಸೈನಿಕ ಕೌಶಲ್ಯಗಳು ಹಾಗೂ ಆಡಳಿತಾತ್ಮಕ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿ ಉತ್ತಮ ಸಾಧನೆ ತೋರಿದ್ದಾರೆ ಎಂದು ಹೇಳಿದರು. ಯುವಕರು ಎನ್‌ಸಿಸಿ ಮೂಲಕ ಶಿಸ್ತು ಮತ್ತು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ದೀಪಾ ರಾಗಾ, ನಿವೃತ್ತ ಪ್ರಾಧ್ಯಾಪಕರಾದ ಸಿದ್ರಾಮಪ್ಪ ಮಾಸಿಮಡೆ, ಡಾ. ಮಲ್ಲಿಕಾರ್ಜುನ ಕೋಟೆ, ಡಾ. ಸಾಮ್ರಾಟ ಪಾಯದ ಸೇರಿದಂತೆ ಬೋಧಕ□ಬೋಧಕೇತರ ಸಿಬ್ಬಂದಿ ಹಾಗೂ ಎನ್‌ಸಿಸಿ ಕ್ಯಾಡೆಟ್‌ಗಳು ಉಪಸ್ಥಿತರಿದ್ದು, ಲೆಫ್ಟಿನೆಂಟ್ ಮಾರುತಿಯವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

## ಏ,10ಕ್ಕೆ ಕೆಪಿಎಸ್ ಮ್ಯಾಗ್ನೆಟ್ ಯೋಜನೆ ವಿರುದ್ಧ ರಾಜ್ಯಮಟ್ಟದ ಬೃಹತ್ ಜನಸಮಾವೇಶ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹೆಸರಿನಲ್ಲಿ ರಾಜ್ಯದಲ್ಲಿ ಸಾವಿರಾರು ಸರ್ಕಾರಿ ಶಾಲೆಗಳನ್ನು ಮುಚ್ಚಲು ರಾಜ್ಯ ಸರ್ಕಾರ ಮುಂದಾಗಿರುವುದನ್ನು ಖಂಡಿಸಿ ಏಪ್ರಿಲ್ 10ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ರಾಜ್ಯಮಟ್ಟದ ಬೃಹತ್ "ನಮ್ಮೂರ ಶಾಲೆ ಉಳಿಸಿ" ಜನಸಮಾವೇಶವನ್ನು ಆಯೋಜಿಸಲಾಗಿದೆ ಎಂದು ಎಐಡಿಎಸ್‌ಓ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿ ತಿಳಿಸಿವೆ.

ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಎಐಡಿಎಸ್‌ಓ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಜಿಲ್ಲಾ ಕಾರ್ಯದರ್ಶಿ ಕಂಬಳಿ ಮಂಜುನಾಥ್ ಅವರು, ಕೆಪಿಎಸ್ ಮ್ಯಾಗ್ನೆಟ್ ಯೋಜನೆಯ ಮೂಲಕ ರಾಜ್ಯದ ಸುಮಾರು 40 ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚುವ ಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.





ಕಳೆದ ನಾಲ್ಕು ತಿಂಗಳಿನಿಂದ ಈ ಯೋಜನೆ ವಿರುದ್ಧ ರಾಜ್ಯಾದ್ಯಂತ ಜನಹೋರಾಟ ನಡೆಯುತ್ತಿದ್ದು, ಎಐಡಿಎಸ್‌ಓ ನೇತೃತ್ವದಲ್ಲಿ ಹಳ್ಳಿ-ಹಳ್ಳಿಗಳಲ್ಲಿ ಪೋಷಕರು ಹಾಗೂ ಗ್ರಾಮಸ್ಥರು

ಸಾರ್ವಜನಿಕ ಶಿಕ್ಷಣ ಉಳಿಸಿ ಹೋರಾಟ ಸಮಿತಿಗಳನ್ನು ರಚಿಸಿಕೊಂಡು 'ನಮ್ಮೂರ ಶಾಲೆ ಮುಚ್ಚಲು ಬಿಡುವುದಿಲ್ಲ' ಎಂಬ ಘೋಷಣೆಗಳೊಂದಿಗೆ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಹೇಳಿದರು. ಬಳ್ಳಾರಿ ಜಿಲ್ಲೆಯಲ್ಲಿ

ಮಾತ್ರವೇ ಸುಮಾರು 600ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳು ಮುಚ್ಚುವ ಅಪಾಯದಲ್ಲಿವೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಸರ್ಕಾರವು ಜನರ ತೀವ್ರ ವಿರೋಧದ ನಡುವೆಯೂ ಶಾಲೆಗಳ ವಿಲೀನ ಪ್ರಕ್ರಿಯೆ ಮುಂದುವರೆಸಿದ್ದು, ಯಾವ ಶಾಲೆಗಳನ್ನು ವಿಲೀನಗೊಳಿಸಬೇಕೆಂಬ

ಮ್ಯಾಪಿಂಗ್ ಕಾರ್ಯ ಪೂರ್ಣಗೊಳಿಸಲಾಗಿದೆ ಎಂದು ಆರೋಪಿಸಿದರು. ಮ್ಯಾಗ್ನೆಟ್ ಶಾಲೆಗಳ ಸಮೀಕ್ಷೆ ನಡೆಸಲಾಗುತ್ತಿದ್ದು, ವಿಲೀನಗೊಳ್ಳುವ ಶಾಲೆಗಳ ಮುಖ್ಯ ಶಿಕ್ಷಕರಿಗೆ ಮೌಖಿಕ ಸೂಚನೆ ನೀಡಲಾಗಿದೆ ಎನ್ನಲಾಗಿದೆ. ಏಪ್ರಿಲ್ 9 ಹಾಗೂ 10ರಂದು ನಡೆಯಲಿರುವ ಪೋಷಕರ ಸಭೆಗಳಲ್ಲಿ ಮಕ್ಕಳನ್ನು ಕೆಪಿಎಸ್ ಶಾಲೆಗಳಿಗೆ ಕಳುಹಿಸುವಂತೆ ಒತ್ತಾಯಿಸಲು ನೋಟಿಸ್ ನೀಡಲಾಗಿದೆ ಎಂದು ತಿಳಿಸಿದರು.

ಈ ಯೋಜನೆಯನ್ನು ಜಾರಿಗೊಳಿಸಲು ಅಧಿಕಾರಿಗಳ ಸಭೆಗಳನ್ನು ನಡೆಸಿ ಶಾಲೆ ಮುಚ್ಚುವ ಪ್ರಯತ್ನ ನಡೆ-ಯುತ್ತಿದೆ ಎಂದು ಆರೋಪಿಸಿದ ಅವರು, ಸರ್ಕಾರದ ಜನವಿರೋಧಿ ನೀತಿಗೆ ವಿರುದ್ಧವಾಗಿ

ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದರು. ಅದರ ಭಾಗವಾಗಿ ಏಪ್ರಿಲ್ 10, 2026ರಂದು ಬೆಂಗಳೂರಿನ

ಫ್ರೀಡಂ ಪಾರ್ಕ್‌ನಲ್ಲಿ ರಾಜ್ಯಮಟ್ಟದ ಜನಸಮಾವೇಶ ಆಯೋಜಿಸಲಾಗಿದ್ದು, ರಾಜ್ಯದ ವಿವಿಧ ಜಿಲ್ಲೆಗಳಿಂದ ವಿದ್ಯಾರ್ಥಿಗಳು, ಪೋಷಕರು, ಮಹಿಳೆಯರು, ಯುವಕರು, ರೈತರು ಹಾಗೂ ಕಾರ್ಮಿಕರು ಸಹಸ್ರ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಬಳ್ಳಾರಿ ಜಿಲ್ಲೆಯಿಂದಲೂ ಹಳ್ಳಿ-ಹಳ್ಳಿಗಳಿಂದ ಪೋಷಕರು ಮತ್ತು ವಿದ್ಯಾರ್ಥಿಗಳು 'ನಮ್ಮೂರ ಶಾಲೆ ಉಳಿಯಲಿ' ಎಂಬ ಘೋಷಣೆಗಳೊಂದಿಗೆ ನೂರಾರು ಸಂಖ್ಯೆಯಲ್ಲಿ ಬೆಂಗಳೂರಿಗೆ ತೆರಳಲು ಸಿದ್ಧತೆ ನಡೆಸಿದ್ದಾರೆ ಎಂದು ತಿಳಿಸಿದರು.

ರಾಜ್ಯದ ಹಿರಿಯ ಸಾಹಿತಿಗಳು, ಶಿಕ್ಷಣ ತಜ್ಞರು, ರೈತ ಹಾಗೂ ಕಾರ್ಮಿಕ ಸಂಘಟನೆಗಳ ನಾಯಕರು ಸೇರಿದಂತೆ ಹಲವರು ಸಮಾವೇಶದಲ್ಲಿ ಭಾಗವಹಿಸಲಿದ್ದು,

ಸಾರ್ವಜನಿಕ ಶಿಕ್ಷಣ ಉಳಿಸುವ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಲಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಲ್ಲಿಕಾರ್ಜುನ, ಮಾನಯ್ಯ, ಶಾಂತ, ಸೋಮಶೇಖರ್, ಗೌಡ, ಸೌಮ್ಯ ಹಾಗೂ ಶಾಂತಿ ಉಪಸ್ಥಿತರಿದ್ದರು.

# ಭವಿಷ್ಯಮುಖಿ ಅಸ್ಥಿಶಸ್ತ್ರ ಚಿಕಿತ್ಸೆಯನ್ನು ಬೆಳಗಿಸಿದ ಪ್ರಮುಖ ತಜ್ಞರ ಸಮ್ಮೇಳನ

**ಬೆಂಗಳೂರು:** ಬೆಂಗಳೂರು ಅಸ್ಥಿಶಸ್ತ್ರ ಚಿಕಿತ್ಸಾ ಸಮಾಜದ 29ನೇ ವಾರ್ಷಿಕ ಸಮ್ಮೇಳನವಾದ BOSCON 2026 ಯಶಸ್ವಿಯಾಗಿ ಬೆಂಗಳೂರಿನಲ್ಲಿ ನೆರವೇರಿತು. ಈ ಸಮ್ಮೇಳನವು ದೇಶದ ಪ್ರಮುಖ ಅಸ್ಥಿಶಸ್ತ್ರ ತಜ್ಞರು, ಶಸ್ತ್ರಚಿಕಿತ್ಸಕರು ಹಾಗೂ ಯುವ ವೈದ್ಯರನ್ನು ಒಟ್ಟುಗೂಡಿಸಿ, ಎರಡು ದಿನಗಳ ಗಂಭೀರ ಶೈಕ್ಷಣಿಕ ಚರ್ಚೆಗಳು ಮತ್ತು ಕ್ಲಿನಿಕಲ್ ವಿನಿಮಯಕ್ಕೆ ವೇದಿಕೆಯಾಯಿತು.

ಬೆಂಗಳೂರು ಅಸ್ಥಿಶಸ್ತ್ರ ಚಿಕಿತ್ಸಾ ಸಮಾಜದ ಆಶ್ರಯದಲ್ಲಿ, ಅಸ್ಥಿ ಹಾಗೂ ಟ್ರಾಮಾ ಕೇರ್‌ನಲ್ಲಿ ಪ್ರಸಿದ್ಧವಾಗಿರುವ ಮತ್ತು ಈಗ ಮಲ್ಟಿ-ಸ್ಪೆಷಾಲಿಟಿ ಸೇವೆಗಳತ್ತ ವಿಸ್ತರಿಸುತ್ತಿರುವ ಈ ಸಮ್ಮೇಳನವನ್ನು ಏರ್ಪಡಿಸಲಾಯಿತು. ಏಪ್ರಿಲ್ 4 ಮತ್ತು 5, 2026 ರಂದು ಕೊರಮಂಗಲ ಕ್ಲಬ್ ನಲ್ಲಿ ಈ ಕಾರ್ಯಕ್ರಮ ನಡೆಯಿತು. ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಡಾ. ಶಾಂತರಾಮ ಶೆಟ್ಟಿ, ಪ್ರೊ ಚಾನ್ಸಲರ್-ನಿಟ್ಟೆ ವಿಶ್ವವಿದ್ಯಾಲಯ, ಮಾಜಿ IOA ಅಧ್ಯಕ್ಷರು ಭಾಗವಹಿಸಿ ಸಮ್ಮೇಳನಕ್ಕೆ ಗೌರವಾನ್ವಿತ ಆರಂಭ ನೀಡಿದರು.

# ಇಂದು ವಿಶ್ವ ಆರೋಗ್ಯದ ದಿನ

**ಬೆಂಗಳೂರು:** ಅರೋಗ್ಯವೇ ಸಂಪತ್ತು, ಆರೋಗ್ಯವೇ ಸರ್ವಸ್ವ, ಆರೋಗ್ಯವೇ ಭಾಗ್ಯ. ಹೀಗೆ ಆರೋಗ್ಯದ ಮಹಿಮೆ ಅಪಾರವಾಗಿದೆ.



'ಸಂಪೂರ್ಣ ಆರೋಗ್ಯ ಎಂದರೆ ಶಾರೀರಿಕ, ಮಾನಸಿಕ, ಸಾಮಾಜಿಕ ಆರೋಗ್ಯವಾಗಿದೆ. ಕೇವಲ ರೋಗಗಳಿಲ್ಲದಿರುವಿಕೆ ಪರಿಪೂರ್ಣ ಆರೋಗ್ಯವಲ್ಲ ಎಂದು ವ್ಯಾಖ್ಯಾನಿಸಿದೆ. ಈ ವರ್ಷ 2026 ರ ವಿಶ್ವ ಆರೋಗ್ಯ ದಿನದ ಧ್ಯೆಯ 'ಆರೋಗ್ಯಕ್ಕಾಗಿ ಒಟ್ಟಾಗಿ, ವಿಜ್ಞಾನದೊಂದಿಗೆ ನಿಲ್ಲಿರಿ.' ಈ ವಿಷಯದ ಅಡಿಯಲ್ಲಿ ವರ್ಷದ ಆಚರಣೆಯು ಜನರು ಪ್ರಾಣಿಗಳು ಸಸ್ಯಗಳು ಮತ್ತು ಗ್ರಹದ ಆರೋಗ್ಯವನ್ನು ರಕ್ಷಿಸಲು ವೈಜ್ಞಾನಿಕ ಸಹಯೋಗ ಶಕ್ತಿಯನ್ನು ಆಚರಿಸುವ ಒಂದು ವರ್ಷವಿಡಿ ಅಭಿಯಾನವನ್ನು ಪ್ರಾರಂಭಿಸುತ್ತದೆ. ಇದರಲ್ಲಿ ವೈಜ್ಞಾನಿಕ ಸಾಧನೆಗಳು ಮತ್ತು ಒಂದು ಆರೋಗ್ಯ ವಿಧಾನದ ಮೇಲೆ ಬಲವಾದ ಗಮನದ ಮೂಲಕ ಪುರಾವೆಗಳನ್ನು ಕಾರ್ಯರೂಪಕ್ಕೆ ತರಲು ಅಗತ್ಯವಿರುವ ಬಹುಪಕ್ಷಿಯ ಸಹಕಾರ ಎರಡನ್ನು ಎತ್ತಿ ತೋರಿಸುತ್ತದೆ.

2026 ರ ಅಭಿಯಾನವನ್ನು ಎರಡು ಪ್ರಮುಖ ಜಾಗತಿಕ ಕ್ಷಣಗಳು ಬೆಂಬಲಿಸುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆ ಮತ್ತು ಫ್ರಾನ್ಸ ಸರ್ಕಾರವು ಫ್ರೆಂಚ್ ಜಿ 7 ಅಧ್ಯಕ್ಷತೆಯಲ್ಲಿ ಆಯೋಜಿಸಿರುವ ಅಂತರರಾಷ್ಟ್ರೀಯ ಒಂದು ಆರೋಗ್ಯ ಶೃಂಗಸಭೆ (ಏಪ್ರಿಲ್7) ಮತ್ತು 80 ಕ್ಕೂ ಹೆಚ್ಚ ದೇಶಗಳಿಂದ ಸುಮಾರು 800 ವೈಜ್ಞಾನಿಕ ಸಂಸ್ಥೆಳನ್ನು ಒಟ್ಟಿಗೂಡಿಸುವ ವಿಶ್ವ ಆರೋಗ್ಯ ಸಂಸ್ಥೆ ಸಹಯೋಗ ಕೇಂದ್ರ್ರಗಳ ಉದ್ಘಾಟನಾ ಜಾಗತಿಕ ವೇದಿಕೆ (ಏಪ್ರಿಲ್7-9). ಒಟ್ಟಾಗಿ ಈ ಕಾರ್ಯಕ್ರಮಗಳು ವಿಶ್ವಸಂಸ್ಥೆಯ ಸುತ್ತಲು ನಡೆದ ಅತಿದೊಡ್ಡ ವೈಜ್ಞಾನಿಕ ಜಾಲವನ್ನು ರೂಪಿಸುತ್ತವೆ. ಇದು ವಿಜ್ಞಾನ ಚಾಲಿತ ಪಾಲುದಾರಿಕೆಗಳು ಎಲ್ಲರಿಗೂ ಆರೋಗ್ಯಕರ ಸುರಕ್ಷಿತ ಭವಿಷ್ಯವನ್ನು ಹೇಗೆ ನಿರ್ಮಿಸಬಹುದು ಎಂಬುದನ್ನು ಒತ್ತಿ ಹೇಳುತ್ತದೆ. ವಿಶ್ವ ಆರೋಗ್ಯ ದಿನವನ್ನು ಪ್ರತಿ ವರ್ಷ ಏಪ್ರಿಲ್ 7 ರಂದು ಆಚರಿಸಲಾಗುತ್ತದೆ. ವಿಶ್ವ ಆರೋಗ್ಯ ಸಂಸ್ಥೆ ಮತ್ತು ಇತರೆ ಸಂಬಂಧಿಸಿದ ಸಂಸ್ಥೆಗಳ ಪ್ರಾಯೋಜಕತ್ವದಲ್ಲಿ ಈ ದಿನವನ್ನು ಜಾಗತಿಕ ಆರೋಗ್ಯ ಜಾಗೃತಿ ದಿನವನ್ನಾಗಿ ಆಚರಿಸಲಾಗುತ್ತದೆ. 1948 ರಲ್ಲಿ ಮೊದಲ ವಿಶ್ವ ಆರೋಗ್ಯ ಸಂಸ್ಥೆಯು ವಿಶ್ವ ಆರೋಗ್ಯ ಸಭೆಯನ್ನು ನಡೆಸಿತು. ಜುಲೈ 22, 1949 ರಂದು ಮೊದಲ ವಿಶ್ವ ಆರೋಗ್ಯ ದಿನವನ್ನು ಆಚರಿಸಲಾಯಿತು. ಯುವಕರು ಮತ್ತು ವಿದ್ಯಾರ್ಥಿಗಳ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಉದ್ದೇಶದಿಂದ ದಿನಾಂಕವನ್ನು 7 ನೇ ಏಪ್ರಿಲ್ಗೆ ಬದಲಾಯಿಸಲಾಯಿತು. 1950 ರಿಂದ ಜಾರಿಗೆ ಬರುವಂತೆ ಪ್ರತಿ ವರ್ಷ ಏಪ್ರಿಲ್ 7 ರಂದು ವಿಶ್ವ ಆರೋಗ್ಯ ದಿನವನ್ನಾಗಿ ಆಚರಿಸಲು ಸಭೆಯು ನಿರ್ಧರಿಸಿತು. ವಿಶ್ವ ಆರೋಗ್ಯ ಸಂಸ್ಥೆ ಸ್ಥಾಪನೆಯನ್ನು ಗುರುತಿಸಲು ಮತ್ತು ಪ್ರತಿ ವರ್ಷ ಜಾಗತಿಕ ಆರೋಗ್ಯಕ್ಕೆ ಪ್ರಾಮುಖ್ಯತೆಯನ್ನು ನೀಡಲು ಹಾಗೂ ವಿಶ್ವಾದ್ಯಂತ ಗಮನ ಸೆಳೆಯಲು ಈ ದಿನವನ್ನು ಸಂಸ್ಥೆಯು ಒಂದು ಅವಕಾಶವನ್ನಾಗಿ ಪರಿಗಣಿಸುತ್ತದೆ. ಒಂದು ನಿರ್ದಿಷ್ಟ ವಿಷಯಕ್ಕೆ ಸಂಬಂಧಿಸಿದ ಅಂತರಾಷ್ಟ್ರೀಯ, ಪ್ರಾದೇಶಿಕ ಮತ್ತು ಸ್ಥಳೀಯ ಕಾರ್ಯಕ್ರಮಗಳನ್ನು ಈ ದಿನವೇ ಆಯೋಜಿಸಲಾಗುತ್ತದೆ. ವಿಶ್ವ ಆರೋಗ್ಯ ದಿನವನ್ನು ವಿವಿಧ ಸರ್ಕಾರಗಳು ಮತ್ತು ಸಾರ್ವಜನಿಕ ಆರೋಗ್ಯ ಕಾರ್ಯಕ್ರಮಗಳಲ್ಲಿ ಆಸಕ್ತಿ ಹೊಂದಿರುವ ಸರ್ಕಾರೇತರ ಸಂಸ್ಥೆಗಳು ಆಚರಿಸುತ್ತವೆ. ಆಯೋಜಿಸಿದ ಕಾರ್ಯಕ್ರಮಗಳ ವರದಿಯನ್ನು ಗ್ಲೋಬಲ್ ಹೆಲ್ತ್ ಕೌನ್ಸಿಲ್ ಪ್ರಸಾರ ಮಾಡುತ್ತದೆ.

# ಬಸವತತ್ವ ಪ್ರಸಾರ, ಪ್ರಚಾರ ಇಂದಿನ ಅಗತ್ಯ:ಈಶ್ವರ ಖಂಡ್ರೆ



**ದೇವನಹಳ್ಳಿ:** ಸಮಸಮಾಜದ ನಿರ್ಮಾಣಕ್ಕೆ ಕ್ರಾಂತಿಯನ್ನೇ ಮಾಡಿದ ಬಸವಣ್ಣನವರ ತತ್ವಾದರ್ಶಗಳು ಸಾರ್ವಕಾಲಿಕವಾಗಿದ್ದು, ಬಸವ ತತ್ವಗಳ ಪ್ರಚಾರ, ಪ್ರಸಾರ ಇಂದಿನ ಅಗತ್ಯವಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ದೇವನಹಳ್ಳಿಯಲ್ಲಿಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವಗುರು ಬಸವೇಶ್ವರರ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೆಣ್ಣಿಗಾಗಿ, ಹೊನ್ನಿಗಾಗಿ, ಮಣ್ಣಿಗಾಗಿ ಜಗತ್ತಿನಲ್ಲಿ ಕ್ರಾಂತಿ ಆಗಿದೆ. ಆದರೆ ಸರ್ವರ ಸಮಾನತೆಗಾಗಿ ಯಾವುದಾದರೂ ಕ್ರಾಂತಿ ನಡೆದಿದ್ದರೆ ಅದು ಕಲ್ಯಾಣದ ಕ್ರಾಂತಿ ಮಾತ್ರ ಎಂದು ಹೇಳಿದರು. 12ನೇ ಶತಮಾನದಲ್ಲಿ ಮನುಷ್ಯರನ್ನು ಮನುಷ್ಯರಂತೆ ಕಾಣುತ್ತಿರಲಿಲ್ಲ. ಮೌಢ್ಯತೆ ಇತ್ತು, ಅನಕ್ಷರತೆ ಇತ್ತು, ಹೆಣ್ಣಿಗೆ ಸಮಾನತೆ ಇರಲಿಲ್ಲ. ಅಂತಹ ಕಾಲಘಟ್ಟದಲ್ಲಿ ಸ್ವಾತಂತ್ರ್ಯ, ಸಮಾನತೆ, ಕಾಯಕ, ದಾಸೋಹ, ಸಹೋದರತ್ವ, ಸಹಬಾಳ್ವೆಯ ತಳಹದಿಯ ಮೇಲೆ ಬಲಿಷ್ಠ ಸುಂದರ ಸಮಾಜದ ನಿರ್ಮಾಣಕ್ಕೆ ವಿಶ್ವಗುರು ಬಸವಣ್ಣನವರ ನೇತೃತ್ವದಲ್ಲಿ ವೈಚಾರಿಕ ಮತ್ತು ವೈಜ್ಞಾನಿಕತೆಯ ತಳಹದಿಯ ಮೇಲೆ ಕ್ರಾಂತಿ ನಡೆಯಿತು. ಶ್ರೇಣಿರಹಿತ, ವರ್ಗರಹಿತ, ಲಿಂಗಭೇದ ರಹಿತ ಸಮ ಸಮಾಜ ನಿರ್ಮಾಣಕ್ಕೆ ಬಸವಣ್ಣನವರು ಶ್ರಮಿಸಿದರು ಎಂದರು.

ಇಡೀ ಜಗತ್ತಿಗೆ ಪ್ರಪ್ರಥಮವಾಗಿ ಸಾಮಾಜಿಕ ನ್ಯಾಯಕೊಟ್ಟ ಸಮುದಾಯ ಯಾವುದಾದರೂ ಇದ್ದರೆ ಅದು ಸರ್ವರಿಗೂ ಲೇಸನ್ನೇ ಬಯಸಿದ ಸಮುದಾಯ ವೀರಶೈವ ಲಿಂಗಾಯತ ಸಮುದಾಯ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾದ ಈಶ್ವರ ಖಂಡ್ರೆ ಪ್ರತಿಪಾದಿಸಿದರು.

# ಎರಡೂ ಕ್ಷೇತ್ರದಲ್ಲೂ ಗೆದ್ದು ತೋರಿಸ್ತೀವಿ: ಸಿಎಂ ಭರವಸೆ

• ಮಲ್ಲಮ್ಮ ನುಡಿ ವಾರ್ತೆ ದಾವಣಗೆರೆ



ನಾವು ಮಾಡಿದ ಜನಪರ ಕೆಲಸಗಳ, ಅಭಿವೃದ್ದಿ ಕೆಲಸಗಳ ಆಧಾರದಲ್ಲಿ ಮತ ಕೇಳುತ್ತಿದ್ದೇವೆ. ಆದರೆ, ನನಗೆ ಬೈದು ಮತ ಕೇಳುವ ದಾರಿದ್ರ್ಯ ಬಿಜೆಪಿಗೆ ಬಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿ, ಎರಡೂ ಕ್ಷೇತ್ರದಲ್ಲೂ ಗೆದ್ದು ತೋರಿಸ್ತೀವಿ ಎಂದು ಭರವಸೆ ವ್ಯಕ್ತಪಡಿಸಿದರು.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಸಂಬಂಧ ಭಾರೀ ಬಹಿರಂಗ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಆರು ಬಾರಿ ಶಾದಕರಾಗಿದ್ದ ಶಾಮನೂರು ಶಿವಶಂಕರಪ್ಪ ಅವರು ಇದೇ ಕ್ಷೇತ್ರದಿಂದ ನಾಲ್ಕು ಬಾರಿ ಗೆದ್ದು ಕ್ಷೇತ್ರದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ. ಈ ಕ್ಷೇತ್ರದಲ್ಲಿ ನಡೆಯುತ್ತಿರುವ ಇನ್ನೂ ಹಲವಾರು ಅಭಿವೃದ್ಧಿ ಕೆಲಸಗಳು ಸರಾಗವಾಗಿ ಮುಂದುವರೆಯಲು ಸಮರ್ಥ್ ಶಾಮನೂರು ಅವರನ್ನು ಸಮರ್ಥವಾಗಿ ಗೆಲ್ಲಿಸಿ ಮುನ್ನಡೆಸಿ ಎಂದು ಮನವಿ ಮಾಡಿದರು.

ಒಂಬತ್ತು ವರ್ಷ ರಾಜ್ಯದಲ್ಲಿ ಅಧಿಕಾರ ನಡೆಸಿದ ಬಿಜೆಪಿ ಅಭಿವೃದ್ಧಿ ಮಾಡಲಿಲ್ಲ. ಹೀಗಾಗಿ ತಾವು ಮಾಡಿದ ಕೆಲಸಗಳ ಆಧಾರದಲ್ಲಿ ಮತ ಕೇಳಲು ಸಾಧ್ಯವಾಗದೆ ನನಗೆ ಬಯ್ಯುತ್ತಾ ಮತ ಕೇಳುತ್ತಿದ್ದಾರೆ. ನಾನು ದುರ್ಬಲರ, ಬಡವರ ಪರವಾಗಿ ಕಾರ್ಯಕ್ರಮ ರೂಪಿಸಿ ಜಾರಿ ಮಾಡಿದ್ದೇನೆ ಎನ್ನುವ ಕಾರಣದಿಂದಲೇ ನನ್ನನ್ನು ಬೈಯ್ದು ಓಟು ಕೇಳುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಕಾಂಗ್ರೆಸ್ ಎಲ್ಲಾ ಜಾತಿ, ಧರ್ಮದವರನ್ನೂ ಜೊತೆಗೆ ಕೊಂಡೊಯ್ಯುವ ಪಕ್ಷ. ಜಾತಿ ಜಾತಿಗಳ ನಡುವೆ, ಧರ್ಮ ಧರ್ಮಗಳ ನಡುವೆ ವಿಭಜನೆ ತಂದು ಓಟು ಕೇಳುವ ಕೆಟ್ಟ ರಾಜಕಾರಣವನ್ನು ನಾವು ಮಾಡುವುದಿಲ್ಲ. ಕೋಮುಗಲಭೆಗಳನ್ನು ಸಂಘಟಿಸಿ ರಾಜಕಾರಣ ಮಾಡುವುದು ಬಿಜೆಪಿಯ ಜಾಯಮಾನ ಎಂದರು.

ಯಡಿಯೂರಪ್ಪ ಮತ್ತು ಬಿ.ವೈ.ವಿಜಯೇಂದ್ರ ಅವರು 25ಸಾವಿರ ಕೋಟಿ ಹಣ ಲೂಟಿ ಮಾಡಿರುವ ಭ್ರಷ್ಟರು ಎಂದು ಬಿಜೆಪಿಯವರೇ ಆಗಿದ್ದ ಬಸವನಗೌಡ ಪಾಟೀಲ್ ಯತ್ನಾಳ್ ಅವರೇ ನೇರವಾಗಿ ಆರೋಪಿಸಿದ್ದಾರೆ. ಈ ಯಡಿಯೂರಪ್ಪ ಮತ್ತು ವಿಜಯೇಂದ್ರ ನಾಚಿಕೆ ಬಿಟ್ಟು ನನ್ನ ಬಗ್ಗೆ ಆರೋಪ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಶಾಮನೂರು ಶಿವಶಂಕರಪ್ಪ ಮತ್ತು ಎಚ್.ವೈ.ಮೇಟಿ ಇಬ್ಬರೂ ಪ್ರಾಮಾಣಿಕ ನಾಯಕರು. ಇವರಿಬ್ಬರ ನಿಧನದಿಂದ ನಡೆಯುತ್ತಿರುವ ಉಪ ಚುನಾವಣೆಯಲ್ಲಿ ಎರಡೂ ಕ್ಷೇತ್ರದಲ್ಲಿ ಬಿಜೆಪಿ ಸೋತು ಕಾಂಗ್ರೆಸ್ ಗೆಲ್ಲುವುದು ಶತಸಿದ್ಧ ಎಂದು ಭರವಸೆ ವ್ಯಕ್ತಪಡಿಸಿದರು.

ಕಾಂಗ್ರೆಸ್ ನುಡಿದಂತೆ ನಡೆದು, ಕೊಟ್ಟ ಭರವಸೆಗಳನ್ನು ಈಡೇರಿಸಿ ನಿಮ್ಮ ಮುಂದೆ ನಿಂತಿದ್ದೇವೆ. ಕೆಲಸ ಮಾಡಿ ಬಂದು ನಿಮ್ಮಿಂದ ಅಭಿವೃದ್ಧಿ ಪರವಾಗಿ ಮತ ಕೇಳುತ್ತಿದ್ದೇವೆ. ಐದಕ್ಕೆ ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದ್ದೇವೆ. ಈ ಕಾರಣದಿಂದ ನಮ್ಮ ಕೆಲಸಕ್ಕೆ ಕೈ ಹಿಡಿದು ಸಹಕರಿಸಿ ಎಂದರು.

# ಬಿಜೆಪಿ ಕಾರ್ಯಾಲಯದಲ್ಲಿ ಸಂಸ್ಥಾಪನಾ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಕ್ಷದ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸಲಾಯಿತು. ಭಾರತಮಾತೆ ಹಾಗೂ ಪಕ್ಷದ ಸಂಸ್ಥಾಪನೆ ಮಾಡಿದ ಮಹನೀಯರ ಭಾವಚಿತ್ರಗಳಿಗೆ ಪುಷ್ಪಾಂಜಲಿ ಸಲ್ಲಿಸಲಾಯಿತು. ಕಾರ್ಯಕರ್ತರು ಉತ್ಸಾಹದಿಂದ ಬಿಜೆಪಿ ಪಕ್ಷದ ಧ್ವಜವನ್ನು ಪ್ರದರ್ಶಿಸಿ ದೇಶಾಭಿಮಾನದ ಘೋಷಣೆಗಳನ್ನು ಕೂಗಿದರು.

ಈ ವೇಳೆ ಮಾತನಾಡಿದ ಸಂಸದ ರಮೇಶ ಜಿಗಜಿಣಗಿ ಮಾತನಾಡಿ, ರಾಷ್ಟ್ರಾಭಿಮಾನವನ್ನೇ ಉಸಿರಾಗಿಸಿಕೊಂಡಿರುವ ಬಿಜೆಪಿ ಇಂದು ವಿಶ್ವದಲ್ಲಿಯೇ ಅತ್ಯಂತ ದೊಡ್ಡ ರಾಜಕೀಯ ಪಕ್ಷವಾಗಿದೆ, ಶ್ಯಾಂ ಪ್ರಸಾದ್ ಮುಖರ್ಜಿ, ಪಂ.ದೀನದಯಾಳ ಉಪಾಧ್ಯಾಯ ಅವರಂತಹ ಶ್ರೇಷ್ಠ ಚಿಂತನೆಯ ಸ್ವರೂಪದಲ್ಲಿ ಉದಯಿಸಿದ ಬಿಜೆಪಿ ಇಂದಿಗೂ ಜನ ಸೇವೆಯನ್ನೇ ಉಸಿರಾಗಿಸಿಕೊಂಡಿದೆ, ಪಕ್ಷ ಇಂದು ಹೆಮ್ಮರವಾಗಿ ಬೆಳಗಿದೆ, ಬಿಜೆಪಿಯ ದೇಶನಿಷ್ಠೆಯ ಫಲವಾಗಿಯೇ ಇಂದು ಎಲ್ಲ ರಾಜ್ಯಗಳಲ್ಲಿ ಬಿಜೆಪಿ ಅರಳಿದೆ, ಉತ್ತಮ ಆಡಳಿತ ನೀಡುವ ಮೂಲಕ ಕೇಂದ್ರದ ಬಿಜೆಪಿ ಸರ್ಕಾರ ವಿಶ್ವದಲ್ಲಿಯೇ ದೊಡ್ಡ ಹೆಸರು ಮಾಡಿದೆ ಎಂದರು. ಬಿಜೆಪಿ ಪಕ್ಷ ನಮ್ಮ ಉಸಿರು, ಕಾರ್ಯಕರ್ತರು ನಮ್ಮ ಆಸ್ತಿ, ಈ ಪವಿತ್ರ ಪಕ್ಷದಲ್ಲಿರುವ ಅವಕಾಶ ನನಗೆ ಒದಗಿ ಬಂದಿರುವುದು ನನ್ನ ಪೂರ್ವಜನ್ಮದ ಪುಣ್ಯ ಎಂದರು.

ಬಿಜೆಪಿ ಮುಖಂಡ ಚಂದ್ರಶೇಖರ ಕವಟಗಿ ಮಾತನಾಡಿದರು. ಪ್ರಮುಖರಾದ ವಿಜುಗೌಡ ಪಾಟೀಲ, ಸಂಜೀವ ಐಹೊಳೆ, ವಿವೇಕಾನಂದ ಡಬ್ಬಿ, ವಿಜಯಕುಮಾರ ಕೊಡಗಿನೂರ, ಹರ್ಷಗೌಡ ಪಾಟೀಲ, ವಾರೀಶ ಕುಲಕರ್ಣಿ ಪಾಲ್ಗೊಂಡಿದ್ದರು.

# ಬಿಜೆಪಿಯಿಂದಲೂ ಇದೀಗ ಹಳ್ಳಿಗೆ ನಡೆಯಿರಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಬಿಜೆಪಿ ಸಂಸ್ಥಾಪನಾ ದಿನದ ಅಂಗವಾಗಿ ಏಪ್ರಿಲ್ 7 ರಿಂದ 12 ರವರೆಗೆ 'ಹಳ್ಳಿಗೆ ನಡೆಯಿರಿ' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ತಿಳಿಸಿದ್ದಾರೆ.

ಬಿಜೆಪಿ ಸಂಸ್ಥಾಪನಾ ದಿನದ ಅಂಗವಾಗಿ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅವರು ಮಾಧ್ಯಮಗಳ ಜೊತೆ ಮಾತನಾಡಿದರು.

'ಹಳ್ಳಿಗೆ ನಡೆಯಿರಿ' ಎಂಬ ಕಾರ್ಯಕ್ರಮವನ್ನು ದೊಡ್ಡ ರೀತಿ ಆಯೋಜಿಸಲಾಗಿದೆ. ಸಾರ್ವಜನಿಕ ಸ್ಥಳದಲ್ಲಿ ಸ್ವಚ್ಛತೆ ಹಮ್ಮಿಕೊಳ್ಳಲಾಗಿದೆ. ಭಾರತೀಯ ಜನತಾ ಪಕ್ಷಕ್ಕಾಗಿ ದುಡಿದವರಿಗೆ ಗೌರವ ಸಲ್ಲಿಸುವ ಕಾರ್ಯಕ್ರಮಗಳನ್ನು ನಡೆಸಲಾಗುವುದು. ಇದೇ ವೇಳೆ ಮೋದಿ ಸರ್ಕಾರದ ಯೋಜನೆಗಳನ್ನು ವ್ಯಾಪಕವಾಗಿ ಜನರಿಗೆ ಮುಟ್ಟಿಸಲಾಗುವುದು. ಫಲಾನುಭವಿಗಳ ಸಂಪರ್ಕ ಅಭಿಯಾನ ಮಾಡಲಾಗುವುದು ಎಂದರು.

ಅತ್ಯಂತ ಹುರುಪಿನಿಂದ ಇಂದು ಸ್ಥಾಪನಾ ದಿನವನ್ನು ಆಚರಿಸುತ್ತಿದ್ದೇವೆ. ದೇಶದ ಹಲವು ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದೆ. ದೇಶದಲ್ಲೂ ಆಡಳಿತದಲ್ಲಿದೆ. 1975 ರಲ್ಲಿ ಇಂದಿರಾಗಾಂಧಿ ಅವರ ದುರಾಡಳಿತದಿಂದ, ಸರ್ವಾಧಿಕಾರದಿಂದ ತುರ್ತು ಪರಿಸ್ಥಿತಿ ಬಂತು. ಅದನ್ನು ವಿರೋಧಿಸಿ ಆಗಿನ ಜನಸಂಘ ಜನತಾ ಪಾರ್ಟಿಯಲ್ಲಿ ವಿಲೀನವಾಯಿತು. ವಿ.ಪಿ.ಸಿಂಗ್ ಅವರ ಸರ್ಕಾರದಲ್ಲಿ ಜನಗಳಿಗೆ ಒಳಿತು ಮಾಡಲು ಆಗಲ್ಲ. ಜಾತೀಯತೆ ತರ್ತಾರೆ. ನಮ್ಮ ಸಿದ್ಧಾಂತಕ್ಕೆ ಕೊಡಲಿ ಪೆಟ್ಟು ಬರುತ್ತೆ ಅಂತ ಬಿಜೆಪಿ ಆರಂಭವಾಯಿತು. ಅಟಲ್ ಬಿಹಾರಿ ವಾಜಪೇಯಿ, ಎಲ್ ಕೆ ಅಡ್ವಾಣಿ, ಮುರುಳಿ ಮನೋಹರ ಜೋಷಿ ಅವರು ನೇತೃತ್ವ ವಹಿಸಿದ್ದರು. ಇಂತಹ ಪಕ್ಷ ಇಂದು ಆಲದ ಮರದ ರೀತಿ ಇಡೀ ದೇಶದಲ್ಲಿ ವ್ಯಾಪಿಸಿದೆ. ಅತಿದೊಡ್ಡ ಪಕ್ಷದ ಸದಸ್ಯ ಎಂದು ಹೇಳಿಕೊಳ್ಳಲು ಹೆಮ್ಮೆ ಇದೆ ಎಂದರು.

# ಬೇಸಿಗೆಯಲ್ಲಿ ನೀರನ್ನು ವ್ಯರ್ಥ ಮಾಡಬೇಡಿ ಸ್ವಾಮಿ..!

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ




ಕಂಪ್ಲಿ ತಾಲೂಕಿನ ಹೊಸ ನೆಲ್ಲೂಡಿ ಗ್ರಾಮ ಪಂಚಾಯತಿ ಹತ್ತಿರ ಇರುವ ಟ್ಯಾಂಕರ್ ನಲ್ಲಿ ಸತತವಾಗಿ ನೀರು ಸೋರಿಕೆ ನೋಡಿಯೂ ಕಣ್ಣುಮುಚ್ಚಿ ಕುಳಿತ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು.

ಹೌದು ಬೇಸಿಗೆ ಕಾಲದಲ್ಲಿ ನೀರು ಸಿಗುವುದೇ ಕಷ್ಟ ಆದರೆ ಈ ರೀತಿ ನೀರನ್ನು ವ್ಯರ್ಥ ಮಾಡುವ ಸ್ಥಿತಿಯನ್ನು ನೋಡಿದ್ರೆ ನಮಗೆ ತುಂಬಾ ನೋವಾಗುತ್ತಿದೆ. ಆದರೆ ಅಧಿಕಾರಗಳೇ ಇದ್ದಕ್ಕೆ ನೀವೇ ಉತ್ತರ ಕೊಡ್ಬೇಕು ಸ್ವಾಮಿ.

ಹೊಸ ನೆಲ್ಲೂಡಿ ಗ್ರಾಮ ಪಂಚಾಯಿತಿ ಹತ್ತಿರ ಇರುವ ನೀರಿನ ಟ್ಯಾಂಕರ್ ನಲ್ಲಿ ಸತತ 24*7 ನೀರು ವ್ಯರ್ಥವಾಗುತ್ತಿದ್ದು, ಪಕ್ಕದಲ್ಲೇ ಗ್ರಾಮ ಪಂಚಾಯಿತಿ ಕಛೇರಿ ಇದ್ದರೂ ಸಹ ಯಾವುದೇ ಪ್ರಯೋಜನವಿಲ್ಲ.

ಬೇಸಿಗೆ ಕಾಲದಲ್ಲಿ ಕುಡಿಯಲು ನೀರು ಸಿಗುವುದೇ ಜನರು ಪರದಾಡುತ್ತಾರೆ, ಆದರೆ ಇಲ್ಲಿ ಈ ಅಧಿಕಾರಗಳು ಮತ್ತು ಸಿಬ್ಬಂದಿ ವರ್ಗದವರು ಈ ಸ್ಥಳವನ್ನು ನೋಡಿಯೂ ನೋಡದಂತೆ ಕಣ್ಣುಮುಚ್ಚಿ ಕುಳಿತಿದ್ದಾರೆ ಏಕೆ ಎನ್ನುವುದು ದೊಡ್ಡ ಯಕ್ಷ ಪ್ರಶ್ನೆಯಾಗಿದೆ. ನೀರು ಉಳಿಸಿ ಮರವ ಬೆಳೆಸಿ ಎಂಬ ಸರ್ಕಾರದ ಘೋಷಣೆಗಳನ್ನು ಗಾಳಿಗೆ ತೂರಿ, ಬೇಸಿಗೆ ಕಾಲದಲ್ಲಿ ನೀರು ಮನೆ-ಮನೆಗೆ ಹೋಗುವುದೇ ತುಂಬಾ ಕಷ್ಟ ಸಂದರ್ಭದಲ್ಲಿ ನೀರು ಈ ರೀತಿಯಾಗಿ ವ್ಯರ್ಥವಾಗುತ್ತಿದ್ದ ಸ್ಥಿತಿಯನ್ನು ನೋಡಿದ್ರೆ ತುಂಬಾ ಬೇಸರವಾಗುತ್ತಿದೆ. ನಲ್ಲಿಯಲ್ಲಿ ನೀರು ವ್ಯರ್ಥವಾಗುತ್ತಿದ್ದ ಸ್ಥಿತಿಯನ್ನು ನೋಡಿ ದಾರಿಯಲ್ಲಿ ಹೋಗುವಾಗ ಜನರು ಅದಕ್ಕೆ ಒಂದು ಕಟ್ಟಿಗೆ ಕೋಲನ್ನು ಇಟ್ಟು ನೀರನ್ನು ನಿಲ್ಲಿವ ಪ್ರಯತ್ನ ಮಾಡಿದ್ದಾರೆ, ಆದರೆ ಯಾವುದೇ ಪ್ರತಿಫಲ ಇಲ್ಲ. ರಾತ್ರಿಯಿಂದ ಮುಂಜಾನೆವರೆಗೂ ನೀರು ಸರಾಗವಾಗಿ ವ್ಯರ್ಥವಾಗುತ್ತಿವೆ.

ಗ್ರಾಮ ಪಂಚಾಯಿತಿ ಹತ್ತಿರ ಇರುವ ಟ್ಯಾಂಕರ್ ಪರಿಸ್ಥಿತಿ ಹೇಗಿದ್ದರೆ, ಇನ್ನೂ ಗ್ರಾಮದಲ್ಲಿರುವ ಟ್ಯಾಂಕರ್ ಪರಿಸ್ಥಿತಿ ಹೇಗಿರಬಹುದು ಅನ್ನುವುದೇ ಅರ್ಥವಾಗುತ್ತಿಲ್ಲ! ಬೇಸಿಗೆಯಲ್ಲಿ ನೀರು ವ್ಯರ್ಥ ಮಾಡುವುದರಿಂದ ಬಹಳಷ್ಟು ತೊಂದರೆ ಆಗುತ್ತದೆ, ತಕ್ಷಣವೇ ಅಧಿಕಾರಿಗಳು ಎಚ್ಚೆತ್ತುಕೊಂಡು ಇಂತಹ ದುರ್ಘಟನೆಗಳು ನಡೆಯದಂತೆ ಸೂಕ್ತ ಕ್ರಮ ವಹಿಸಬೇಕೆಂಬುದೇ ನಮ್ಮ ಪತ್ರಿಕೆ ಆಶಯವಾಗಿದೆ.

# ಮೊಬೈಲ್ ಬಳಕೆಯಲ್ಲಿ ಮಾಯವಾದ ಮಕ್ಕಳ ಆಟಿಕೆ



**ಆಧುನಿಕ-ತಂತ್ರ**

● ಡಾ. ಯಂಕನಗೌಡ ಎಸ್ ಪಾಟೀಲ್
ಕೆಂಭಾವಿ



ಮಕ್ಕಳಾಟವು ಚಂದ, ಮತ್ತೆ ಯೌವನ ಚಂದ" ಎಂಬ ಜಾನಪದ ಸಾಲುಗಳು ಬಾಲ್ಯದ ಮುಗ್ಧತೆ, ಯೌವನದ ಉತ್ಸಾಹ ಮತ್ತು ಮುಪ್ಪಿನ ಅನುಭವವನ್ನು ಅದ್ಭುತವಾಗಿ ತೆರೆದಿಡುತ್ತವೆ. ಬಾಲ್ಯದ ಬಾಲಕೃಷ್ಣನ ಲೀಲೆಯಂತಿರುವ ತಂಟೆ-ತಕರಾರುಗಳು, ತುಂಟಾಟಗಳು ಮನಸ್ಸಿಗೆ ಮುದ ನೀಡುತ್ತಿದ್ದವು. ಮಕ್ಕಳ ದೈಹಿಕ, ಮಾನಸಿಕ, ಬೌದ್ಧಿಕ ಬೆಳವಣಿಗೆಯ ಜೊತೆಗೆ ಸಾಮಾಜಿಕ ಕೌಶಲ್ಯ ಹಾಗೂ ಸೃಜನಶೀಲತೆಯನ್ನು ಉತ್ತೇಜಿಸುವಲ್ಲಿ ಗ್ರಾಮೀಣ ಸೊಗಡಿನ ಕುಂಟೆಬಿಲ್ಲೆ, ಕಣ್ಣುಮುಚ್ಚಾಲೆ, ಕಬಡ್ಡಿ, ಚಿಣಿದಾಂಡು, ಗೋಲಿ ಗುಂಡು, ಬಿಲ್ಲು-ಬಾಣ, ಬುಗುರಿ, ಲಗೋರಿ, ಮರಕೋತಿ, ಹಗ್ಗದಾಟ, ಹಾವು-ಏಣಿ ಆಟಗಳು ಪ್ರಮುಖವಾಗಿದ್ದವು. ಹಳ್ಳದ ದಂಡೆಯಲ್ಲಿ ಮರಳಿನ ಗೂಡು ಕಟ್ಟಿ, ಕಾಗದದ ದೋಣಿ ಬಿಟ್ಟು, ಒಬ್ಬರನ್ನೊಬ್ಬರು ಹಿಡಿಯುವ ಓಟದ ಆಟಗಳು ಹಾಗೂ ಅಜ್ಜ-ಅಜ್ಜಿಯರ ಮಡಿಲಲ್ಲಿ ಕುಳಿತು ರಾತ್ರಿ ಕಥೆ ಕೇಳುವುದು ಅಂದಿನ ಸಾಮಾನ್ಯ ದೃಶ್ಯಗಳಾಗಿದ್ದವು.

ಹಳ್ಳಿಗಳಲ್ಲಿ ವಿದ್ಯುತ್ ಹೋದಾಗ ಆಕಾಶದ ನಕ್ಷತ್ರಗಳನ್ನು ನೋಡುವುದು, ನೆರೆಹೊರೆಯವರ ಮನೆಗೆ ಯಾವುದೇ ಮುಜುಗರವಿಲ್ಲದೆ ಹೋಗುವುದು, ಹಬ್ಬ-ಹರಿದಿನ ಹಾಗೂ ಜಾತ್ರೆ-ಉತ್ಸವಗಳಲ್ಲಿ ಎಲ್ಲರೂ ಸೇರಿ ಹಬ್ಬದೂಟ ಉಂಡು ಸಂಭ್ರಮಿಸುವ ಸುಖ ಇಂದು ಸದ್ದುಗದ್ದಲವಿಲ್ಲದೆ ಕಣ್ಮರೆಯಾಗುತ್ತಿದೆ. ಕಂದಮ್ಮಗಳ ಕನಸಿಗೆ ಕೊಳ್ಳಿ ಇಟ್ಟು, ಬಾಲ್ಯದ ಬದುಕಿನೊಂದಿಗೆ ಚೆಲ್ಲಾಟವಾಡಿ, ಮನೆ-ಮನಗಳ ಸ್ವಾಸ್ಥ್ಯವನ್ನು ಹಾಳುಗೆಡವಿ ಅಡ್ಡದಾರಿ ಹಿಡಿಸುವ ಮೊಬೈಲ್ (ಜಂಗಮವಾಣಿ) ಬಳಕೆಗೆ ಇತಿಮಿತಿ ಇರಲಿ.

ಮೊಬೈಲ್ ಮತ್ತು ಇಂಟರ್ನೆಟ್ ಬರುವ ಮೊದಲು ಬಾಲ್ಯವು ಅತ್ಯಂತ ಸುಂದರವಾಗಿತ್ತು. ಮುಗ್ಧ ಮನಸ್ಸಿನ ನೆನಪಿನ ಬುತ್ತಿ, ಪ್ರಕೃತಿಯೊಂದಿಗಿನ ಸಾಮರಸ್ಯ, ಸರಳತೆ ಹಾಗೂ ಸಂಕೋಚವಿಲ್ಲದ ಸ್ನೇಹ-ಸೌಜನ್ಯತೆ ಅಲ್ಲಿತ್ತು. ರೇಡಿಯೋದಲ್ಲಿ ಬರುವ ಹಾಡುಗಳನ್ನು ಕೇಳುತ್ತಾ, ಚಂದಮಾಮ, ಬಾಲಮಿತ್ರ ಪತ್ರಿಕೆಗಳನ್ನು ಓದುತ್ತಾ, ಕೊನೆಯ ಪುಟದಲ್ಲಿ ಬರುವ ಒಗಟುಗಳನ್ನು ಬಿಡಿಸುವ ಆ ದಿನಗಳಲ್ಲಿ ಸಮಯ ನಿಧಾನವಾಗಿ ಸಾಗುತ್ತಿತ್ತು; ಬದುಕು ಬಹಳ ಅರ್ಥಪೂರ್ಣವಾಗಿತ್ತು. ಕುಟುಂಬದಲ್ಲಿ ಸುಖ-ಸಂತೋಷ ಅಪಾರವಾಗಿತ್ತು. ಮಾಹಿತಿ ತಂತ್ರಜ್ಞಾನ ಬೆಳೆದಂತೆಲ್ಲಾ ಜೀವನಶೈಲಿ ಬದಲಾಗಿ ಉಡುಗೆ-ತೊಡುಗೆಗಳು ಬದಲಾದವು. ಸಂಸ್ಕಾರ, ಸಂಸ್ಕೃತಿ, ಆಚಾರ-ವಿಚಾರ ಹಾಗೂ ರೂಢಿ-ಸಂಪ್ರದಾಯಗಳು ಮೊಬೈಲ್‌ನಲ್ಲಿ ಮಾಯವಾದವು.

ಜಂಗಮವಾಣಿ ಜನರ ನಿದ್ದೆಗೆಡಿಸಿದೆ ಎಂಬುದಕ್ಕೆ ಡಾ. ಸಿದ್ದಯ್ಯ ಪುರಾಣಿಕರ ಸುಪ್ರಸಿದ್ಧ ಸಾಲುಗಳು ನೆನಪಾಗುತ್ತವೆ:

**"ವಿದ್ಯೆ ಬಂತು ವಿನಯ ಹೋಯ್ತು,**
**ಬುದ್ಧಿ ಬಂತು ಶ್ರದ್ಧೆ ಹೋಯ್ತು,**
**ಸಮೃದ್ಧಿ ಬಂತು ಸಂಸ್ಕೃತಿ ಹೋಯ್ತು,**
**ವಿಜ್ಞಾನ ಬಂತು ಸಮಾಧಾನ ಹೋಯ್ತು,**
**ಶರೀರ ಸ್ವಾಸ್ಥ್ಯ ಬಂತು ಚಿತ್ತ ಸ್ವಾಸ್ಥ್ಯ ಹೋಯ್ತು,**
**ದೀರ್ಘಾಯುಷ್ಯ ಬಂತು ಜೀವನ ಸ್ವಾರಸ್ಯ ಹೋಯ್ತು."**

ಜ್ಞಾನದ ಲಭ್ಯತೆ ಹೆಚ್ಚಾದಂತೆ ಮಾನವೀಯ ಮೌಲ್ಯಗಳು ಕಣ್ಮರೆಯಾಗುತ್ತಿವೆ. ಮಕ್ಕಳಲ್ಲಿ ಹೆಚ್ಚುತ್ತಿರುವ ಮೊಬೈಲ್ ಗೀಳು ನೈಜ ಜಗತ್ತಿನ ಸಂಪರ್ಕವನ್ನೇ ನುಂಗಿ ನೀರು ಕುಡಿದು, ಮುಗ್ಧ ಹೃದಯಗಳಿಗೆ ಮಗ್ಗಲು ಮುಳ್ಳಾಗಿ ಚುಚ್ಚುತ್ತಿದೆ. ಇದು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವ ಪ್ರಯುಕ್ತ ನಗರಗಳಲ್ಲಿ 'ಮೊಬೈಲ್ ಡಿ-ಅಡಿಕ್ಷನ್' (ವ್ಯಸನ ಮುಕ್ತ) ಕೇಂದ್ರಗಳು ತಲೆ ಎತ್ತುತ್ತಿವೆ. ಒಮ್ಮೆ ಮೊಬೈಲ್‌ಗೆ ದಾಸರಾದರೆ ಮಕ್ಕಳನ್ನು ಅದರಿಂದ ಹೊರತರುವುದು ತುಂಬಾ ಕಷ್ಟದ ಕೆಲಸ. ಡಿಜಿಟಲ್ ವ್ಯಸನಕ್ಕೆ ಮುಕ್ತಿ ನೀಡಲು, 16 ವರ್ಷದೊಳಗಿನ ಮಕ್ಕಳ ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಬಳಕೆಗೆ ಸಂಪೂರ್ಣ ನಿಷೇಧ ಹೇರುವ ಹೊಸ ಕರಡು ನೀತಿಯನ್ನು ಜಾರಿಗೆ ತರಲು ಮುಂದಾಗಿರುವ ಕರ್ನಾಟಕ ಸರ್ಕಾರದ ಚಿಂತನೆಗೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಆಧುನಿಕತೆಯ ಭರಾಟೆಯಲ್ಲಿ ಅತಿಯಾದ ಮೊಬೈಲ್ ಬಳಕೆ ಮತ್ತು ಸಾಮಾಜಿಕ ಮಾಧ್ಯಮದ ಪ್ರಭಾವದಿಂದ ಮುಕ್ತರಾಗಿ ಮಕ್ಕಳು ಮಾನಸಿಕ ಶಾಂತಿ ಕಂಡುಕೊಳ್ಳಲು, ಮೊದಲು ಕುಟುಂಬದ ಸದಸ್ಯರು ತಮ್ಮ ಮೊಬೈಲ್ ಬಳಕೆಯನ್ನು ಕಡಿಮೆ ಮಾಡಬೇಕು. ದಿನದ ಕೆಲವು ಗಂಟೆಗಳಾದರೂ ಫೋನ್ ಇಲ್ಲದೆ ಇರುವುದು ಮತ್ತು ವಾರಕ್ಕೊಮ್ಮೆ ಸಾಮಾಜಿಕ ಜಾಲತಾಣಗಳಿಂದ ದೂರವಿರುವುದು ಉತ್ತಮ. ಬದಲಾದ ಜಗತ್ತಿನಲ್ಲಿ ಜನರು ವೈಜ್ಞಾನಿಕ ಮನೋಭಾವದೊಂದಿಗೆ ಜಂಗಮವಾಣಿಯನ್ನು ಜಾಗರೂಕತೆಯಿಂದ ಬಳಸಬೇಕಿದೆ. "ಬೆಳೆಯುವ ಸಿರಿ ಮೊಳಕೆಯಲ್ಲಿ" ಎಂಬಂತೆ ಮಕ್ಕಳು ಬಾಲ್ಯವನ್ನು ಆನಂದಿಸಿ, ಅಕ್ಷರಾಭ್ಯಾಸದಲ್ಲಿ ತೊಡಗಿ ಜ್ಞಾನಸಂಪನ್ನರಾಗಲಿ. "ಇಂದಿನ ಮಕ್ಕಳು ನಾಳಿನ ಪ್ರಜೆಗಳು". ಬಾಲ್ಯದ ಆಟೋಟಗಳು ಮತ್ತೆ ಮರುಕಳಿಸಲಿ; ಸ್ವಾವಲಂಬಿ ಹಾಗೂ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಹೊಸ ತಲೆಮಾರಿನ ಮಕ್ಕಳು ಮುಂದಾಗಲಿ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)